24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 143 | ನವದೆಹಲಿ | ಬೆಲೆ ₹10 | ನವಂಬರ್ 20, 2026, ಶುಕ್ರವಾರ



ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ



ಡಾ. ಜಿ. ಪರಮೇಶ್ವರ
ಮಾನ್ಯ ಉಪಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

ಸಮೃದ್ಧ ಗ್ರಾಮೀಣ ಕರ್ನಾಟಕಕ್ಕೆ

₹16,000 ಕೋಟಿ ಬೃಹತ್ ಕೊಡುಗೆ!

ಮುಖ್ಯಮಂತ್ರಿ ಗ್ರಾಮೀಣ ರಸ್ತೆ ಸಂಪರ್ಕ ಯೋಜನೆ

ಅನುದಾನ: ₹10,000 ಕೋಟಿ
15,000 ಕಿ.ಮೀ. ರಸ್ತೆ ಅಭಿವೃದ್ಧಿ

ಪ್ರಮುಖ ಕಾಮಗಾರಿಗಳು:

- **₹7,000 ಕೋಟಿ:** ಹದಗೆಟ್ಟ ಬಿ.ಟಿ (ಡಾಂಬರು) ರಸ್ತೆಗಳ ಗುರುತಿಸುವಿಕೆ ಮತ್ತು ಗುಣಮಟ್ಟದ ಪುನಶ್ಚೇತನ.
- **₹3,000 ಕೋಟಿ:** ಪ್ರಮುಖ ಗ್ರಾಮೀಣ ರಸ್ತೆಗಳ ಬಾಳಿಕೆ (Design Life) ಹೆಚ್ಚಿಸಲು ವೈಜ್ಞಾನಿಕ ಮರು-ಡಾಂಬರೀಕರಣ (Re-Surfacing).

ಯೋಜನೆಯ ಪ್ರಮುಖ ಉದ್ದೇಶಗಳು

- ಗ್ರಾಮ, ಗ್ರಾ.ಪಂ. ಮತ್ತು ತಾಲ್ಲೂಕು ಕೇಂದ್ರಗಳಿಗೆ ರಸ್ತೆ ಸಂಪರ್ಕ.
- ಶಾಲೆ, ಆಸ್ಪತ್ರೆ, ಮಾರುಕಟ್ಟೆಗಳಿಗೆ ರೈತರು ಹಾಗೂ ಸಾರ್ವಜನಿಕರಿಗೆ ಸುಗಮ ಹಾದಿ.
- ಕೃಷಿ ಉತ್ಪನ್ನಗಳ ಸಾಗಣೆ ಸುಗಮ; ಗ್ರಾಮೀಣ ಆರ್ಥಿಕತೆಗೆ ಬಲ.



ಶ್ರೀ ಈಶ್ವರ ಬಿ. ಖಂಡ್ರೆ,
ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು
ಇಲಾಖಾ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿರುವುದು.

ಮುಖ್ಯಮಂತ್ರಿ ಗ್ರಾಮೀಣ ರಸ್ತೆ ಸಂಪರ್ಕ ಯೋಜನೆ
(₹10,000 ಕೋಟಿ)

ಹಾಗೂ

ಮುಖ್ಯಮಂತ್ರಿ ಗ್ರಾಮೀಣಾಭಿವೃದ್ಧಿ ಯೋಜನೆ
(₹6,000 ಕೋಟಿ)

ಮಹತ್ವಾಕಾಂಕ್ಷೆ ಯೋಜನೆಗಳ ಪ್ರಾರಂಭೋತ್ಸವ

ದಿನಾಂಕ: 20.11.2026, ಶುಕ್ರವಾರ, ಬೆಳಗ್ಗೆ: 11.00 ಗಂಟೆಗೆ
ಸ್ಥಳ: ಬ್ಯಾಂಕ್ವೆಟ್ ಹಾಲ್, ವಿಧಾನಸೌಧ, ಬೆಂಗಳೂರು.

ಉದ್ಘಾಟನೆ

ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಘನ ಉಪಸ್ಥಿತಿ

ಡಾ. ಜಿ. ಪರಮೇಶ್ವರ
ಮಾನ್ಯ ಉಪ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಶ್ರೀ ಈಶ್ವರ ಬಿ. ಖಂಡ್ರೆ
ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು, ಕರ್ನಾಟಕ ಸರ್ಕಾರ

ಅಧ್ಯಕ್ಷತೆ

ಶ್ರೀ ರಿಜ್ವಾನ್ ಅರ್ಷದ್
ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರ ಸಚಿವರು, ಕರ್ನಾಟಕ ಸರ್ಕಾರ

ವಿಶೇಷ ಅತಿಥಿಗಳು

ಶ್ರೀ ಆರ್. ಅಶೋಕ್
ಮಾನ್ಯ ವಿರೋಧ ಪಕ್ಷದ ನಾಯಕರು, ಕರ್ನಾಟಕ ವಿಧಾನಸಭೆ

ಶ್ರೀ ಛಲವಾದಿ ನಾರಾಯಣ ಸ್ವಾಮಿ
ಮಾನ್ಯ ವಿರೋಧ ಪಕ್ಷದ ನಾಯಕರು
ಕರ್ನಾಟಕ ವಿಧಾನ ಪರಿಷತ್

ಕರ್ನಾಟಕ ಸರ್ಕಾರದ ಮಾನ್ಯ ಸಚಿವರುಗಳು, ಮಾನ್ಯ ಸಂಸದರು, ವಿಧಾನಸಭಾ ಮತ್ತು ವಿಧಾನ ಪರಿಷತ್ತಿನ ಮಾನ್ಯ ಶಾಸಕರುಗಳು ಹಾಗೂ ಆಯೋಗಗಳ ಮತ್ತು ನಿಗಮ ಮಂಡಳಿಗಳ ಅಧ್ಯಕ್ಷರುಗಳಿಗೆ ಮತ್ತು ಸದಸ್ಯರುಗಳಿಗೆ ಆತ್ಮೀಯ ಸ್ವಾಗತ

ಉಪಸ್ಥಿತಿ

ಡಾ. ಶಾಲಿನಿ ರಜನೀಶ್, ಭಾ.ಆ.ಸೇ.
ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ

ಮುಖ್ಯಮಂತ್ರಿ ಗ್ರಾಮೀಣಾಭಿವೃದ್ಧಿ ಯೋಜನೆ

ಅನುದಾನ: ₹6,000 ಕೋಟಿ
29,340 ಗ್ರಾಮಗಳ ಸಬಲೀಕರಣ

ಪ್ರಮುಖ ಕಾಮಗಾರಿಗಳು:


- **ಸಿಸಿ ರಸ್ತೆ & ಚರಂಡಿ:** ಗ್ರಾಮ ಠಾಣಾ (ವಿಸ್ತರಿತ ಗ್ರಾಮ ಠಾಣಾ ಸೇರಿ) ಪರಿಮಿತಿಯಲ್ಲಿ ಗುಣಮಟ್ಟದ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣ.
- **ಹೊಸ ರಸ್ತೆಗಳು:** DRRP ನಕ್ಷೆಯಲ್ಲಿ ಇಲ್ಲದ ಹೊಸ ಗ್ರಾಮೀಣ ರಸ್ತೆಗಳನ್ನು ಗುರುತಿಸಿ, ಚರಂಡಿ ಸಹಿತ ಕನಿಷ್ಠ 6 ಮೀಟರ್ ಅಗಲದ ಸುಗಮ ರಸ್ತೆ ನಿರ್ಮಾಣ.
- **ಕುಡಿಯುವ ನೀರು:** ಕೊಳವೆ ಬಾವಿ ಹಾಗೂ ಪೈಪ್‌ಲೈನ್ ವಿಸ್ತರಣೆ (ಪುನರಾವರ್ತನೆಯಾಗದಂತೆ).

ಯೋಜನೆಯ ವಿಶೇಷತೆ & ವ್ಯಾಪ್ತಿ:

- ರಾಜ್ಯದ ಶೇ. 61.33 ಗ್ರಾಮೀಣ ಜನಸಂಖ್ಯೆಗೆ ಅನುಕೂಲವಾಗುವಂತೆ ಗ್ರಾಮ ಪಂಚಾಯಿತಿಗಳ ಪರಿಮಿತಿಯಲ್ಲಿನ ಗ್ರಾಮಗಳಲ್ಲಿ ಮೂಲ ಸೌಕರ್ಯಗಳ ಅಭಿವೃದ್ಧಿ.
















ಎಲ್ಲಾ ವೈಯಕ್ತಿಕ ಮತ್ತು ಸಾಮೂಹಿಕ ಚಟುವಟಿಕೆಗಳಲ್ಲಿ ಉನ್ನತಿ ಸಾಧಿಸಲು ಪ್ರಯತ್ನಿಸಿ ದೇಶದ ಪ್ರಗತಿಗಾಗಿ ಶ್ರಮಿಸುವುದು; - ಪ್ರತಿಯೊಬ್ಬ ಭಾರತೀಯರ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

ಪಂಕಜ್ ಕುಮಾರ್ ಪಾಂಡೆ, ಭಾ.ಆ.ಸೇ
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ನಿತ್ಯ ಪಂಚಾಂಗ 20.11.2026 ಶುಕ್ರವಾರ



ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯನ ಶರದ್ ಋತು/ ಚಾಂದ್ರಮಾನ ಆಶ್ವಯುಜ-ಕಾರ್ತಿಕ ಮಾಸ

ಕಾರ್ತಿಕ ಶುದ್ಧ, ಏಕಾದಶಿ, ಉತ್ತರಾಬಾದ್ರಾ ನಕ್ಷತ್ರ, ಸರ್ವತ್ರ/ಪ್ರಭೋದಿನಿ ಏಕಾದಶಿ, ತಪ್ತ ಮುದ್ರಾದಾರಣ, ಭೀಷ್ಮಪಂಚಕ ವ್ರತಾರಂಭ

ದಿನ	ರಾಹುಕಾಲ	ಯಮಗಂಡ	ಗುಳಿಕಕಾಲ
	ರಾಹುಕಾಲ	ಯಮಗಂಡ	ಗುಳಿಕಕಾಲ
ಭಾನು	4.30 – 6.00	12.00 – 1.30	3.00 – 4.30
ಸೋಮ	7.30 – 9.00	10.30 – 12.00	1.30 – 3.00
ಮಂಗಳ	3.00 – 4.30	9.00 – 10.30	12.00 – 1.30
ಬುಧ	12.00 – 1.30	7.30 – 9.00	10.30 – 12.00
ಗುರು	1.30 – 3.00	6.00 – 7.30	9.00 – 10.30
ಶುಕ್ರ	10.30 – 12.00	3.00 – 4.30	7.30 – 9.00
ಶನಿ	9.00 – 10.30	1.30 – 3.00	6.00 – 7.30

ಮೇಕೆದಾಟು ಯೋಜನೆ

ದೇವೇಗೌಡರ ಬೆಂಬಲ, ಕೆಲವರಿಗೆ ಅಸೂಯೆ: ಸಿಎಂ ಡಿ.ಕೆ.ಶಿವಕುಮಾರ್



ಬೆಂಗಳೂರು, ನ.19: ಮೇಕೆದಾಟು ಯೋಜನೆ ವಿಚಾರದಲ್ಲಿ ರಾಜ್ಯದ ಎಲ್ಲರೂ ಪಕ್ಷಭೇದ ಮರೆತು ಒಂದೇ ಧ್ವನಿಯಲ್ಲಿ ಬೆಂಬಲ ನೀಡಿವೆ. ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಕೂಡ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದ್ದಾರೆ. ಹೀಗಿರುವಾಗ ಕೆಲವರು ಅಸೂಯೆಯಿಂದ ಮಾತನಾಡಿದರೆ ಅದನ್ನು ಗಂಭೀರವಾಗಿ ಪರಿಗಣಿಸುವ ಅಗತ್ಯವಿಲ್ಲ ಎಂದು ಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.

ಗುರುವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕುಮಾರಸ್ವಾಮಿ ಅವರೂ ಮೇಕೆದಾಟು ಯೋಜನೆ ಆಗಬೇಕು ಎಂದು ಹೇಳಿದ್ದಾರೆ. ಒಂದೇ ದಿನದಲ್ಲಿ ಅನುಮತಿ ತೆಗೆದುಕೊಂಡು ಬರುತ್ತೇನೆ ಎಂದಿದ್ದರು. ಬಹುಶಃ ಅವರು ಆ ಕೆಲಸ ಮಾಡುತ್ತಾರೆ ಎಂಬ ವಿಶ್ವಾಸ ನನಗಿದೆ. ಅವರ ತಂದೆ ದೇವೇಗೌಡರು ಕೇಂದ್ರಕ್ಕೆ ಪತ್ರ ಬರೆದಿದ್ದಾರೆ.

ಆದರೆ ಪಾಪ, ಅವರ ಮಗ ಅಸೂಯೆಯಿಂದ ಏನೇನೋ ಮಾತನಾಡಬಹುದು. ಅದನ್ನು ನಾವು ಗಂಭೀರವಾಗಿ ತೆಗೆದುಕೊಳ್ಳುವುದು ಬೇಡ ಎಂದರು.

ಕೃಷಿಗೆ ಬಳಕೆಯಿಲ್ಲ

ಮೇಕೆದಾಟು ಯೋಜನೆ ಯಾವುದೇ ಒಂದು ಪಕ್ಷದ ಅಥವಾ ವ್ಯಕ್ತಿಯ ವಿಚಾರವಲ್ಲ. ಇದು ಇಡೀ ರಾಜ್ಯದ ಹಿತಾಸಕ್ತಿಯ ಪ್ರಶ್ನೆ. ಈ ಯೋಜನೆಯಿಂದ ಮಂಡ್ಯ, ಹಾಸನ, ತುಮಕೂರು ಮತ್ತು ಮೈಸೂರು ಜಿಲ್ಲೆಗಳಿಗೆ ನೇರ ಅನುಕೂಲವಾಗಲಿದೆ. ಪ್ರಮುಖವಾಗಿ ಬೆಂಗಳೂರಿನ ಕುಡಿಯುವ ನೀರಿನ ಸಮಸ್ಯೆಗೂ ಪರಿಹಾರ ದೊರೆಯಲಿದೆ. ಮೇಕೆದಾಟು ಒಂದು ಸಮತೋಲಿತ ಅಣೆಕಟ್ಟು ಆಗಿದ್ದು, ಬೆಂಗಳೂರಿಗೆ ಕುಡಿಯುವ ನೀರು ಒದಗಿಸುವುದು ಇದರ ಪ್ರಮುಖ ಉದ್ದೇಶವಾಗಿದೆ. ಕೃಷಿ ಉದ್ದೇಶಕ್ಕೆ ಈ ನೀರನ್ನು ಬಳಸುವ ಪ್ರಸ್ತಾಪವಿಲ್ಲ ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದರು.

ಆಶಾ ಕಾರ್ಯಕರ್ತೆಯರ ಬಗ್ಗೆ ಸರ್ಕಾರಕ್ಕೆ ನಂಬಿಕೆ, ಸಹಾನುಭೂತಿ ಇದೆ: ಸಿಎಂ ಡಿ.ಕೆ.ಶಿವಕುಮಾರ್

ಸಂಧಾನ ವಿಫಲ: ನಿಲ್ಲದ ಆಶಾ ಕಾರ್ಯಕರ್ತೆಯರ ಧರಣಿ

ಬೆಂಗಳೂರು, ನ.19: ಗೌರವಧನ 15 ಸಾವಿರ ಕ್ಕೆ ನಿಗದಿಪಡಿಸಲು ಆಗ್ರಹಿಸಿ ಕಳೆದ ಮೂರು ದಿನಗಳಿಂದ ಆಶಾ ಕಾರ್ಯಕರ್ತೆಯರು ನಡೆಸುತ್ತಿರುವ ಹೋರಾಟ ಮುಂದುವರಿದಿದೆ. ಹೋರಾಟ ಕೈಬಿಡುವಂತೆ ಸಿಎಂ ನಡೆಸಿದ ಸಂಧಾನ ವಿಫಲವಾಗಿದೆ. ಇದಕ್ಕೂ ಮುನ್ನ ಹೋರಾಟಗಾರರೊಂದಿಗೆ ಸಭೆ ನಡೆಸಿದ ಡಿ.ಕೆ.ಶಿವಕುಮಾರ್ ಆಶಾ ಕಾರ್ಯಕರ್ತೆಯರ ಬಗ್ಗೆ ಸರ್ಕಾರಕ್ಕೆ ಸಹಾನುಭೂತಿ ಇದೆ. ನೀವು ಜನರ ಸೇವೆ ಮಾಡುತ್ತಿದ್ದೀರಿ. ಆದರೆ ಬೇಡಿಕೆಗಳ ಬಗ್ಗೆ ಒಂದೇ ದಿನಕ್ಕೆ ತೀರ್ಮಾನ ಮಾಡಲಾಗುವುದಿಲ್ಲ. ಸಂಬಂಧಪಟ್ಟ ಸಚಿವರು, ಸಚಿವ ಸಂಪುಟ ಸಭೆ ಹಾಗೂ ಮುಂಬರುವ ವಿಧಾನಮಂಡಲ ಅಧಿವೇಶನದಲ್ಲಿ ಚರ್ಚಿಸಿ ತೀರ್ಮಾನ ಮಾಡಲಾಗುವುದು ಎಂದು ಮನವೊಲಿಸಲು ಯತ್ನಿಸಿದರು.



ಎಸ್ ಐಆರ್ ಹಾಗೂ ಶೈಕ್ಷಣಿಕ, ಸಾಮಾಜಿಕ ಸಮೀಕ್ಷೆಯ ಕೆಲಸ ಮಾಡಿದ್ದಕ್ಕೆ ಯಾವುದೇ ಗೌರವಧನ ಬಂದಿಲ್ಲ ಎಂದು ಆಶಾ ಕಾರ್ಯಕರ್ತೆಯರು ತಿಳಿಸಿದಾಗ ಸಮೀಕ್ಷಾ ಕಾರ್ಯಗಳಿಗೆ ಬಳಸಿಕೊಂಡು ಮೇಲೆ ಗೌರವಧನ ಕೊಡಬೇಕು. ಈ ಬಗ್ಗೆ ಕ್ರಮ ಕೈಗೊಳ್ಳುತ್ತೇನೆ" ಎಂದು ಸಿಎಂ ಆಶ್ವಾಸನೆ ನೀಡುವುದರ ಜೊತೆಗೆ ಸರ್ಕಾರದೊಂದಿಗೆ ಸಹಕರಿಸಿ ಪ್ರತಿಭಟನೆ ನಿಲ್ಲಿಸಿ ಎಂದು ಮನವಿ ಮಾಡಿದರು.

ನಿಮಗೆ ಶಕ್ತಿ ತುಂಬುವ ಕೆಲಸ ಮಾಡುತ್ತೇನೆ:

ಗೃಹಲಕ್ಷ್ಮಿ ಯೋಜನೆಯಡಿ ಆಶಾ ಕಾರ್ಯಕರ್ತೆಯರನ್ನು ಸೇರಿಸಬಾರದು ಎಂದಾಗ ಅದನ್ನು ನಾವು ಒಪ್ಪದೆ ಯೋಜನೆ ಕೊಟ್ಟಿದ್ದೇವೆ ಉಚಿತ ಬಸ್ಸು, ವಿದ್ಯುತ್ ಕೊಟ್ಟಿದ್ದೇವೆ. ನಿಮ್ಮ ಸ್ಥಿತಿಗತಿಯನ್ನು ಗಮನದಲ್ಲಿಟ್ಟು ಕೊಂಡೇ ಗ್ಯಾರಂಟಿ ಯೋಜನೆಗಳನ್ನು ಕೊಟ್ಟಿದ್ದೇವೆ. ನನ್ನ ಮೇಲೆ ವಿಶ್ವಾಸವಿರಲಿ. ನಿಮಗೆ ಶಕ್ತಿ ತುಂಬುವ ಕೆಲಸ ಮಾಡುತ್ತೇನೆ" ಎಂದು ಹೇಳಿದರು

ಆಶಾ ಕಾರ್ಯಕರ್ತೆಯರನ್ನು ನೇಮಕ ಮಾಡಿದ್ದು ಕಾಂಗ್ರೆಸ್ ಸರ್ಕಾರ. ಪಿಂಚಣಿ ಯೋಜನೆ ಜಾರಿ ಮಾಡಿದ್ದು ನಮ್ಮ ಸರ್ಕಾರ. ನೀವುಗಳು ಕೇಂದ್ರ ಸರ್ಕಾರವನ್ನೂ ಕೇಳಬೇಕು. ಕೇಂದ್ರ ಸರ್ಕಾರ ತನ್ನ ಪಾಲಿನ ಹಣವನ್ನು ಹೆಚ್ಚಳ ಮಾಡಿಲ್ಲ" ಎಂದರು.

ಮಾಧ್ಯಮ ಪ್ರತಿಕ್ರಿಯೆ:

"ರಾಜ್ಯದ ಸುಮಾರು 41 ಸಾವಿರ ಆಶಾ ಕಾರ್ಯಕರ್ತೆಯರ ಸೇವೆ ಹಾಗೂ ಅವರ ಆರ್ಥಿಕ ಸಂಕಷ್ಟದ ಬಗ್ಗೆ ಸರ್ಕಾರಕ್ಕೆ ಸಂಪೂರ್ಣ ಸಹಾನುಭೂತಿ ಇದೆ. ಅವರ ಗೌರವಧನ ಹೆಚ್ಚಳದ ಬೇಡಿಕೆಯನ್ನು ತಳ್ಳಿಹಾಕುವುದಿಲ್ಲ" ಎಂದು ಹೇಳಿದರು. "ಆಶಾ ಕಾರ್ಯಕರ್ತೆಯರು ಕಷ್ಟಪಟ್ಟು ಕೆಲಸ ಮಾಡುತ್ತಿದ್ದಾರೆ. ಅವರ ಸಮಸ್ಯೆಗಳ ಬಗ್ಗೆ ಸರ್ಕಾರಕ್ಕೆ ಅರಿವಿದೆ. ಮಾಜಿ ಪ್ರಧಾನಮಂತ್ರಿ ಡಾ. ಮನಮೋಹನ್ ಸಿಂಗ್ ಅವರ ಅವಧಿಯಲ್ಲಿ ಆಶಾ ಕಾರ್ಯಕರ್ತೆಯರ ಯೋಜನೆ ಆರಂಭವಾಯಿತು. ಆಗ ಅವರಿಗೆ 200 ನೀಡಲಾಗುತ್ತಿತ್ತು. ಪ್ರಸ್ತುತ ಕೇಂದ್ರ ಸರ್ಕಾರ 2 ಸಾವಿರ ನೀಡುತ್ತಿದ್ದರೆ, ರಾಜ್ಯ ಸರ್ಕಾರ ?5 ಸಾವಿರ ನೀಡುತ್ತಿದೆ. ಇದರ ಜತೆಗೆ ರಾಜ್ಯದಿಂದ ಒಂದು ಸಾವಿರ ಪ್ರೋತ್ಸಾಹಧನವನ್ನೂ ನೀಡಲಾಗುತ್ತಿದೆ. ಕೆಲಸದ ಆಧಾರದ ಮೇಲೆ ಇತರ ಪ್ರೋತ್ಸಾಹಧನ ಸೇರಿ ಒಟ್ಟಾರೆ ಸುಮಾರು 8 ಸಾವಿರ ರೂಪಾಯಿವರೆಗೆ ದೊರೆಯುತ್ತಿದೆ" ಎಂದು ವಿವರಿಸಿದರು. "ಆಶಾ ಕಾರ್ಯಕರ್ತೆಯರು ತಮ್ಮ ಮಾಸಿಕ ಗೌರವಧನವನ್ನು 15 ಸಾವಿರ ರೂಪಾಯಿಗೆ ಹೆಚ್ಚಿಸುವಂತೆ ಬೇಡಿಕೆ ಇಟ್ಟಿದ್ದಾರೆ. ಈ ಬೇಡಿಕೆಯ ವಾಸ್ತವಿಕತೆ ಹಾಗೂ ಸರ್ಕಾರದ ಆರ್ಥಿಕ ಇತಿಮಿತಿಗಳನ್ನು ಅವರಿಗೆ ವಿವರಿಸಲಾಗಿದೆ. ಇದು ಆಶಾ ಕಾರ್ಯಕರ್ತೆಯರ ಬೇಡಿಕೆಯೊಂದೇ ಅಲ್ಲ, ವಿವಿಧ ವರ್ಗಗಳಿಂದಲೂ ಹಲವು ಬೇಡಿಕೆಗಳಿವೆ" ಎಂದು ತಿಳಿಸಿದರು.

ಪ್ರತಿಭಟನೆ ಹಿಂಪಡೆಯುವ ವಿಶ್ವಾಸವಿದೆ:

"ಆಶಾ ಕಾರ್ಯಕರ್ತರು ಕಷ್ಟಪಟ್ಟು ದುಡಿಯುತ್ತಿದ್ದಾರೆ. ಅವರ ಸಮಸ್ಯೆಗಳ ಬಗ್ಗೆ ಚರ್ಚಿಸಿ, ಸರ್ಕಾರದಿಂದ ಯಾವ ರೀತಿಯಲ್ಲಿ ನೆರವು ನೀಡಲು ಸಾಧ್ಯವಿದೆಯೋ ಅದನ್ನು ಮಾಡುತ್ತೇವೆ. ದಯವಿಟ್ಟು ನಿಮ್ಮ ಮನೆಗಳಿಗೆ ತೆರಳಿ ಎಂದು ಮನವಿ ಮಾಡಿದ್ದೇನೆ" ಎಂದು ಹೇಳಿದರು.

ಆಶಾ ಕಾರ್ಯಕರ್ತೆಯರು ಇತರೆ ಯಾವ ಬೇಡಿಕೆಗಳನ್ನು ಮುಂದಿಟ್ಟಿದ್ದಾರೆ ಎಂಬ ಪ್ರಶ್ನೆಗೆ, "ಅವರು ಒಟ್ಟು ಎಂಟರಿಂದ ಒಂಬತ್ತು ಬೇಡಿಕೆಗಳನ್ನು ಸಲ್ಲಿಸಿದ್ದಾರೆ. ಎಲ್ಲ ಬೇಡಿಕೆಗಳ ಬಗ್ಗೆಯೂ ಚರ್ಚೆ ನಡೆಸಲಾಗುವುದು. ಗೃಹ ಸಚಿವರೂ ಈ ವಿಚಾರವಾಗಿ ಮಾತನಾಡಲಿದ್ದಾರೆ. ಅವರೊಂದಿಗೆ ಚರ್ಚಿಸಿ ಮುಂದಿನ ಕ್ರಮ ಕೈಗೊಳ್ಳುತ್ತೇವೆ" ಎಂದು ತಿಳಿಸಿದರು.

ವಿಶ್ವದರ್ಜೆ ಸಾಮರ್ಥ್ಯಕ್ಕೆ ತಕ್ಕಂತೆ ಶಿಕ್ಷಣ ವ್ಯವಸ್ಥೆ ಉನ್ನತೀಕರಿಸುವ ಗುರಿ: ಸಚಿವ ಬಸವರಾಜ ರಾಯರೆಡ್ಡಿ

ಬೆಂಗಳೂರು, ನ.19: ಮುಂದಿನ ಶೈಕ್ಷಣಿಕ ವರ್ಷದಿಂದ ಉನ್ನತ ಶಿಕ್ಷಣ ವ್ಯವಸ್ಥೆಯನ್ನು ವಿಶ್ವದರ್ಜೆಯ ಬೋಧನಾ ಸಾಮರ್ಥ್ಯಕ್ಕೆ ಅನುಗುಣವಾಗಿ ಉನ್ನತೀಕರಿಸುವ ಗುರಿ ಹೊಂದಲಾಗಿದೆ ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ತಿಳಿಸಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ನೂತನವಾಗಿ ಆಯ್ಕೆಯಾಗಿರುವ ಪ್ರಾಂಶುಪಾಲರಿಗೆ ನೇಮಕಾತಿ ಆದೇಶ ವಿತರಿಸುವ ಶೈಕ್ಷಣಿಕ ಸಾರಥ್ಯ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿ ಯಾದ ಬಳಿಕ ಎಲ್ಲ ಇಲಾಖೆಗಳಲ್ಲೂ ಪಾರದರ್ಶಕತೆಗೆ ಹೆಚ್ಚಿನ ಒತ್ತು ನೀಡಿದ್ದಾರೆ. ದೂರದೃಷ್ಟಿ ಯೊಂದಿಗೆ ಕರ್ನಾಟಕವನ್ನು ಅಭಿವೃದ್ಧಿಯ ಮಾದರಿ ರಾಜ್ಯವನ್ನಾಗಿ ರೂಪಿಸಿ, ಉತ್ತುಂಗಕ್ಕೇರಿಸಲು ಪ್ರಯತ್ನಿಸುತ್ತಿದ್ದಾರೆ ಎಂದರು. ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಳೆದ ಏಳೆಂಟು ವರ್ಷಗಳಿಂದ ಪ್ರಾಂಶುಪಾಲರಿಲ್ಲದೆ ಆಡಳಿತಾತಕ ಹಾಗೂ ಶೈಕ್ಷಣಿಕ ಕಾರ್ಯಚಟುವಟಿಕೆಗೆ ಹಿನ್ನಡೆಯಾಗಿತ್ತು. ನಮ್ಮ ಸರ್ಕಾರ ಪಾರದರ್ಶಕವಾಗಿ ನೇಮಕಾತಿಗೆ ಅನುಮತಿ ನೀಡಿದ್ದರಿಂದ ಪ್ರಾಂಶುಪಾಲರ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಲಾಗಿದೆ. 220 ಮಂದಿಗೆ ಸಾಂಕೇತಿಕವಾಗಿ ನೇಮಕಾತಿ ಆದೇಶ ನೀಡಲಾಗಿದೆ. ಉಳಿದವರ ನೇಮಕಾತಿಯನ್ನು ದಾಖಲೆಗಳ ಪರಿಶೀಲನೆ ಬಳಿಕ ಪೂರ್ಣಗೊಳಿಸಲಾಗುವುದು ಎಂದು ಸಚಿವ ರಾಯರೆಡ್ಡಿ ತಿಳಿಸಿದರು.



ಇನ್ನೂ 130 ಪ್ರಾಂಶುಪಾಲರ ನೇಮಕಾತಿಗೆ ದೊರೆತರೆ ಪ್ರತಿಯೊಂದು ವಿಚಾರದ ಮಾಹಿತಿಯನ್ನು ಈ ಮಾಹಿತಿಯ ಆಧಾರದಲ್ಲಿ ಉನ್ನತ ಶಿಕ್ಷಣ ರಾಜ್ಯದ ಎಲ್ಲ ಸರ್ಕಾರಿ ಕಾಲೇಜುಗಳಿಗೂ ಪ್ರಾಂಶುಪಾಲರನ್ನು ನೇಮಿಸಲು ಸಾಧ್ಯವಾಗಲಿದೆ. ಈ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು. ಸರ್ಕಾರಿ ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳಲ್ಲಿ ಬೋಧಕರ ಕೊರತೆ ನೀಗಿಸಲು ಸರ್ಕಾರ ವಿಶೇಷ ಗಮನ ಹರಿಸಿದೆ. ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ 3,000 ಪ್ರಾಧ್ಯಾಪಕರ ನೇಮಕಾತಿ ಘೋಷಣೆ ಮಾಡಲಾಗಿದೆ. ಈ ಸಂಬಂಧದ ಪ್ರಸ್ತಾವನೆ ಸಚಿವ ಸಂಪುಟದ ಮುಂದಿದ್ದು, ಮುಂದಿನ ಎರಡು ಮೂರು ವಾರಗಳಲ್ಲಿ ನೇಮಕಾತಿಗೆ ಅಧಿಸೂಚನೆ ಹೊರಬೀಳುವ ನಿರೀಕ್ಷೆಯಿದೆ.

ರಾಜ್ಯದ 440 ಸರ್ಕಾರಿ ಕಾಲೇಜುಗಳು ಹಾಗೂ ಪಾಲಿಟೆಕ್ನಿಕ್‌ಗಳಲ್ಲಿರುವ ಸೌಲಭ್ಯಗಳು ಮತ್ತು ಕೊರತೆಗಳ ಕುರಿತು ಸಮಗ್ರ ಮಾಹಿತಿ ಸಂಗ್ರಹಿಸಲಾಗಿದೆ. ಸಿಬ್ಬಂದಿ, ಮೇಜು-ಕುರ್ಚಿ, ಪೀಠೋಪಕರಣ, ಶೌಚಾಲಯ, ಇದುವರೆಗೆ ಮಾಡಲಾಗಿರುವ ವೆಚ್ಚ, ಲಭ್ಯವಿರುವ ಅನುದಾನ ಸೇರಿದಂತೆ

ಮಕ್ಕಳಲ್ಲಿ ನಾಯಕತ್ವ ಗುಣ ಬೆಳೆಸಿ: ಡಿಕೆಶಿ



ನಾಯಕತ್ವ ಗುಣ ಪ್ರತಿಯೊಂದು ಮಗುವಿನಲ್ಲಿ ಇರುತ್ತದೆ. ಪ್ರತಿಯೊಂದು ಮಗುವು ಉನ್ನತ ಮಟ್ಟಕ್ಕೆ ಬೆಳೆಯುವಂತೆ ಮಾಡುವ ಶಕ್ತಿ ಶಿಕ್ಷಕರಲ್ಲಿದೆ. ಶಾಸಕರು, ಸಚಿವರ ಮಕ್ಕಳೇ ನಾಯಕರಾಗಿ ಬೆಳೆಯಬೇಕೆಂದೇನಿಲ್ಲ. ಜನಸಾಮಾನ್ಯರ ಮಕ್ಕಳೂ ಬೆಳೆಯಬೇಕು ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ನಗರದ ಜ್ಞಾನಜ್ಯೋತಿ ಸಭಾಂಗಣದಲ್ಲಿ ನಡೆದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ನೂತನವಾಗಿ ಆಯ್ಕೆಯಾಗಿರುವ ಪ್ರಾಂಶುಪಾಲರಿಗೆ ನೇಮಕಾತಿ ಆದೇಶ ಪ್ರದಾನ ಮಾಡುವ ಶೈಕ್ಷಣಿಕ ಸಾರಥ್ಯ ಸಮಾರಂಭವನ್ನು ಗುರುವಾರ ಉದ್ಘಾಟಿಸಿ ಮಾತನಾಡಿದರು.

ನೂತನ ಪ್ರಾಂಶುಪಾಲರ ಮೇಲೆ ವಿದ್ಯಾರ್ಥಿ ಸಮೂಹ ಹಾಗೂ ಸಮಾಜ ವಿಶ್ವಾಸವಿಟ್ಟಿದೆ. ಪ್ರತಿಭೆಗೆ ಅವಕಾಶ, ಪ್ರೋತ್ಸಾಹ ಕೊಡುವುದು ನಮ್ಮ ಕರ್ತವ್ಯ. ಮೈಸೂರು ಮುಕ್ತ ವಿಶ್ವವಿದ್ಯಾಲಯದಲ್ಲಿ ಪದವಿ ಪಡೆದಾಗ ಸಚಿವ, ಮುಖ್ಯಮಂತ್ರಿಯಾಗಿದ್ದಕ್ಕಿಂತಲೂ ಹೆಚ್ಚು ಸಂತೋಷವಾಗಿತ್ತು. ವಿದ್ಯೆಯು ಆತ್ಮವಿಶ್ವಾಸ ಬೆಳೆಸುತ್ತದೆ. ಒಂದು ಪುಸ್ತಕ, ಒಂದು ಲೇಖನಿ, ಒಬ್ಬ ಶಿಕ್ಷಕ ಇಡೀ ದೇಶದ ಭವಿಷ್ಯವನ್ನೇ ಬದಲಾಯಿಸಬಲ್ಲರು. ದೇಶದ ಭವಿಷ್ಯವನ್ನು ರೂಪಿಸುವ ಹೊಣೆಗಾರಿಕೆ ನಿಮ್ಮ ಮೇಲಿದೆ. ನಿಮ್ಮ ಮೇಲೆ ನಮಗೆ ನಂಬಿಕೆ ಇದೆ. ಕೇವಲ ಸ್ವಂತಕ್ಕಾಗಿ ಶಿಕ್ಷಣ ನೀಡಬಾರದು. ಉತ್ತಮ ಸಮಾಜ ನಿರ್ಮಾಣಕ್ಕಾಗಿ ಶಿಕ್ಷಣ ನೀಡಬೇಕು ಎಂದು ಹೇಳಿದರು.

ಕಲೆಹಾಕಿ ಸಮಗ್ರ ಕೈಪಿಡಿ ಸಿದ್ಧಪಡಿಸಲಾಗಿದೆ. ಕ್ಷೇತ್ರದ ಅಭಿವೃದ್ಧಿಗೆ ಮುಂದಿನ ದಿನಗಳಲ್ಲಿ ಯೋಜನೆ ರೂಪಿಸಲಾಗುವುದು ಎಂದರು.

ಸೋನಿಯಾ ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಸಿದ್ದರಾಮಯ್ಯಗೆ ಅಪಮಾನ, ಬಿಜೆಪಿಗೆ ಸವದಿ ತಿರುಗೇಟು

ಕಾರವಾರ, ನ.19: ದೆಹಲಿಯಲ್ಲಿ ನಡೆದ ಸೋನಿಯಾ ಗಾಂಧಿಯವರ ಆತ್ಮಚರಿತ್ರೆ ಪುಸ್ತಕ 'ಬಿಲಾಂಗಿಂಗ್: ಎ ಜರ್ನಿ ಆಫ್ ಲವ್' ಬಿಡುಗಡೆ ಕಾರ್ಯಕ್ರಮವೊಂದರಲ್ಲಿ ಮಾಜಿ ಸಿಎಂ ಸಿದ್ದರಾಮಯ್ಯಗೆ ಅವರಿಗೆ ಅವಮಾನವಾಗಿದೆ ಎಂಬ ಬಿಜೆಪಿ ನಾಯಕರ ಟೀಕೆಗೆ ಸಚಿವ ಲಕ್ಷ್ಮಣ ಸವದಿ ತಿರುಗೇಟು ನೀಡಿದ್ದಾರೆ.

ನಗರದಲ್ಲಿ ಗುರುವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, "ದೆಹಲಿಯಲ್ಲಿ ನಡೆದಿರುವುದು ಒಂದು ಖಾಸಗಿ ಹಾಗೂ ಕುಟುಂಬದ ಕಾರ್ಯಕ್ರಮವಾಗಿದೆ. ಅಲ್ಲಿ ಸರ್ಕಾರಿ ಶಿಷ್ಟಾಚಾರದ (ಪ್ರೋಟೋಕಾಲ್) ಪ್ರಕಾರ ನಿರ್ವಹಣೆ ಆಗುವುದಿಲ್ಲ. ಕಾರ್ಯಕ್ರಮದಲ್ಲಿ ಎಲ್ಲಿ ಸ್ಥಳ ಖಾಲಿ ಇತ್ತೋ ಅದನ್ನು ನೋಡಿ ಸಿದ್ದರಾಮಯ್ಯನವರು ಕುಳಿತಿರಬಹುದು" ಎಂದರು.

ಮುಂದುವರಿದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ ಅವರು, "ಈ ವಿಚಾರದ ಬಗ್ಗೆ ಟೀಕೆ ಮಾಡುವ ನೈತಿಕ ಹಕ್ಕು ಬಿಜೆಪಿಗೆ ಇಲ್ಲ. ಬಿಜೆಪಿಯವರು ಯಾರನ್ನು ಯಾವ ರೀತಿ ನಡೆಸಿಕೊಂಡಿದ್ದಾರೆ ಎಂಬುದು ಇಡೀ ದೇಶಕ್ಕೆ ತಿಳಿದಿದೆ.



ಹಿರಿಯ ನಾಯಕ ಎಲ್.ಕೆ. ಅಡ್ವಾಣಿ ಅವರನ್ನು ಯಾವ ರೀತಿ ನಡೆಸಿಕೊಂಡರು ಎಂಬುದರ ಬಗ್ಗೆ ಅವರು ಮೊದಲು ಆತ್ಮಾವಲೋಕನ ಮಾಡಿಕೊಳ್ಳಲಿ" ಎಂದು ಟೀಕಿಸಿದರು.

ಇನ್ನು ಪಂಚಮಸಾಲಿಗರಿಗೆ ಪ್ರತ್ಯೇಕ ಮೀಸಲಾತಿ ನೀಡಬೇಕೆಂಬುದು ಅವರ ಬಹುದಿನಗಳ ಬೇಡಿಕೆಯಾಗಿದೆ. ಆದರೆ ಈ ವ್ಯಾಜ್ಯ ಸುಪ್ರೀಂ ಕೋರ್ಟ್‌ನಲ್ಲಿದೆ. ಕೆಲ ಕಾನೂನಾತ್ಮಕ ನಿರ್ಬಂಧಗಳು ಇರುವುದರಿಂದ ಈ ಬಗ್ಗೆ ಮುಖ್ಯಮಂತ್ರಿಗಳು ಹಾಗೂ ಕಾನೂನು ಸಚಿವರು ಸೂಕ್ತ ಕಾನೂನಾತ್ಮಕ ನಿರ್ಧಾರವನ್ನು ತೆಗೆದುಕೊಳ್ಳಲಿದ್ದಾರೆ" ಎಂದು ಸಚಿವ ಲಕ್ಷ್ಮಣ ಸವದಿ ಕಾರವಾರದಲ್ಲಿ ಪ್ರತಿಕ್ರಿಯೆ ನೀಡಿದರು.

ನಾನೇ ತಡವಾಗಿ ಹೋಗಿದ್ದೆ:



ಈ ಮಧ್ಯೆ ಸೋನಿಯಾ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ತಮ್ಮನ್ನು ಹಿಂದಿನ ಸಾಲಿನಲ್ಲಿ ಕುಳ್ಳಿರಿಸಿದ ಬಗ್ಗೆ ಪ್ರತಿಕ್ರಿಯಿಸಿದ ಮಾಜಿ ಸಿಎಂ ಸಿದ್ದರಾಮಯ್ಯ, ವಾಸ್ತವವಾಗಿ ನಾನೇ ಸಮಾರಂಭಕ್ಕೆ ತಡವಾಗಿ ಹೋಗಿದ್ದೆ. ಅಷ್ಟರಲ್ಲಿ ಮುಂದಿನ ಸಾಲುಗಳು ಭರ್ತಿಯಾಗಿದ್ದರಿಂದ ಹಿಂದಿನ ಸಾಲಿನಲ್ಲಿ ಕುಳಿತೆ. ಆದರೆ, ಇದು ಉದ್ದೇಶಪೂರ್ವಕವಾಗಿ ನಡೆದ ಘಟನೆಯಲ್ಲ ಎಂದು ಸ್ಪಷ್ಟಪಡಿಸಿದರು.

ಹಿರಿಯೂರು ಉಪಚುನಾವಣೆ: ಎನ್‌ಡಿಎ ಅಭ್ಯರ್ಥಿ ಗೆಲುವು ಮುಖ್ಯ

ಯಾರಿಗೆ ಟಿಕೆಟ್ ನೀಡಿದರೂ ಒಗ್ಗಟ್ಟಾಗಿ ಕೆಲಸ ಮಾಡುತ್ತೇವೆ: ಆರ್.ಅಶೋಕ್

ಮಂಗಳೂರು, ನ.19: ಮುಂಬರುವ ಹಿರಿಯೂರು ವಿಧಾನಸಭಾ ಉಪಚುನಾವಣೆಯಲ್ಲಿ ಬಿಜೆಪಿಗ

24ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ನವಂಬರ್ 20, 2026, ಶುಕ್ರವಾರ

ಒಳಪುಟಗಳಲ್ಲಿ

ರವಿಹಂಜ್ ವಿರಚಿತ ಬಸವ ಮಂಟಪ ಕೃತಿ ವಿರುದ್ಧ ಭುಗಿಲೆದ್ದ ಆಕ್ರೋಶ, ಮುಟ್ಟುಗೋಲಿಗೆ ಬಸವ ಸಮಿತಿ ಆಗ್ರಹ - ಪು.5

ಮಿಮ್ಸ್ ಜಾಗದ ಒತ್ತುವರಿ ತೆರವು: ನಿವಾಸಿಗಳಿಗೆ ಬದಲಿ ನಿವೇಶನ ನೀಡಲು ಚಲುವರಾಯಸ್ವಾಮಿ ಸೂಚನೆ - ಪು.6

ಬಿಜೆಪಿ ವಿರುದ್ಧ ಸುಳ್ಳು ಪ್ರಕರಣ ದಾಖಲು ಪೊಲೀಸ್ ಠಾಣೆಯ ಮುಂದೆ ಪ್ರತಿಭಟನೆ - ಪು.7

12–13 ವರ್ಷದಲ್ಲಿ 50 ಕೋಟಿ ಜನರು ಬಡತನದಿಂದ ಮುಕ್ತ

2047ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತ ನಿರ್ಮಾಣಕ್ಕೆ ಉದ್ಯಮ ವಲಯದ ಕೊಡುಗೆ ಅಗತ್ಯ: ಉದ್ಯಮಿಗಳಿಗೆ ಪ್ರಧಾನಿ ನರೇಂದ್ರ ಮೋದಿ ಕರೆ

ನವದೆಹಲಿ, ನ.19: ಕಳೆದ 12ರಿಂದ 13 ವರ್ಷಗಳ ಅವಧಿಯಲ್ಲಿ ದೇಶದ 50 ಕೋಟಿ ಜನರು ಬಡತನದಿಂದ ಹೊರಬಂದಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ದೆಹಲಿಯ ಭಾರತ್ ಮಂಡಪಂನಲ್ಲಿ ನಡೆದ ಭಾರತೀಯ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಘದ 100ನೇ ವಾರ್ಷಿಕ ಮಹಾಸಭೆ ಹಾಗೂ ವಾರ್ಷಿಕ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿ, 1970ರ ದಶಕದಲ್ಲಿ ದೇಶದಲ್ಲಿ 'ಬಡತನ ನಿರ್ಮೂಲನೆ' ಘೋಷಣೆ ಮೊಳಗಿದ್ದರೂ, ಆಗಿನ ಸರ್ಕಾರಗಳ ನೀತಿ ಮತ್ತು ಉದ್ದೇಶಗಳಲ್ಲಿ ಕೊರತೆಯಿತ್ತು. ಸರಿಯಾದ ಉದ್ದೇಶ ಮತ್ತು ದಿಕ್ಕಿನಲ್ಲಿ ಸರ್ಕಾರ ಕಾರ್ಯನಿರ್ವಹಿಸಿದರೆ ಬದಲಾವಣೆ ಸಾಧ್ಯ ಎಂಬುದಕ್ಕೆ ಕಳೆದ 12–13 ವರ್ಷಗಳಲ್ಲಿ 50 ಕೋಟಿ ಜನರು ಬಡತನದಿಂದ ಹೊರಬಂದಿರುವುದು ಸಾಕ್ಷಿಯಾಗಿದೆ ಎಂದು ಹೇಳಿದರು.

ಕಳೆದ 100 ವರ್ಷಗಳಲ್ಲಿ ಭಾರತದ ಆರ್ಥಿಕತೆ ಹಲವು ಹಂತಗಳನ್ನು ಕಂಡಿದೆ. ಲೈಸೆನ್ಸ್–ಕೋಟಾ ವ್ಯವಸ್ಥೆ, ರಾಷ್ಟ್ರೀಕರಣದ ಪ್ರಯೋಗ ಹಾಗೂ ಒಂದು ಹಂತದಲ್ಲಿ ಜಗತ್ತಿನ ದುರ್ಬಲ ಐದು ಆರ್ಥಿಕತೆಗಳ ಪಟ್ಟಿಯಲ್ಲಿ



ಗುರುತಿಸಿಕೊಂಡಿದ್ದ ಭಾರತ, ಕಳೆದ 12 ವರ್ಷಗಳಲ್ಲಿ ಸಾಕಷ್ಟು ಬದಲಾವಣೆ ಕಂಡಿದೆ. ಈ ಪ್ರಗತಿಯಲ್ಲಿ ಯುವಕರು, ರೈತರು, ಕಾರ್ಮಿಕರು ಮತ್ತು ಉದ್ಯಮ ವಲಯದ ಕೊಡುಗೆ ಮಹತ್ವದ್ದಾಗಿದೆ ಎಂದು ಹೇಳಿದರು.

ಭಾರತವನ್ನು ವಿಶ್ವದ ಔಷಧಾಲಯ ಎಂದು ಕರೆಯಲಾಗುತ್ತಿದ್ದರೂ, ಔಷಧ ತಯಾರಿಕೆಗೆ ಅಗತ್ಯವಿರುವ ಕಚ್ಚಾವಸ್ತುಗಳು ಮತ್ತು ಔಷಧ ಮಧ್ಯವರ್ತಿಗಳನ್ನು ಭಾರತ ಇನ್ನೂ ದೊಡ್ಡ ಪ್ರಮಾಣದಲ್ಲಿ ಆಮದು ಮಾಡಿಕೊಳ್ಳುತ್ತಿದೆ. ಇಂತಹ ಉತ್ಪನ್ನಗಳನ್ನು ದೇಶದಲ್ಲೇ ತಯಾರಿಸುವ ನಿಟ್ಟಿನಲ್ಲಿ ಔಷಧ ಉದ್ಯಮ ಹೊಸ ತಂತ್ರಜ್ಞಾನ ಮತ್ತು ಉತ್ಪಾದನಾ ಘಟಕಗಳಲ್ಲಿ ಹೂಡಿಕೆ ಮಾಡಬೇಕು ಎಂದು ಹೇಳಿದರು.

ದೀರ್ಘಾವಧಿ ಹೂಡಿಕೆಗೆ 'ಭಾರತ ಮೊದಲು' ತತ್ವಕ್ಕೆ ಆದ್ಯತೆ

ಭಾರತೀಯ ಉದ್ಯಮ ವಲಯ ಮುಂದಿನ 20 ವರ್ಷಗಳ ಗುರಿಗಳನ್ನು ಈಗಲೇ ರೂಪಿಸಿಕೊಳ್ಳಬೇಕು. 2047ರ ವೇಳೆಗೆ ಅಭಿವೃದ್ಧಿ ಹೊಂದಿದ ಹಾಗೂ ಸ್ವಾವಲಂಬಿ ಭಾರತ ನಿರ್ಮಿಸುವ ನಿಟ್ಟಿನಲ್ಲಿ ಉದ್ಯಮಿಗಳು ತಮ್ಮ ಕೊಡುಗೆಯನ್ನು ಹೆಚ್ಚಿಸಬೇಕು. ದೀರ್ಘಾವಧಿಯ ಹೂಡಿಕೆ ನಿರ್ಧಾರಗಳಲ್ಲಿ 'ಭಾರತ ಮೊದಲು' ಎಂಬ ತತ್ವಕ್ಕೆ ಆದ್ಯತೆ ನೀಡಬೇಕು. ವಿದೇಶಿ ಮಾರುಕಟ್ಟೆಗಳಲ್ಲಿ ಬೇಡಿಕೆಯಿರುವ ಉತ್ಪನ್ನಗಳನ್ನು ದೇಶದಲ್ಲೇ ಅಭಿವೃದ್ಧಿಪಡಿಸಿ, ಜಾಗತಿಕ ಮಾರುಕಟ್ಟೆಗೆ ಪೂರೈಸುವ ಸಾಮರ್ಥ್ಯ ಬೆಳೆಸಿಕೊಳ್ಳಬೇಕು ಎಂದು ಉದ್ಯಮಿಗಳಿಗೆ ಮೋದಿ ಸಲಹೆ ನೀಡಿದರು.

ಉದ್ಯಮಿಗಳು ತಮ್ಮ ಸಲಹೆಗಳನ್ನು ಯಾವುದೇ ಹಿಂಜರಿಕೆಯಿಲ್ಲದೆ ಸರ್ಕಾರಕ್ಕೆ ತಿಳಿಸಬೇಕು. ಹಿಂದಿನ ಸರ್ಕಾರಗಳೊಂದಿಗಿನ ಅನುಭವ ಕಹಿಯಾಗಿರಬಹುದು. ಆದರೆ ಈಗ ಇರುವುದು ಉದ್ಯಮಸ್ನೇಹಿ ಸರ್ಕಾರ. ಉದ್ಯಮ ವಲಯದ ಸಮಸ್ಯೆಗಳನ್ನು ಮುಕ್ತವಾಗಿ ತಿಳಿಸಿದರೆ ಅಗತ್ಯ ಸುಧಾರಣೆ ಕೈಗೊಳ್ಳಲು ಸರ್ಕಾರ ಸಿದ್ಧವಿದೆ ಎಂದು ಮೋದಿ ಹೇಳಿದರು.

ರೈತರು, ಸಣ್ಣ ಉದ್ಯಮಿಗಳು, ಉದ್ಯಮ ಸಂಸ್ಥೆಗಳು, ಸಂಪತ್ತು ಸೃಷ್ಟಿಸುವವರು ಮತ್ತು ತೆರಿಗೆ ಪಾವತಿದಾರರಿಗೆ ಗೌರವ ನೀಡಿದಾಗ ಮಾತ್ರ ದೇಶ ಅಭಿವೃದ್ಧಿ ಹೊಂದಲು ಸಾಧ್ಯ. ಕಾರ್ಪೊರೇಟ್ ತೆರಿಗೆಯ ಮೂಲ ದರವನ್ನು ಶೇ.30ರಿಂದ ಶೇ.22ಕ್ಕೆ ಇಳಿಸಲಾಗಿದೆ. ತೆರಿಗೆ ಸಲ್ಲಿಕೆ ಮತ್ತು ಮರುಪಾವತಿ ಪ್ರಕ್ರಿಯೆಯನ್ನೂ ಸರಳಗೊಳಿಸಲಾಗಿದೆ ಎಂದು ಪ್ರಧಾನಿ ವಿವರಿಸಿದರು.

ಎಫ್‌ಕೆಸಿಸಿಐ 1927ರಲ್ಲಿ ಸ್ಥಾಪನೆಯಾಗಿದ್ದು, 2026?27ನೇ ಸಾಲಿನಲ್ಲಿ ಸಂಸ್ಥೆಯ ಶತಮಾನೋತ್ಸವ ವರ್ಷ ಆಚರಿಸುತ್ತಿದೆ. ಸಂಸ್ಥೆಯು ಸಾರ್ವಜನಿಕ, ಖಾಸಗಿ ಮತ್ತು ಬಹುರಾಷ್ಟ್ರೀಯ ವಲಯಗಳ 2.5 ಲಕ್ಷಕ್ಕೂ ಅಧಿಕ ಕಂಪನಿಗಳನ್ನು ಪ್ರತಿನಿಧಿಸುತ್ತಿದೆ.

ದೇಶ–ವಿದೇಶಗಳ ಉದ್ಯಮಿಗಳು, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ನೀತಿ ನಿರೂಪಕರು ಸಮಾವೇಶದಲ್ಲಿ ಪಾಲ್ಗೊಂಡಿದ್ದರು.

ಚುನಾವಣೆ ಬಹಿಷ್ಕಾರ ಇಲ್ಲ, ವ್ಯವಸ್ಥೆಯೊಳಗೇ ಹೋರಾಟ: ರಾಹುಲ್ ಗಾಂಧಿ

ನವದೆಹಲಿ, ನ.19: ವಿರೋಧ ಪಕ್ಷಗಳು ಚುನಾವಣೆಯನ್ನು ಬಹಿಷ್ಕರಿಸುವುದಿಲ್ಲ. ಬದಲಾಗಿ, ಚುನಾವಣಾ ಪ್ರಕ್ರಿಯೆಯಲ್ಲಿ ಭಾಗವಹಿಸುವ ಮೂಲಕವೇ ಪ್ರಜಾಪ್ರಭುತ್ವದ ಹಕ್ಕುಗಳಿಗಾಗಿ ಹೋರಾಟ ಮುಂದುವರಿಸಲಿವೆ ಎಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ತಿಳಿಸಿದ್ದಾರೆ.



ಅಮೆರಿಕ ಪ್ರವಾಸದಲ್ಲಿರುವ ರಾಹುಲ್ ಶಿಕಾಗೋ ವಿಶ್ವವಿದ್ಯಾನಿಲಯದಲ್ಲಿ ನಡೆದ ಸಂವಾದದಲ್ಲಿ ಮಾತನಾಡಿದರು. ಚುನಾವಣಾ ವ್ಯವಸ್ಥೆಯಲ್ಲಿ ಅಕ್ರಮಗಳು ನಡೆಯುತ್ತಿವೆ ಎಂಬ ಆರೋಪಗಳನ್ನು ಪ್ರಸ್ತಾಪಿಸಿದ ಅವರು, ಚುನಾವಣೆಯಿಂದ ಹಿಂದೆ ಸರಿಯುವುದು ಸಮಸ್ಯೆಗೆ ಪರಿಹಾರವಲ್ಲ. ವಿರೋಧ ಪಕ್ಷಗಳು ಚುನಾವಣೆಯಲ್ಲಿ ಭಾಗವಹಿಸದೇ ಇದ್ದರೆ ಪ್ರಜಾಪ್ರಭುತ್ವ ವ್ಯವಸ್ಥೆಯ ಹೋರಾಟಕ್ಕೆ ಹಿನ್ನಡೆಯಾಗಲಿದೆ ಎಂಬ ಅಭಿಪ್ರಾಯ ವ್ಯಕ್ತಪಡಿಸಿದರು.

ಚುನಾವಣಾ ಪ್ರಕ್ರಿಯೆಯಲ್ಲಿನ ಲೋಪದೋಷ ಗಳನ್ನು ಜನರ ಮುಂದಿಡುವುದು ಮತ್ತು ಈ ಕುರಿತು ಜಾಗೃತಿ ಮೂಡಿಸುವುದು ವಿರೋಧ ಪಕ್ಷಗಳ ಕಾರ್ಯತಂತ್ರವಾಗಿದೆ. ಚುನಾವಣಾ ವ್ಯವಸ್ಥೆಯ ವಿಶ್ವಾಸಾರ್ಹತೆಯನ್ನು ಪ್ರಶ್ನಿಸುವ ಹಲವು ವಿಚಾರಗಳಿವೆ. ಮತದಾರರ ಪಟ್ಟಿಯಲ್ಲಿನ ಲೋಪಗಳು ಹಾಗೂ ಮತದಾನದ ಪ್ರಕ್ರಿಯೆಗೆ ಸಂಬಂಧಿಸಿದ ಆರೋಪಗಳನ್ನು ಜನರ ಗಮನಕ್ಕೆ ತರಲಾಗುವುದು ಎಂದರು.

ಚುನಾವಣಾ ಆಯೋಗದ ಕಾರ್ಯವೈಖರಿ ಬಗ್ಗೆಯೂ ಅಸಮಾಧಾನ ವ್ಯಕ್ತಪಡಿಸಿದ ರಾಹುಲ್ ಗಾಂಧಿ, ಆಯೋಗದೊಳಗಿನಿಂದಲೂ ಕೆಲವು ಮಾಹಿತಿ ಹೊರಬರುತ್ತಿದೆ ಎಂದು ತಿಳಿಸಿದರು. ಮತದಾರರ ಹಕ್ಕುಗಳು ಮತ್ತು ಚುನಾವಣಾ ಪ್ರಕ್ರಿಯೆಯ ಪಾರದರ್ಶಕತೆ ಕಾಪಾಡುವುದು ತಮ್ಮ ಹೋರಾಟದ ಉದ್ದೇಶವಾಗಿದೆ ಎಂದು ಹೇಳಿದರು.

ಭಾರತದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವುದು ಹಾಗೂ ಜನರು ಯಾವುದೇ ಭಯವಿಲ್ಲದೆ ತಮ್ಮ ಅಭಿಪ್ರಾಯ ವ್ಯಕ್ತಪಡಿಸುವ ವಾತಾವರಣ ನಿರ್ಮಿಸುವುದು ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ವಿರೋಧ ಪಕ್ಷಗಳು ಚುನಾವಣಾ ರಾಜಕೀಯದಿಂದ ಹಿಂದೆ ಸರಿಯದೆ ಹೋರಾಟ ಮುಂದುವರಿಸಲಿವೆ ಎಂದು ಅವರು ಸ್ಪಷ್ಟಪಡಿಸಿದರು.

ಹಿರಿಯೂರು ಉಪಚುನಾವಣೆ: ಜೆಡಿಎಸ್ ಅಭ್ಯರ್ಥಿ ಕಣಕ್ಕಿಳಿಸಲು ಎಚ್.ಡಿ.ಕುಮಾರಸ್ವಾಮಿ ಒಲವು: ಅಮಿತ್‌ಶಾ ಜತೆ ಚರ್ಚೆ

ನವದೆಹಲಿ, ನ.19: ಹಿರಿಯೂರು ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಅಭ್ಯರ್ಥಿ ಆಯ್ಕೆ ವಿಚಾರವಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಜೆಡಿಎಸ್ ನಾಯಕ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ದೆಹಲಿಯಲ್ಲಿ ಭೇಟಿಯಾಗಿ ಚರ್ಚಿಸಿದ್ದಾರೆ.

ಹಿರಿಯೂರು ಕ್ಷೇತ್ರದಲ್ಲಿ ಜೆಡಿಎಸ್‌ಗೆ ಉತ್ತಮ ಅವಕಾಶಗಳಿದ್ದು, ಪಕ್ಷದ ಅಭ್ಯರ್ಥಿಯನ್ನು ಕಣಕ್ಕಿಳಿಸಲು ಅವಕಾಶ ನೀಡುವಂತೆ ಕುಮಾರಸ್ವಾಮಿ ಮನವಿ ಮಾಡಿದ್ದಾರೆ. ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿ ಗೆಲುವು ಸಾಧಿಸುವುದು ಮುಖ್ಯವಾಗಿದ್ದು, ಅದಕ್ಕಾಗಿ ಚುನಾವಣಾ ಕಾರ್ಯತಂತ್ರ ರೂಪಿಸಬೇಕೆಂದು ತಿಳಿಸಿದ್ದಾರೆ. ಈಗಾಗಲೇ ವಿಧಾನ ಪರಿಷತ್ತಿನ 4 ಕ್ಷೇತ್ರಗಳಲ್ಲಿ ಎನ್‌ಡಿಎ ಗೆಲುವು ಸಾಧಿಸಿರುವುದರಿಂದ ಹಿರಿಯೂರು ಕ್ಷೇತ್ರವನ್ನೂ ಗೆಲ್ಲಲೇಬೇಕೆಂದು



ಹೇಳಿದ್ದಾರೆ.ಅಭ್ಯರ್ಥಿ ಯಾರೇ ಆದರೂ ಗೆಲುವು ಸಾಧಿಸುವುದೇ ನಮ್ಮ ಉದ್ದೇಶ ಎಂದು ಅಭಿಪ್ರಾಯಪಟ್ಟಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿದ ಅಮಿತ್ ಶಾ, ಅಭ್ಯರ್ಥಿ ಆಯ್ಕೆ ಕುರಿತು ಶೀಘ್ರದಲ್ಲೇ ತೀರ್ಮಾನ ಕೈಗೊಳ್ಳುವುದಾಗಿ ತಿಳಿಸಿದ್ದಾರೆ. ಅಭ್ಯರ್ಥಿಯನ್ನು ಅಂತಿಮ ಗೊಳಿಸುವ ಮುನ್ನ ಎಚ್.ಡಿ. ದೇವೇಗೌಡರೊಂದಿಗೆ ಚರ್ಚಿಸುವಂತೆ ಕುಮಾರಸ್ವಾಮಿ ಮಾಡಿದ ಮನವಿಗೂ ಅಮಿತ್ ಶಾ ಸಮ್ಮತಿ ಸೂಚಿಸಿದ್ದಾರೆ.

ಬೆಂಗಳೂರುಅಭಿವೃದ್ಧಿಗೆ ವಿಶೇಷ ಒತ್ತು, ರಸ್ತೆಗಳಿಗೆ ಗ್ರಿಡ್ ವ್ಯವಸ್ಥೆ: ಸಿಎಂ ಡಿಕೆಶಿ

ಇಂದಿರಾ ಗಾಂಧಿ ಜನ್ಮದಿನಾಚರಣೆ ಅಂಗವಾಗಿ ರಾಜ್ಯದ ವಿವಿಧೆಡೆ ನಿರ್ಮಿಸಿರುವ 16 ನೂತನ ಇಂದಿರಾ ಕ್ಯಾಂಟೀನ್‌ಗಳ ಉದ್ಘಾಟನೆ

ಬೆಂಗಳೂರು, ನ.19: ರಾಜ್ಯದ ನಗರಗಳ ಸಮಗ್ರ ಅಭಿವೃದ್ಧಿ ಹಾಗೂ ಸುಗಮ ಸಂಚಾರ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ರಸ್ತೆಗಳಿಗೆ ಹೊಸ ಗ್ರಿಡ್ ವ್ಯವಸ್ಥೆ ರೂಪಿಸಲಾಗುವುದು. ಈ ಗ್ರಿಡ್‌ಗಾಗಿ ಮೀಸಲಿಡುವ ಜಾಗವನ್ನು ಹೊರತುಪಡಿಸಿ ಉಳಿದ ಪ್ರದೇಶಗಳಲ್ಲಿ ಮಾತ್ರ ಕಟ್ಟಡ ನಿರ್ಮಾಣ ಸೇರಿ ಇತರ ಕಾಮಗಾರಿಗಳನ್ನು ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚಿಸಿದರು.

ಭಾರತದ ಉಕ್ಕಿನ ಮಹಿಳೆ, ದೇಶದ ಮೂರನೇ ಪ್ರಧಾನಮಂತ್ರಿ ಇಂದಿರಾ ಗಾಂಧಿ ಅವರ ಜನ್ಮದಿನಾಚರಣೆ ಅಂಗವಾಗಿ ರಾಜ್ಯದ ವಿವಿಧ ನಗರಗಳಲ್ಲಿ ನಿರ್ಮಿಸಿರುವ 16 ನೂತನ ಇಂದಿರಾ ಕ್ಯಾಂಟೀನ್‌ಗಳ ಉದ್ಘಾಟನೆ ಹಾಗೂ ಉತ್ತಮ ಸ್ವಚ್ಛತೆ ಮತ್ತು ನಿರ್ವಹಣೆ ಮಾಡಿದ ಕ್ಯಾಂಟೀನ್‌ಗಳಿಗೆ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ನಗರ ಯೋಜನೆ ಖಾತೆಯನ್ನು ತಮ್ಮ ಬಳಿಯೇ ಇಟ್ಟುಕೊಂಡಿದ್ದು, ರಾಜ್ಯದ ನಗರಗಳ ಸಮಗ್ರ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಲಾಗುತ್ತಿದೆ ಎಂದರು.

ಇಂದಿರಾ ಎಂಬ ಹೆಸರೇ ಹಸಿವು ಮತ್ತು ಬಡತನ ನಿವಾರಣೆಯ ಸಂಕೇತವಾಗಿದೆ. ರಾಜೀವ್‌ಗಾಂಧಿ ಸ್ಮಾರಕವಿರುವ ತಮಿಳುನಾಡಿನ ಶ್ರೀಪೆರಂಬದೂರಿಗೆ ಕಳೆದ 15 ವರ್ಷಗಳಿಂದ ನಿರಂತರವಾಗಿ ಭೇಟಿ ನೀಡುತ್ತಿದ್ದೇನೆ. ಅಲ್ಲಿ ಕನಕಪುರದ ಕಲ್ಲನ್ನು ಸ್ಮಾರಕ ನಿರ್ಮಾಣಕ್ಕೆ ನೀಡಲಾಗಿದೆ. ತಮಿಳುನಾಡಿನಲ್ಲಿ ಅಮ್ಮ ಕ್ಯಾಂಟೀನ್‌ಗಳನ್ನು ನೋಡಿದಾಗ ಆಶ್ಚರ್ಯವಾಗಿತ್ತು. ಅಲ್ಲಿಂದ ಹಿಂದಿರುಗಿ ಆಗಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಈ ಮಾದರಿಯ ಬಗ್ಗೆ ತಿಳಿಸಿದ್ದೆ. ಬಡವರಿಗೆ ಕಡಿಮೆ ದರದಲ್ಲಿ ಆಹಾರ ಒದಗಿಸುವ ಉದ್ದೇಶದಿಂದ ಇಂದಿರಾ ಕ್ಯಾಂಟೀನ್ ಯೋಜನೆ ಜಾರಿಗೆ ತರಲಾಯಿತು ಎಂದರು.

ಕಳೆದ ಮೂರು ವರ್ಷಗಳಿಂದ ಪೌರಾಡಳಿತ ಇಲಾಖೆಗೆ ನಿರೀಕ್ಷಿತ ಪ್ರಮಾಣದಲ್ಲಿ ಅನುದಾನ ನೀಡಲು ಸಾಧ್ಯವಾಗಿರಲಿಲ್ಲ. ಗ್ಯಾರಂಟಿ



ಹಸಿವುಮುಕ್ತ ರಾಜ್ಯ ನಿರ್ಮಾಣ ಸರ್ಕಾರದ ಗುರಿ

ರಾಜ್ಯವನ್ನು ಹಸಿವು ಮುಕ್ತಗೊಳಿಸುವುದು ಸರ್ಕಾರದ ಗುರಿಯಾಗಿದೆ. ಬಡವನ ತಟ್ಟೆಯಲ್ಲಿ ಅನ್ನವಿದ್ದಾಗ ಮಾತ್ರ ಅಭಿವೃದ್ಧಿಗೆ ನಿಜವಾದ ಅರ್ಥ ಬರುತ್ತದೆ. ದುಡಿಯುವ ಜನರ ಮುಖದಲ್ಲಿ ನಗು ಇರಬೇಕು. ಹಸಿವಿಗೆ ಯಾವುದೇ ಜಾತಿ, ಧರ್ಮದ ಭೇದವಿಲ್ಲ. ಕಾಂಗ್ರೆಸ್ ಸರ್ಕಾರ ಐದು ಗ್ಯಾರಂಟಿ ಯೋಜನೆಗಳೂ ಸೇರಿದಂತೆ ಬಡವರ ಜೀವನಮಟ್ಟ ಸುಧಾರಿಸಲು ಹಲವು ಯೋಜನೆಗಳನ್ನು ಜಾರಿಗೊಳಿಸಿದೆ. ಇಂದಿರಾ ಕ್ಯಾಂಟೀನ್‌ಗಳ ಸಂಖ್ಯೆಯನ್ನು ರಾಜ್ಯಾದ್ಯಂತ 383ಕ್ಕೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು. ಬಿಜೆಪಿ ಮತ್ತು ಜೆಡಿಎಸ್ ಶಾಸಕರಿರುವ ಕೆಲವು ಕ್ಷೇತ್ರಗಳಲ್ಲಿ ಇಂದಿರಾ ಕ್ಯಾಂಟೀನ್‌ಗಳನ್ನು ಮುಚ್ಚಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ ಅವರು, ಬಡವರಿಗೆ ಅನುಕೂಲವಾಗುವ ಇಂತಹ ಯೋಜನೆಗಳನ್ನು ರಾಜಕೀಯ ಕಾರಣಗಳಿಗಾಗಿ ಸ್ಥಗಿತಗೊಳಿಸಬಾರದು ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

ಯೋಜನೆಗಳ ಕಾರಣದಿಂದ ಹಣಕಾಸಿನ ಹಂಚಿಕೆಯಲ್ಲಿ ಕೆಲವು ಮಿತಿಗಳಿದ್ದವು. ಈ ವರ್ಷ ಇಲಾಖೆಗೆ ಅಗತ್ಯ ಅನುದಾನ ನೀಡಲಾಗುವುದು. ತಮ್ಮ ಅಧಿಕಾರಾವಧಿಯಲ್ಲಿ ಉತ್ತಮ ಕೆಲಸ ಮಾಡಬೇಕೆಂಬ ಮಹತ್ವಾಕಾಂಕ್ಷೆ ಹೊಂದಿದ್ದೇನೆ. ಇಲಾಖೆಯಲ್ಲಿ ಪ್ರತಿಯೊಂದು ವೆಚ್ಚಕ್ಕೂ ಲೆಕ್ಕವಿರಬೇಕು. ಯಾವುದೇ ಅವ್ಯವಹಾರ ಅಥವಾ ಅಕ್ರಮಗಳಿಗೆ ಅವಕಾಶ ನೀಡುವುದಿಲ್ಲ. ಪಾರದರ್ಶಕ ಆಡಳಿತಕ್ಕೆ ಎಲ್ಲರೂ ಬದ್ಧರಾಗಿರಬೇಕು. ಇಲ್ಲವಾದರೆ ಬಡಿದು ಹಾಕಿ ಬಿಡುತ್ತೇನೆ ಎಂದು ಎಚ್ಚರಿಕೆ ನೀಡಿದರು.

ವಿಧಾನ ಪರಿಷತ್ ಸದಸ್ಯ ಸುಧಾಮ ದಾಸ್ ಸೇರಿದಂತೆ ಹಲವು ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ 23ಕ್ಕೂ ಹೆಚ್ಚು ಕಡೆಗಳಿಂದ ಜನಪ್ರತಿನಿಧಿಗಳು ಮತ್ತು ಜಿಲ್ಲಾ

ಪೌರಾಡಳಿತ ಇಲಾಖೆಯಿಂದಲೇ ಇಂದಿರಾ ಜನ್ಮ ದಿನಾಚರಣೆ



ಪೌರಾಡಳಿತ ಸಚಿವ ಎಚ್.ಸಿ. ಬಾಲಕೃಷ್ಣ ಮಾತನಾಡಿ, ಇನ್ನು ಮುಂದೆ ಪ್ರತಿವರ್ಷ ಪೌರಾಡಳಿತ ಇಲಾಖೆಯಿಂದ ಇಂದಿರಾ ಗಾಂಧಿ ಅವರ ಜನದಿನಾಚರಣೆಯನ್ನು ನಡೆಸ ಲಾಗುವುದು. ಅಂದು ಇಂದಿರಾ ಕ್ಯಾಂಟೀನ್‌ಗಳಲ್ಲಿ ಸಿಹಿ ವಿತರಿಸ ಲಾಗುವುದು ಎಂದರು.

53 ತ್ಯಾಜ್ಯ ವಸ್ತುಗಳ ಮರುಸಂಗ್ರಹ ಕೇಂದ್ರ

ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಮಾತನಾಡಿ, ಸ್ವಚ್ಛ ಭಾರತ ಯೋಜನೆಯಡಿ ಹಲವು ಕಾರ್ಯಕ್ರಮ ಅನುಷ್ಠಾನ



ಗೊಳಿಸಲಾಗುತ್ತಿದೆ. ರಾಜ್ಯದಲ್ಲಿ 53 ತ್ಯಾಜ್ಯ ವಸ್ತುಗಳ ಮರುಪಡೆಯುವಿಕೆ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ. ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ತ್ಯಾಜ್ಯ ನಿರ್ವಹಣೆ ದೊಡ್ಡ ಸವಾಲಾಗಿದ್ದು, ಆಧುನಿಕ ತಂತ್ರಜ್ಞಾನ ಬಳಸಿ ವೈಜ್ಞಾನಿಕವಾಗಿ ನಿರ್ವಹಿಸ ಬೇಕಿದೆ ಎಂದು ಹೇಳಿದರು.

ಉಸ್ತುವಾರಿ ಸಚಿವರು ವರ್ಚುವಲ್ ಮೂಲಕ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಗೋದಾವರಿ-ಕಾವೇರಿ ಜೋಡಣೆಯಿಂದ ನಾಲ್ಕು ರಾಜ್ಯಗಳ ನಡುವಿನ ತಿಕ್ಕಾಟ ಅಂತ್ಯ

ವಿಶಾಖಪಟ್ಟಣಂ, ನ.19: ನಾಲ್ಕು ರಾಜ್ಯಗಳ ತಿಕ್ಕಾಟಕ್ಕೆ ಕಾರಣವಾಗಿರುವ ನದಿನೀರು ಹಂಚಿಕೆ ವಿಚಾರವಾಗಿ ಇನ್ನು ಮುಂದೆ ಯಾವುದೇ ಗಲಾಟೆಗಳು ಇರುವುದಿಲ್ಲ ಎಂದು ಆಂಧ್ರಪ್ರದೇಶ ಸಿಎಂ ಎನ್. ಚಂದ್ರಬಾಬುನಾಯ್ಡು ವಿಶ್ವಾಸ ವ್ಯಕ್ತಪಡಿಸಿದರು.

ವಿಶಾಖಪಟ್ಟಣಂನಲ್ಲಿ ಆಯೋಜಿಸಿದ್ದ ಸಿಐಐ ಪಾಲುದಾರಿಕೆ ಸಮಾವೇಶದ ಸಂದರ್ಭದಲ್ಲಿ ಮಾತನಾಡಿದ ಅವರು, ಗೋದಾವರಿ ಮತ್ತು ಕಾವೇರಿ ನದಿಗಳನ್ನು ಜೋಡಿಸುವ ಮಹತ್ವಾಕಾಂಕ್ಷೆಯ ಯೋಜನೆಗೆ ಮತ್ತೆ ವೇಗ ನ

ಮಹಿಳಾ ಮತದಾರರ ಮೇಲೆ ಬಿಜೆಪಿ ಕಣ್ಣು

ಉತ್ತರ ಪ್ರದೇಶ ವಿಧಾನಸಭೆ ಚುನಾವಣೆ: 403 ಕ್ಷೇತ್ರಗಳಲ್ಲೂ ಮಹಿಳಾ ವಿಸ್ತಾರಕರ ನಿಯೋಜನೆಗೆ ಸಿದ್ಧತೆ

ನವದೆಹಲಿ, ನ.19: 2027ರ ಉತ್ತರ ಪ್ರದೇಶ ವಿಧಾನಸಭೆ ಚುನಾವಣೆಗೆ ಭಾರತೀಯ ಜನತಾ ಪಕ್ಷ ಈಗಿನಿಂದಲೇ ಸಿದ್ಧತೆ ಆರಂಭಿಸಿದೆ. ಈ ಬಾರಿ ಮಹಿಳಾ ಮತದಾರರನ್ನು ಗುರಿಯಾಗಿಸಿಕೊಂಡು ವಿಶೇಷ ಕಾರ್ಯತಂತ್ರ ರೂಪಿಸಿರುವ ಬಿಜೆಪಿ, ರಾಜ್ಯದ ಎಲ್ಲ 403 ವಿಧಾನಸಭಾ ಕ್ಷೇತ್ರಗಳಲ್ಲೂ ಮಹಿಳಾ ವಿಸ್ತಾರಕರನ್ನು ನಿಯೋಜಿಸಲು ಯೋಜನೆ ರೂಪಿಸಿದೆ.

ಬಿಜೆಪಿ ಮಹಿಳಾ ಮೋರ್ಚಾ ಮೂಲಕ ಈ ಅಭಿಯಾನ ನಡೆಸಲು ಉದ್ದೇಶಿಸಲಾಗಿದ್ದು, ಮಹಿಳಾ ಕಾರ್ಯಕರ್ತರು ಮನೆಮನೆಗೆ ತೆರಳಿ ಮಹಿಳಾ ಮತದಾರರೊಂದಿಗೆ ನೇರ ಸಂವಾದ ನಡೆಸಲಿದ್ದಾರೆ. ಈ ಸಂದರ್ಭದಲ್ಲಿ ಕೇಂದ್ರ ಮತ್ತು ಯೋಗಿ ಆದಿತ್ಯನಾಥ ನೇತೃತ್ವದ ರಾಜ್ಯ ಸರ್ಕಾರದ ಕಲ್ಯಾಣ ಯೋಜನೆಗಳು, ಮಹಿಳೆಯರ ಸುರಕ್ಷತೆ ಹಾಗೂ ಸಬಲೀಕರಣಕ್ಕಾಗಿ ಕೈಗೊಂಡಿರುವ ಕ್ರಮಗಳ ಕುರಿತು ಮಾಹಿತಿ ನೀಡಲಿದ್ದಾರೆ. ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿನ ಮಹಿಳೆಯರನ್ನು ನೇರವಾಗಿ ತಲುಪುವುದು ಈ ಅಭಿಯಾನದ ಪ್ರಮುಖ ಉದ್ದೇಶವಾಗಿದೆ. ಸರ್ಕಾರಿ ಯೋಜನೆಗಳ ಫಲಾನುಭವಿಗಳನ್ನೂ ಸಂಪರ್ಕಿಸಿ, ಸರ್ಕಾರದ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡುವ ಮೂಲಕ ಮಹಿಳೆಯರನ್ನು ಪಕ್ಷದ ಸಂಘಟನೆಯೊಂದಿಗೆ ಬೆಸೆಯಲು ಬಿಜೆಪಿ ಮುಂದಾಗಿದೆ.



ಮಹಿಳೆಯರಿಗೆ ಹೆಚ್ಚಿನ ಪ್ರಾತಿನಿಧ್ಯ

ಮಹಿಳಾ ಮತದಾರರನ್ನು ತಲುಪುವುದರ ಜತೆಗೆ ಪಕ್ಷದ ಸಂಘಟನೆಯಲ್ಲೂ ಮಹಿಳೆಯರ ಪಾಲ್ಗೊಳ್ಳುವಿಕೆಯನ್ನು ಹೆಚ್ಚಿಸಲು ಬಿಜೆಪಿ ಯೋಜಿಸಿದೆ. ಸಂಘಟನಾ ವಿಸ್ತಾರಕರ ಪೈಕಿ ಶೇ.50ರಷ್ಟು ಮಹಿಳೆಯರಿಗೆ ಅವಕಾಶ ಕಲ್ಪಿಸುವ ಉದ್ದೇಶ ಹೊಂದಿದೆ. ಬೂತ್ ಮಟ್ಟದಿಂದ ವಿಧಾನಸಭಾ ಕ್ಷೇತ್ರದವರೆಗೆ ಮಹಿಳಾ ಕಾರ್ಯಕರ್ತರ ಜಾಲವನ್ನು ಬಲಪಡಿಸುವುದು ಇದರ ಗುರಿಯಾಗಿದೆ.

ಇಂದು ಲಖನೌದಲ್ಲಿ ಕಾರ್ಯಾಗಾರ

ಚುನಾವಣಾ ಸಿದ್ಧತೆಗಳಿಗೆ ವೇಗ ನೀಡಲು ನವೆಂಬರ್ 20ರಂದು ಲಖನೌದಲ್ಲಿ ಬಿಜೆಪಿ ಮಹಿಳಾ ಮೋರ್ಚಾದ ರಾಜ್ಯಮಟ್ಟದ ಕಾರ್ಯಾಗಾರ ನಡೆಯಲಿದೆ. ಮುಖ್ಯಮಂತ್ರಿ ಯೋಗಿ ಆದಿತ್ಯನಾಥ, ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ಉತ್ತರ ಪ್ರದೇಶ ಉಸ್ತುವಾರಿ ವಿನೋದ್ ತಾವ್ಡೆ ಭಾಗವಹಿಸುವ ನಿರೀಕ್ಷೆಯಿದೆ. ರಾಜ್ಯ ಘಟಕದ ಅಧ್ಯಕ್ಷ ಪಂಕಜ್ ಚೌಧರಿ, ರಾಜ್ಯ ಸಹ ಉಸ್ತುವಾರಿ ಹಾಗೂ ರಾಜ್ಯಸಭಾ ಸದಸ್ಯೆ ಮೇಧಾ ಕುಲಕರ್ಣಿ ಮತ್ತು ಮಹಿಳಾ ಮೋರ್ಚಾ ರಾಜ್ಯ ಅಧ್ಯಕ್ಷೆ ಸರೋಜ್ ಕುಶ್ವಾಹ ಸೇರಿದಂತೆ ಹಲವು ಪದಾಧಿಕಾರಿಗಳು ಕಾರ್ಯಾಗಾರದಲ್ಲಿ ಪಾಲ್ಗೊಳ್ಳಲಿದ್ದಾರೆ. ಮಹಿಳಾ ಮೋರ್ಚಾದ ಜವಾಬ್ದಾರಿಗಳು, ಸಂಘಟನಾ ವಿಸ್ತರಣೆ, ಚುನಾವಣಾ ಸಿದ್ಧತೆ ಮತ್ತು ಮಹಿಳಾ ಮತದಾರರನ್ನು ತಲುಪುವ ಕಾರ್ಯತಂತ್ರಗಳ ಕುರಿತು ಚರ್ಚೆ ನಡೆಯಲಿದೆ.



ನವದೆಹಲಿಯ ಸುಷ್ಮಾ ಸ್ವರಾಜ್ ಭವನದಲ್ಲಿ ಗುರುವಾರ ಯೋಜಿಸಿದ್ದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯ ಶೃಂಗಸಭೆಯ ಸಮಾರೋಪ ಅಧಿವೇಶನದಲ್ಲಿ ಪ್ರಧಾನಮಂತ್ರಿ ಮೋದಿ ಭಾಗವಹಿಸಿದ್ದರು.

ಸತತ 8ನೇ ದಿನವೂ ಕುಸಿದ ಬಂಗಾರದ ಬೆಲೆ

ನವದೆಹಲಿ, ನ.19: ಚಿನ್ನ ಮತ್ತು ಬೆಳ್ಳಿ ಆಭರಣಗಳನ್ನು ಖರೀದಿಸಲು ಕಾಯುತ್ತಿರುವವರಿಗೆ ಮಾರುಕಟ್ಟೆಯಿಂದ ಇಂದು ಕೂಡ ಭರ್ಜರಿ ಸಿಹಿಸುದ್ದಿ ಸಿಕ್ಕಿದೆ. ಕಳೆದ ವಹಿವಾಟಿನಲ್ಲಿ ಭಾರಿ ಕುಸಿತ ಕಂಡಿದ್ದ ಚಿನ್ನ ಮತ್ತು ಬೆಳ್ಳಿ ದರಗಳು, ದೇಶೀಯ ಮಾರುಕಟ್ಟೆಯಲ್ಲಿ ಗುರುವಾರ (ನವೆಂಬರ್ 19) ಬೆಳಿಗಿನ ವಹಿವಾಟಿನಲ್ಲಿ ಕೊಂಚ ಸ್ಥಿರತೆಯನ್ನು ಕಾಯ್ದುಕೊಂಡಂತೆ ಕಂಡುಬಂದರೂ ಇಳಿಕೆಯ ಹಾದಿಯಲ್ಲೇ ಮುಂದುವರಿದಿವೆ.

ಅಮೆರಿಕನ್ ಡಾಲರ್ ಮೌಲ್ಯ ಬಲಗೊಳ್ಳುತ್ತಿರುವುದು, ಟ್ರೆಜರಿ ಬಾಂಡ್ ಯೀಲ್ಡ್‌ಗಳ ಏರಿಕೆ ಹಾಗೂ ಅಮೆರಿಕದ ಫೆಡರಲ್ ರಿಸರ್ವ್ ತನ್ನ ಕಠಿಣ ಹಣಕಾಸು ನೀತಿಯನ್ನು ಮುಂದುವರಿಸುವ ನಿರೀಕ್ಷೆಗಳು ಅಮೂಲ್ಯ ಲೋಹಗಳ ಬೆಲೆಯ ಮೇಲೆ



ತೀವ್ರ ಒತ್ತಡ ಹೇರುತ್ತಿದ್ದು, ಚಿನ್ನ-ಬೆಳ್ಳಿ ದರಗಳು ದಿಢೀರ್ ಕುಸಿತ ಕಂಡಿವೆ.

ಗುರುವಾರದ ಮಾರುಕಟ್ಟೆ ದರಗಳನ್ನು ಗಮನಿಸುವುದಾದರೆ, ಹೈದರಾಬಾದ್ ಬುಲಿಯನ್ ಮಾರುಕಟ್ಟೆಯಲ್ಲಿ 24 ಕ್ಯಾರೆಟ್‌ನ 10 ಗ್ರಾಂ ಅಪರಂಜಿ ಚಿನ್ನದ ಬೆಲೆಯಲ್ಲಿ ಬರೋಬ್ಬರಿ 2,570 ರೂಪಾಯಿಗಳಷ್ಟು ಭಾರಿ ಇಳಿಕೆಯಾಗಿದ್ದು, ದರವು 1,30,690 ರೂಪಾಯಿಗಳಿಗೆ ಸೀಮಿತವಾಗಿದೆ. ಅದೇ ರೀತಿ, ಆಭರಣ ತಯಾರಿಕೆಗೆ ಬಳಸುವ 22 ಕ್ಯಾರೆಟ್‌ನ 10 ಗ್ರಾಂ ಚಿನ್ನದ ದರದಲ್ಲಿ 2,350 ರೂಪಾಯಿ ಕಡಿತಗೊಂಡು 1,19,800 ರೂಪಾಯಿಗಳಿಗೆ ತಲುಪಿದೆ. ಇನ್ನು ಬೆಳ್ಳಿಯ ದರದಲ್ಲೂ ಭಾರಿ ಕುಸಿತ ದಾಖಲಾಗಿದ್ದು, ಪ್ರತಿ ಕೆಜಿ ಬೆಳ್ಳಿ ಬೆಲೆ ಮತ್ತೊಮ್ಮೆ 5,000 ರೂಪಾಯಿ ಇಳಿಕೆಯಾಗಿ 1,80,000 ರೂಪಾಯಿಗಳಿಗೆ ಬಂದು ನಿಂತಿದೆ.

ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ನಡೆಯುತ್ತಿರುವ ಆರ್ಥಿಕ ಬೆಳವಣಿಗೆಗಳ ನೇರ ಪರಿಣಾಮದಿಂದಾಗಿ ಚಿನ್ನ ಮತ್ತು ಬೆಳ್ಳಿ ದರಗಳಲ್ಲಿ ಕುಸಿತ ಕಾಣುತ್ತಿದೆ. ವಿಶೇಷವಾಗಿ ಅಮೆರಿಕದ ಆರ್ಥಿಕ ಸ್ಥಿತಿಗತಿಗಳು ಮತ್ತು ಹಣಕಾಸು ನೀತಿಯ ಕುರಿತು ಹೂಡಿಕೆದಾರರಲ್ಲಿರುವ ನಿರೀಕ್ಷೆಗಳು ಬುಲಿಯನ್ ಮಾರುಕಟ್ಟೆಯ ಮೇಲೆ ಗಾಢ ಪ್ರಭಾವ ಬೀರಿವೆ. ಇದರ ಪರಿಣಾಮವಾಗಿ ಮಲ್ಟಿ ಕಮಾಡಿಟಿ ಎಕ್ಸ್ಚೇಂಜ್‌ನಲ್ಲಿ ಡಿಸೆಂಬರ್ 4ರ ಅವಧಿಯ ಚಿನ್ನದ ಫ್ಯೂಚರ್ಸ್ ಬೆಲೆಯು ಬುಧವಾರದ ವಹಿವಾಟಿನ ಅಂತ್ಯಕ್ಕೆ ಶೇ. 3.24 ರಷ್ಟು ಕುಸಿದು ಪ್ರತಿ 10 ಗ್ರಾಂಗೆ 1,29,880 ರೂಪಾಯಿಗಳಿಗೆ ತಲುಪಿದ್ದರೆ, ಬೆಳ್ಳಿ ಫ್ಯೂಚರ್ಸ್ ಶೇ. 5.26 ರಷ್ಟು ಇಳಿಕೆಯಾಗಿ ಪ್ರತಿ ಕೆಜಿಗೆ 1,60,775 ರೂಪಾಯಿಗಳಿಗೆ ಕುಸಿದಿದೆ. ಇದಲ್ಲದೆ, ಇತರ ಎಂಸಿಎಕ್ಸ್ ಸ್ಪಾಟ್ ಮಾನದಂಡದ ಬೆಲೆಗಳಲ್ಲಿಯೂ ಇಳಿಕೆ ಕಂಡುಬಂದಿದ್ದು, 10 ಗ್ರಾಂ ಚಿನ್ನ 1,30,921 ರೂಪಾಯಿ ಮತ್ತು ಪ್ರತಿ ಕೆಜಿ ಬೆಳ್ಳಿ 1,69,016 ರೂಪಾಯಿಗಳಲ್ಲಿ ವಹಿವಾಟು ನಡೆಸಿದೆ. ಒಟ್ಟಾರೆಯಾಗಿ, ಜಾಗತಿಕ ಮಟ್ಟದಲ್ಲಿ ಅಮೆರಿಕನ್ ಡಾಲರ್ ಬಲವರ್ಧನೆ, ಏರುತ್ತಿರುವ ಬಾಂಡ್ ಯೀಲ್ಡ್‌ಗಳು ಮತ್ತು ಬಡ್ಡಿದರಗಳ ಏರಿಕೆಯ ಆತಂಕವೇ ಚಿನ್ನ ಮತ್ತು ಬೆಳ್ಳಿ ಬೆಲೆಗಳ ಈ ನಿರಂತರ ಕುಸಿತಕ್ಕೆ ಪ್ರಮುಖ ಕಾರಣವಾಗಿದ್ದು, ಆಭರಣ ಪ್ರಿಯರಿಗೆ ಖರೀದಿಸಲು ಇದೊಂದು ಉತ್ತಮ ಅವಕಾಶವಾಗಿ ಪರಿಣಮಿಸಿದೆ.

ಉದ್ಯೋಗದಲ್ಲಿ ಸ್ಥಳೀಯರಿಗೆ ಆದ್ಯತೆ ನೀಡಿ: ಸಿಎಂ ಉಮರ್ ಅಬ್ದುಲ್ಲಾ

ಕೇಂದ್ರಾಡಳಿತ ಪ್ರದೇಶದಲ್ಲಿ ಉದ್ಯಮ ಸ್ಥಾಪಿಸುವವರಿಗೆ ಕಟ್ಟುನಿಟ್ಟಿನ ಸೂಚನೆ

ಶ್ರೀನಗರ, ನ.19: ಕೇಂದ್ರಾಡಳಿತ ಪ್ರದೇಶದಲ್ಲಿ ಉದ್ಯಮಗಳನ್ನು ಸ್ಥಾಪಿಸುವ ಕಂಪನಿಗಳು ಸ್ಥಳೀಯ ಯುವಕರಿಗೆ ಉದ್ಯೋಗ ನೀಡಲೇಬೇಕು ಎಂದು ಜಮ್ಮು ಮತ್ತು ಕಾಶ್ಮೀರದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಕಟ್ಟುನಿಟ್ಟಾಗಿ ಸೂಚಿಸಿದ್ದಾರೆ. ಹೊರಗಿನವರಿಗೆ ಉದ್ಯೋಗ ನೀಡುವ ಪ್ರಯತ್ನಗಳನ್ನು ತಮ್ಮ ಸರ್ಕಾರ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ಅವರು ಎಚ್ಚರಿಸಿದ್ದಾರೆ.

ಕಥುವಾದಲ್ಲಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದ ಅವರು, ತರಬೇತಿ ಪಡೆದ ಸ್ಥಳೀಯ ಯುವಕರು ಲಭ್ಯವಿಲ್ಲ ಎಂಬ ನೆಪವನ್ನು ಒಪ್ಪುವುದಿಲ್ಲ. ನಮ್ಮ ಯುವಕರಿಗೆ



ತರಬೇತಿ ನೀಡಲು ನಾವು ನಿಮಗೆ ಆರು ತಿಂಗಳು ಅಥವಾ ಒಂದು ವರ್ಷದ ಕಾಲಾವಕಾಶ ನೀಡುತ್ತೇವೆ. ನಮ್ಮಲ್ಲಿ ಅಕಾಡೆಮಿಗಳು, ತರಬೇತಿ ಕೇಂದ್ರಗಳು, ಕಾಲೇಜು ಮತ್ತು ವಿಶ್ವವಿದ್ಯಾಲಯಗಳಿವೆ ಎಂದು ಸ್ಪಷ್ಟಪಡಿಸಿದರು.

ಜಮ್ಮು, ಸಾಂಬಾ ಮತ್ತು ಕಥುವಾ ಜಿಲ್ಲೆಗಳಲ್ಲಿ 30 ಕೋಟಿ ರೂ.ಗೂ ಅಧಿಕ ಮೌಲ್ಯದ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡುತ್ತಿದ್ದರು. ಜಮ್ಮು ಮತ್ತು ಕಾಶ್ಮೀರದ ವಿಶೇಷ ಸ್ಥಾನಮಾನದ ಮರುಸ್ಥಾಪನೆ ವಿಚಾರದಲ್ಲಿ ತಾವು ಕೇಂದ್ರ ಸರ್ಕಾರದ ಬಗ್ಗೆ ಮೃದು ಧೋರಣೆ ತಾಳಿದ್ದಾರೆ ಎಂದು ಪಿಡಿಪಿ ಸೇರಿದಂತೆ ರಾಜಕೀಯ ವಿರೋಧಿಗಳು ಮಾಡುತ್ತಿರುವ ಆರೋಪಗಳಿಗೆ ತಿರುಗೇಟು ನೀಡುವಂತೆಯೂ ಅವರ ಈ ಹೇಳಿಕೆ ಕಂಡುಬಂದಿದೆ.

ಮತ್ತೊಂದೆಡೆ, ರಾಜ್ಯ ಸ್ಥಾನಮಾನ ಮತ್ತು ವಿಶೇಷ ಸ್ಥಾನಮಾನದ ಮರುಸ್ಥಾಪನೆ ಬೇಡಿಕೆಯು ಆಡಳಿತಾರೂಢ ನ್ಯಾಷನಲ್ ಕಾನ್ಫರೆನ್ಸ್ ಪಕ್ಷದ ಒಳಗೂ ಅಸಮಾಧಾನಕ್ಕೆ ಕಾರಣವಾಗಿದೆ. ಕೇಂದ್ರಾಡಳಿತ ಪ್ರದೇಶದಲ್ಲಿ ಸರ್ಕಾರ ರಚಿಸಿದ ನಂತರ ಪಕ್ಷದ ನಾಯಕತ್ವವು ಈ ವಿಚಾರದಲ್ಲಿ ರಾಜಿ ಮಾಡಿಕೊಂಡಿದೆ ಎಂಬ ಭಾವನೆ ಹಲವು ನಾಯಕರಲ್ಲಿದೆ. ಇದೇ ಕಾರಣಕ್ಕೆ, 370ನೇ ವಿಧಿಯಡಿ ಲಭ್ಯವಿದ್ದ ವಿಶೇಷ ಸ್ಥಾನಮಾನದ ನಿಲುವನ್ನು ಪಕ್ಷ ದುರ್ಬಲಗೊಳಿಸಿದೆ ಎಂದು ಆರೋಪಿಸಿ ಸಂಸದ ಅಗಾ ಸೈಯದ್ ರುಹುಲ್ಲಾ ಮೆಹದಿ ಅವರು ಇತ್ತೀಚೆಗೆ ಪಕ್ಷಕ್ಕೆ ಮತ್ತು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು.

ಜಮ್ಮು ಮತ್ತು ಕಾಶ್ಮೀರದಲ್ಲಿ ಪ್ರತಿಭೆಗಳಿಗೆ ಕೊರತೆಯಿಲ್ಲ. ಇಲ್ಲಿನ ಯುವಕರಿಗೆ ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಲು ಅವಕಾಶಗಳ ಅಗತ್ಯವಿದೆ ಎಂದರು. ಜಮ್ಮು ಮತ್ತು ಕಾಶ್ಮೀರದ ಯುವಕರು ಕ್ರೀಡೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ತಮ್ಮ ಸಾಮರ್ಥ್ಯವನ್ನು ತೋರಿಸಿದ್ದಾರೆ ಮತ್ತು ದೇಶಾದ್ಯಂತ ಸೇವೆ ಸಲ್ಲಿಸುತ್ತಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಯುವಕರಿಲ್ಲದ ಸೇನಾ ರೆಜಿಮೆಂಟ್ ದೇಶದಲ್ಲಿದೆಯೇ ನಮ್ಮ ಯುವಕರು ನಿಯೋಜನೆಗೊಳ್ಳದ ಪ್ರದೇಶವಿದೆಯೇ ನೀವು ಎತ್ತ ನೋಡಿದರೂ ನಮ್ಮ ಯುವಕರು ದೇಶಸೇವೆಯಲ್ಲಿ ತೊಡಗಿರುವುದು ಕಾಣುತ್ತದೆ. ಅವರಿಗೆ ಕೇವಲ ಅವಕಾಶದ ಅಗತ್ಯವಿದೆ ಎಂದರು.

ಪಟಾಕಿ ಸದ್ದಿಗೆ ಬೆದರಿದ ಆನೆಗಳು

ಜೈಪುರ, ನ.19: ರಾಜಸ್ಥಾನದ ಜೈಪುರದಲ್ಲಿ ಸಂಭ್ರಮದ ಕಾರ್ಯಕ್ರಮವೊಂದರ ನಡುವೆ ಪಟಾಕಿಗಳ ಭಾರಿ ಶಬ್ದಕ್ಕೆ ಬೆದರಿದ ಎರಡು ಸಿಂಗಾರಗೊಂಡ ಆನೆಗಳು ಏಕಾಏಕಿ ಜನರತ್ತ ಓಡಿದ ಘಟನೆ ನಡೆದಿದೆ. ಅದೃಷ್ಟವಶಾತ್ ಮಾವುತರ ಸಮಯಪ್ರಜ್ಞೆಯಿಂದ ಸಂಭವಿಸಬಹುದಾಗಿದ್ದ ದೊಡ್ಡ ಅನಾಹುತ ಕೂದಲೆಳೆಯ ಅಂತರದಲ್ಲಿ ತಪ್ಪಿದೆ. ಜೈಪುರ ನಗರದ 299ನೇ ಸಂಸ್ಥಾಪನಾ ದಿನಾಚರಣೆಯ ಅಂಗವಾಗಿ ಬುಧವಾರ ಸಂಜೆ ಇಲ್ಲಿನ ಸ್ಟ್ಯಾಚ್ಯೂ ಸರ್ಕಲ್‌ನಲ್ಲಿ ಭವ್ಯ ಕಾರ್ಯಕ್ರಮ ಆಯೋಜಿಸಲಾಗಿತ್ತು. ಈ ವಿಶೇಷ ಸಂದರ್ಭದಲ್ಲಿ 11,000 ದೀಪಗಳ ಆಕರ್ಷಕ ಬೆಳಕಿನ ಪ್ರದರ್ಶನವನ್ನೂ ಏರ್ಪಡಿಸಲಾಗಿತ್ತು. ಕಾರ್ಯಕ್ರಮದ ಸಂಭ್ರಮ ಹೆಚ್ಚಿಸಲು ಭಾರಿ ಪ್ರಮಾಣದಲ್ಲಿ ಪಟಾಕಿ ಮತ್ತು ಸಿಡಿಮದ್ದುಗಳನ್ನು ಸಿಡಿಸಲಾಯಿತು.

ಪಟಾಕಿಗಳ ಭಾರಿ ಶಬ್ದ ಮತ್ತು ಬೆಳಕಿನಿಂದ ಬೆದರಿದ ಎರಡು ಅಲಂಕೃತ ಆನೆಗಳು ಏಕಾಏಕಿ ಗಾಬರಿಗೊಂಡು ನಿಯಂತ್ರಣ ತಪ್ಪಿದವು. ಬಳಿಕ ರಸ್ತೆ ಡಿವೈಡರ್‌ನ್ನು ದಾಟಿ, ಅಲ್ಲಿದ್ದ ಸಾರ್ವಜನಿಕರು ಮತ್ತು ಪತ್ರಿಕಾ ಛಾಯಾಗ್ರಾಹಕರತ್ತ ಓಡಲು ಆರಂಭಿಸಿದವು. ಆನೆಗಳು ಏಕಾಏಕಿ ತಮ್ಮತ್ತ ನುಗ್ಗಿ ಬರುತ್ತಿರುವುದನ್ನು ಕಂಡು ಸ್ಥಳದಲ್ಲಿದ್ದ ಜನರು ಮತ್ತು ಮಾಧ್ಯಮ ಪ್ರತಿನಿಧಿಗಳು ತೀವ್ರ ಆತಂಕಕ್ಕೊಳಗಾದರು. ಇದರಿಂದ ಸ್ಥಳದಲ್ಲಿ ಕೆಲಕಾಲ ನೂಕುನುಗ್ಗಲಿನ ಪರಿಸ್ಥಿತಿ ನಿರ್ಮಾಣವಾಯಿತು. ತಕ್ಷಣವೇ ಎಚ್ಚೆತ್ತುಕೊಂಡ ಸಾರ್ವಜನಿಕರು ಮತ್ತು ಛಾಯಾಗ್ರಾಹಕರು ಪಕ್ಕಕ್ಕೆ ಸರಿದಿದ್ದರಿಂದ ದೊಡ್ಡ ಅಪಾಯ ತಪ್ಪಿದೆ.



ಗೋವಾದಲ್ಲಿ ಗುರುವಾರ 57ನೇ ಅಂತರರಾಷ್ಟ್ರೀಯ ಚಲನಚಿತ್ರೋತ್ಸವದ ಭಾಗವಾಗಿ ಪಿಐಬಿ ಹಾಗೂ ಪುಣೆಯ ಫಿಲ್ಮ್ ಅಂಡ್ ಟೆಲಿವಿಷನ್ ಇನ್‌ಸ್ಟಿಟ್ಯೂಟ್ ಆಫ್ ಇಂಡಿಯಾ ಸಹಯೋಗದೊಂದಿಗೆ ಆಯೋಜಿಸಲಾದ 'ಚಲನಚಿತ್ರ ಮೆಚ್ಚುಗೆ ಕೋರ್ಸ್'ನ ಸಮಾರೋಪ ಸಮಾರಂಭ.

ಕೇರಳ: ಆರೆಸ್ಸೆಸ್ ಕಾರ್ಯಸೂಚಿಯ ಕ್ವಿಜ್ ರದ್ದು

ತಿರುವನಂತಪುರ, ನ.19: ಶಾಲೆಗಳಲ್ಲಿ ಸಂಘ ಪರಿವಾರದ ಅಜೆಂಡಾ ಜಾರಿಗೊಳಿಸಲಾಗುತ್ತಿದೆ ಎಂಬ ಎಡಪಕ್ಷಗಳ ತೀವ್ರ ವಾಗ್ದಾಳಿಗೆ ಮಣಿದಿರುವ ಕೇರಳದ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್ (ಯುಡಿಎಫ್) ಸರ್ಕಾರ, ಸಂಘ ಪರಿವಾರದ ನಂಟು ಹೊಂದಿರುವ ಸಂಸ್ಥೆಗಳು ಆಯೋಜಿಸಿದ್ದ ವಿದ್ಯಾರ್ಥಿವೇತನ ರಸಪ್ರಶ್ನೆ ಪರೀಕ್ಷೆಗೆ ನೀಡಿದ್ದ ಅನುಮತಿಯನ್ನು ಹಿಂಪಡೆದಿದೆ.

ಅಖಿಲ ಭಾರತೀಯ ರಾಷ್ಟ್ರೀಯ ಶೈಕ್ಷಿಕ ಮಹಾಸಂಘದ ರಾಜ್ಯ ಘಟಕವಾದ ರಾಷ್ಟ್ರೀಯ ಶಿಕ್ಷಕರ ಒಕ್ಕೂಟ (ಎನ್‌ಟಿಯು) ಮತ್ತು ಸಂಘ ಪರಿವಾರದ ನಂಟು ಹೊಂದಿರುವ ಬಾಲಗೋಕುಲಂ ಸಂಸ್ಥೆಯ ಮಲಯಾಳಂ ಮಕ್ಕಳ ನಿಯತಕಾಲಿಕೆ ಮಯಿಲ್ಪೀಲಿ ಸಹಯೋಗದಲ್ಲಿ ಯಂಗ್ ಸ್ಕಾಲರ್ ಎಕ್ಸಾಮ್ ಆಯೋಜಿಸಲಾಗಿತ್ತು. ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ನಾಲ್ಕು ಸುತ್ತುಗಳಲ್ಲಿ ನಡೆಯಬೇಕಿದ್ದ ಈ ಪರೀಕ್ಷೆಯ ಮೊದಲ ಎರಡು ಸುತ್ತುಗಳು ಕಳೆದ ತಿಂಗಳಿನಿಂದ ನಡೆದಿದ್ದು, 5,200 ಶಾಲೆಗಳು ಭಾಗವಹಿಸಿದ್ದವು.

ಇದೇ ತಿಂಗಳ ಕೊನೆಯಲ್ಲಿ ಉಳಿದ ಸುತ್ತುಗಳು ನಡೆಯಬೇಕಿತ್ತು. ಆದರೆ, ವಿವಾದ ಭುಗಿಲೆದ್ದ ಬೆನ್ನಲ್ಲೇ ಶಿಕ್ಷಣ ಸಚಿವ ಹಾಗೂ ಐಯುಎಂಎಲ್ ನಾಯಕ ಎನ್. ಶಂಸುದ್ದೀನ್ ಅವರು ಪರೀಕ್ಷೆಯ ಅನುಮತಿಯನ್ನು ರದ್ದುಗೊಳಿಸುವಂತೆ ಸಾರ್ವಜನಿಕ ಶಿಕ್ಷಣ ಮಹಾನಿರ್ದೇಶಕರಿಗೆ ಸೂಚಿಸಿದ್ದಾರೆ. ಅಲ್ಲದೆ, ಪೂರ್ವಾಪರ ವಿವೇಚಿಸದೆ ಅನುಮತಿ ನೀಡಿರುವುದಕ್ಕೆ ತಮ್ಮದೇ ಇಲಾಖೆಯ ಅಧಿಕಾರಿಗಳ ವಿರುದ್ಧ ಸಚಿವರು ಕಿಡಿಕಾರಿದ್ದಾರೆ.

ಇದಕ್ಕೂ ಮುನ್ನ ವಿರೋಧ ಪಕ್ಷದ ನಾಯಕ ಪಿಣರಾಯಿ ವಿಜಯನ್ ಅವರು ಕಾಂಗ್ರೆಸ್?ಐಯುಎಂಎಲ್ ನೇತೃತ್ವದ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದರು. ಶಾಲೆಗಳನ್ನು ಸಂಘ ಪರಿವಾರದ ಪ್ರಯೋಗಶಾಲೆಗಳನ್ನಾಗಿ ಪರಿವರ್ತಿಸಲು ಸರ್ಕಾರ ಮತ್ತು ಶಿಕ್ಷಣ ಇಲಾಖೆ ಅಪಾಯಕಾರಿ ಹೆಜ್ಜೆ ಇಟ್ಟಿವೆ. ಮಕ್ಕಳ ಮನಸ್ಸಿನಲ್ಲಿ ಕೋಮು ದ್ವೇಷವನ್ನು ಬಿತ್ತುವ ಉದ್ದೇಶದಿಂದಲೇ ಈ ರಸಪ್ರಶ್ನೆ ಕಾರ್ಯಕ್ರಮಕ್ಕೆ ಅನುಮತಿ ನೀಡಲಾಗಿತ್ತು ಎಂದು ಆರೋಪಿಸಿದ್ದರು.


ಆಯೋಜಕರ ಸೈದ್ಧಾಂತಿಕ ಹಿನ್ನೆಲೆಯನ್ನು ಅಧಿಕಾರಿಗಳು ಪರಿಶೀಲಿಸಬೇಕಿತ್ತು ಎಂದು ಒಪ್ಪಿಕೊಂಡಿರುವ ಸಚಿವ ಶಂಸುದ್ದೀನ್, ಈ ವಿಷಯ ಪ್ರಸ್ತಾಪಿಸುವ ನೈತಿಕ ಹಕ್ಕು ಸಿಪಿಐ(ಎಂ) ಪಕ್ಷಕ್ಕಿಲ್ಲ ಎಂದು ತಿರುಗೇಟು ನೀಡಿದ್ದಾರೆ. ಕಳೆದ ಒಂದು ದಶಕದ ಎಡಪಕ್ಷಗಳ ಆಡಳಿತಾವಧಿಯಲ್ಲೇ ಎನ್ಜಿಯುನಂತಹ ಸಂಘಟನೆಗಳು ಕೇರಳದಲ್ಲಿ ನೆಲೆ ಕಂಡುಕೊಂಡಿವೆ. ವಿಧಾನಸಭಾ ಚುನಾವಣೆಯವರೆಗೂ ಬಹುಸಂಖ್ಯಾತ ಸಮುದ

ರವಿಹಂಜ್ ವಿರಚಿತ ಬಸವ ಮಂಟಪ ಕೃತಿ ವಿರುದ್ಧ ಭುಗಿಲೆದ್ದ ಆಕ್ರೋಶ, ಮುಟ್ಟುಗೋಲಿಗೆ ಬಸವ ಸಮಿತಿ ಆಗ್ರಹ

ಬೆಂಗಳೂರು, ನ.19: ಮಹಾತ್ಮ ಬಸವಣ್ಣನ ವಿಚಾರ ಮತ್ತು ತತ್ವಗಳಿಗೆ ಅಪಚಾರ ಮಾಡುವಂತಿರುವ ಮತ್ತು ಸಂಶೋಧನೆಯ ಹೆಸರಿನಲ್ಲಿ ಲಿಂಗಾಯತ ಸಮುದಾಯ ಹಾಗೂ ಬಸವಾಭಿಮಾನಿಗಳಿಗೆ ನೋವುಂಟು ಮಾಡಿರುವ ರವಿ ಹಂಜ್ ಅವರ 'ಬಸವ ಮಂಟಪ' ಕೃತಿಯನ್ನು ಸರಕಾರ ಮುಟ್ಟುಗೋಲು ಹಾಕಿ ಕೊಳ್ಳಬೇಕು. ಜತೆಗೆ, ಶಾಂತಿ ಕದಡುತ್ತಿರುವ ಇಂತಹ ವ್ಯಕ್ತಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು ಎಂದು ಬಸವ ಸಮಿತಿ ಅಧ್ಯಕ್ಷ ಅರವಿಂದ ಜತ್ತಿ ಆಗ್ರಹಿಸಿದ್ದಾರೆ.

ರವಿ ಹಂಜ್ ಮತ್ತು ಅವರ ಪುಸ್ತಕದ ಪ್ರಕಾಶಕ, ಪತ್ರಕರ್ತ ವಿಶ್ವೇಶ್ವರ ಭಟ್ ವಿರುದ್ಧ ಸಮಿತಿಯ ನೇತೃತ್ವದಲ್ಲಿ ಬಸವ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಇದರ ಬೆನ್ನಲ್ಲೇ ಸಮಿತಿಯು ಹಂಜ್ ಮತ್ತು ಭಟ್ ವಿರುದ್ಧ ಕ್ರಮಕ್ಕೆ ಆಗ್ರಹಿಸಿ, ಪೊಲೀಸರಿಗೆ ದೂರು ಕೊಟ್ಟಿದೆ.

ಬಸವಣ್ಣನ ವಿರುದ್ಧ ಮೊದಲಿನಿಂದಲೂ ಷಡ್ಯಂತ್ರ ನಡೆಯುತ್ತಲೇ ಇದೆ. ಸಮಾನತೆ, ಜಾತಿರಹಿತ ಸಮಾಜ, ಕಾಯಕ ತತ್ವ, ಸಂಸತ್ತಿನ ಪರಿಕಲ್ಪನೆ ಇವೆಲ್ಲವನ್ನೂ ಜಗತ್ತಿಗೆ ಸಾರಿದ ಬಸವಣ್ಣನನ್ನು ಕೊಲೆಗಡುಕ, ಕಳ್ಳ, ಲೋಟಿಕೋರ ಎಂದೆಲ್ಲ ರವಿ ಹಂಜ್ ವಾಗ್ದಾಳಿ ನಡೆಸಿದ್ದಾರೆ. ಇದರ ಹಿಂದೆ ವಿಶ್ವೇಶ್ವರ ಭಟ್ ಅವರ ಕೈವಾಡವಿದೆ. ಆದರೆ ನಂತರ ಎದುರಾದ ವಿರೋಧವನ್ನು ಕಂಡು ಹಂಜ್ ಅವರು ಕ್ಷಮೆ ಮತ್ತು ತಿದ್ದುಪಡಿಯ ನಾಟಕವಾಡಿದ್ದಾರೆ. ಅವೆರಡೂ ನಮಗೆ ಬೇಕಾಗಿಲ್ಲ. ನಮ್ಮ ವೀರಶೈವ–ಲಿಂಗಾಯತ ಸಮುದಾಯದ ಸೌಮ್ಯ ಸ್ವಭಾವವನ್ನೇ ದೌರ್ಬಲ್ಯ ಎಂದುಕೊಂಡಿದ್ದಾರೆ. 'ಬಸವ ಮಂಟಪ' ಕೃತಿಯಲ್ಲಿ ಸಂಶೋಧನೆಯ



ಮುಖವಾಡ ತೊಡಿಸಿರುವುದು ಖಂಡನೀಯ ಎಂದು ಅವರು ಹೇಳಿದ್ದಾರೆ.

ಬಸವಮಂಟಪ ಕೃತಿ ಮುಟ್ಟುಗೋಲಿಗೆ ಸಚಿವ ಈಶ್ವರ ಖಂಡ್ರೆ ಒತ್ತಾಯ



ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವಣ್ಣನವರನ್ನು ಹಾಗೂ ಲಿಂಗಾಯತರನ್ನು ಅವಹೇಳನ ಮಾಡಿರುವ ಲೇಖಕ ರವಿ ಹಂಜ್ ರ ಬಸವಮಂಟಪ ಕೃತಿ ಮುಟ್ಟುಗೋಲು ಹಾಕುವಂತೆ ಹಾಗೂ ಸಾಮಾಜಿಕ ತಾಣಗಳಿಂದ ಈ ಕುರಿತ ಎಲ್ಲ ವಿಡಿಯೋ ತೆಗೆದು ಹಾಕುವಂತೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷ ಈಶ್ವರ ಖಂಡ್ರೆ ಒತ್ತಾಯಿಸಿದ್ದಾರೆ. ಈ ಸಂಬಂಧ ಹೇಳಿಕೆ ನೀಡಿರುವ ಅವರು, ಸಚಿವನಾಗಿ ನಾನು ಒಂದು ಕೃತಿಯನ್ನು ಮುಟ್ಟುಗೋಲು ಹಾಕುವಂತೆ ಬಹಿರಂಗವಾಗಿ ಒತ್ತಾಯಸಬಾರದು, ಆದರೆ ಇಡೀ ಲಿಂಗಾಯತ ಸಮುದಾಯಕ್ಕೆ ಮತ್ತು ವಿಶ್ವಗುರು ಬಸವಣ್ಣನವರ ಅನುಯಾಯಿಗಳಿಗೆ ಘಾಸಿ ಉಂಟು ಮಾಡುವಂತೆ ಆಧಾರರಹಿತ ಆರೋಪ ಮಾಡಿರುವ ರವಿ ಹಂಜ್ ಕೃತಿ ಸಮಾಜದ ಸ್ವಾಸ್ಥ್ಯ ಕದಡುವಂತಿದ್ದು, ಕೂಡಲೇ ಮುಟ್ಟುಗೋಲು ಹಾಕುವಂತೆ ಮುಖ್ಯಮಂತ್ರಿಗಳಿಗೆ ಹಾಗೂ ಗೃಹ ಸಚಿವರಿಗೆ ತಾವು ಒತ್ತಾಯಿಸುವುದಾಗಿ ತಿಳಿಸಿದ್ದಾರೆ.

12ನೇ ಶತಮಾನದಲ್ಲಿ ನಡೆದ ಐತಿಹಾಸಿಕ ಸಂಘರ್ಷಗಳನ್ನು ಇವರು ದುರುದ್ದೇಶದಿಂದ ತಿರುಚುತ್ತಿದ್ದು, ಪೂರ್ವಗ್ರಹಪೀಡಿತರಾಗಿ ಮಾತನಾಡುತ್ತಿದ್ದಾರೆ. ರಾಷ್ಟ್ರಕವಿ ಕುವೆಂಪು ಕೂಡ ಬಸವಣ್ಣನನ್ನು ಮುಕ್ತವಾಗಿ ಪ್ರಶಂಸಿಸಿದ್ದಾರೆ. ಈಗ ನಡೆಯುತ್ತಿರುವುದೆಲ್ಲವೂ ಶರಣ ತತ್ವ ಮತ್ತು ಲಿಂಗಾಯತ ಅಸ್ಮಿತೆಯನ್ನು ಬುಡಮೇಲು ಮಾಡುತ್ತಿರುವ ಸೈದ್ಧಾಂತಿಕ ಸಂಚಾಗಿದೆ. ಇದರ ಹಿಂದೆ ಯಾರಿದ್ದಾರೆ ಎನ್ನುವುದು ಗೊತ್ತಿದೆ. ನಾಡಿನ ಪ್ರಜ್ಞಾವಂತರು, ಯುವಜನರು, ಮಠಾಧೀಶರು, ಸಾಹಿತಿಗಳು, ದೇಶ–ವಿದೇಶಗಳಲ್ಲಿರುವ ಎಲ್ಲ ಸಮುದಾಯಗಳೂ ಖಂಡಿಸಬೇಕು ಎಂದು ಅವರು ಕರೆ ಕೊಟ್ಟಿದ್ದಾರೆ.

ಬಸವಣ್ಣನನ್ನು 'ಕರ್ನಾಟಕದ ಸಾಂಸ್ಕೃತಿಕ ನಾಯಕ' ಎಂದು ಸರಕಾರ ಘೋಷಿಸಿದ ಮೇಲೆ ಇಂತಹ ವಿಕೃತ ಬೆಳವಣಿಗೆಗಳು ಮೇರೆ ಮೀರಿವೆ. ಇವುಗಳ ಹಿಂದೆ ಪಟ್ಟಭದ್ರ ಹಿತಾಸಕ್ತಿಗಳು ಸಕ್ರಿಯವಾಗಿವೆ. ಸಮಾಜದಲ್ಲಿ ಜಾಗೃತಿ ಮೂಡಿಸಿ, ಇದನ್ನೆಲ್ಲ ಮಟ್ಟ ಹಾಕಲಾಗುವುದು. ಅಭಿವ್ಯಕ್ತಿ ಸ್ವಾತಂತ್ರ್ಯದ ಹೆಸರಿನಲ್ಲಿ ಏನು ಬೇಕಾದರೂ ಮಾಡಬಹುದು ಎನ್ನುವ ಧೋರಣೆ ಸರಿಯಲ್ಲ ಎಂದು ಜತ್ತಿ ಪ್ರತಿಪಾದಿಸಿದ್ದಾರೆ.

ಆಳಂದ ಶಾಸಕ ಬಿ ಆರ್ ಪಾಟೀಲ ಮಾತನಾಡಿ, 'ಬಸವಣ್ಣ, ಗಾಂಧಿ, ಅಂಬೇಡ್ಕರ್ ವಿಚಾರಗಳನ್ನು ಸಹಿಸದ ವಿಕೃತಿ ಹಿಂದಿನಿಂದಲೂ ಇದೆ. ರವಿ ಹಂಜ್ ದುರುದ್ದೇಶದಿಂದ ಪುಸ್ತಕ ಬರೆದಿದ್ದು, ಬಸವಣ್ಣನ ಹೆಸರಿಗೆ ಮಸಿ ಬಳಿಯುವ ಕೆಲಸ ಮಾಡಿದ್ದಾರೆ. ಇದು ನಿಲ್ಲದಿದ್ದರೆ ಸಮಾಜದಲ್ಲಿ ಶಾಂತಿಗೆ ಭಂಗ ಬರುತ್ತದೆ. ಇದುವರೆಗೆ ಜಗತ್ತಿನ 143 ಭಾಷೆಗಳಿಗೆ ಬಸವಣ್ಣನ ವಚನಗಳು ಭಾಷಾಂತರವಾಗಿವೆ. ನಾವೀಗ ರಾಜ್ಯದಲ್ಲಿ ಬೀದಿಗಿಳಿದು ಹೋರಾಡುವುದು ಅನಿವಾರ್ಯವಾಗಿದೆ' ಎಂದರು.

ಬ್ರಿಟನ್ ನಲ್ಲಿರುವ ಕನ್ನಡಿಗ ನೀರಜ್ ಪಾಟೀಲ್, ಚಿಂತಕ ಜೆ.ಎಸ್. ಪಾಟೀಲ್ ಅವರೂ ಮಾತನಾಡಿ ಲೇಖಕ ಹಾಗೂ ಪ್ರಕಾಶಕರ ವಿರುದ್ಧ ಉಗ್ರ ಕ್ರಮ ತೆಗೆದುಕೊಳ್ಳಬೇಕು ಎಂದು ಹೇಳಿದರು.

ಮಾಧ್ಯಮಗೋಷ್ಠಿಯಲ್ಲಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್, ಮಾಜಿ ಮೇಯರ್ ಗಂಗಾಂಬಿಕ ಮಲ್ಲಿಕಾರ್ಜುನ್, ಮಾಜಿ ಉಪ ಮೇಯರ್ ಪುಟ್ಟರಾಜು ಮುಂತಾದವರು ಇದ್ದರು. ಇದಕ್ಕೂ ಮೊದಲು ನಡೆದ ಪೂರ್ವಭಾವಿ ಸಭೆಯಲ್ಲಿ ಸಚಿವ ಬಸವರಾಜ ರಾಯರಡ್ಡಿ ಭಾಗವಹಿಸಿದ್ದರು.

ಹೋರಾಟ: ಎಂ.ಬಿ.ಪಾಟೀಲ್ ಎಚ್ಚರಿಕೆ



ಬೃಹತ್ ಕೈಗಾರಿಕಾ ಸಚಿವ ಮತ್ತು ಸಮುದಾಯದ ಮುಖಂಡ ಎಂ.ಬಿ. ಪಾಟೀಲ್ ಮಾತನಾಡಿ, ಬಸವಣ್ಣ ಮತ್ತು ಲಿಂಗಾಯತ ಸಮುದಾಯದ ಮೇಲಿನ ವಿಕೃತ ದಾಳಿ ಮೇರೆ ಮೀರಿದೆ. ಇದನ್ನೆಲ್ಲ ನಮ್ಮ ಸಮುದಾಯ ಇನ್ನು ಮುಂದೆ ಎಳ್ಳಷ್ಟೂ ಸಹಿಸುವುದಿಲ್ಲ. ಬದಲಿಗೆ ಬೀದಿಗಿಳಿದು ಹೋರಾಟ ಮಾಡುತ್ತೇವೆ. ಈಗಾಗಲೇ ಇದು ರಾಜ್ಯದ ಹಲವೆಡೆಗಳಲ್ಲಿ ಆರಂಭವಾಗಿದೆ. ನೆರೆಯ ಮಹಾರಾಷ್ಟ್ರದಲ್ಲೂ ರವಿಹಂಜ್ ವಿರುದ್ಧ ಪ್ರತಿಭಟನೆ ಶುರುವಾಗಿದೆ. ಈ ಕುರಿತು ನಾನು ಮತ್ತು ಶರಣ್ ಪ್ರಕಾಶ ಪಾಟೀಲ್ ಸೇರಿದಂತೆ ಇತರ ಸಚಿವರು ಮುಖ್ಯಮಂತ್ರಿಗಳ ಜತೆ ಮಾತನಾಡಿ, ಕಾನೂನು ಕ್ರಮ ಕೈಗೊಳ್ಳಲು ಆಗ್ರಹಿಸುತ್ತೇವೆ ಎಂದು ಎಚ್ಚರಿಕೆ ಕೊಟ್ಟಿದ್ದಾರೆ.

ನನಗೆ ರವಿ ಹಂಜ್ ಹೆಸರು ಹೇಳಲೂ ನಾಚಿಕೆಯಾಗುತ್ತಿದೆ. ಅಂತಹ ವ್ಯಕ್ತಿಯ ಪುಸ್ತಕ ಬಿಡುಗಡೆ ಕಾರ್ಯಕ್ರಮಕ್ಕೆ ವೀರಶೈವ ಮಹಾಸಭಾದ ಅಧ್ಯಕ್ಷ ಶಂಕರ ಬಿದರಿ ಮತ್ತು ಕಸಾಪ ಮಾಜಿ ಅಧ್ಯಕ್ಷ ಮನು ಬಳಿಗಾರ್ ಹೋಗಿದ್ದು ಖಂಡನೀಯ. ಇವರಿಬ್ಬರೂ 21ನೇ ಶತಮಾನದ ಕೊಂಡಿ ಮಂಚಣ್ಣರು. ಬಿದರಿ ವಿರುದ್ಧ ಕ್ರಮ ಕೈಗೊಳ್ಳವುದು ವೀರಶೈವ ಮಹಾಸಭಾಗೆ ಬಿಟ್ಟಿದ್ದು. ಇವರಂಥವರು 12ನೇ ಶತಮಾನದಿಂದಲೂ ಇದ್ದಾರೆ. ಇಂಥವರೇ ಆಗಲೂ ಬಸವಣ್ಣನ ವಿರುದ್ಧ ಕೆಲಸ ಮಾಡಿದರು' ಎಂದು ಹರಿಹಾಯ್ದರು. ಬಸವಣ್ಣ ಮತ್ತು ಶರಣ ಸಂಸ್ಕೃತಿಗೆ ಅಪಚಾರ ಮಾಡುತ್ತಿರುವುದರ ಹಿಂದೆ ಷಡ್ಯಂತ್ರವಿದೆ. ಉತ್ತರ ಕರ್ನಾಟಕದಲ್ಲೂ ಈ ಶಕ್ತಿಗಳು ಒಬ್ಬ ಸ್ವಾಮೀಜಿಯ ಮೂಲಕ ಈ ಕೆಲಸ ಮಾಡಿಸುತ್ತಿವೆ. ಇವೆಲ್ಲದರ ವಿರುದ್ಧ ಸಿರಿಗೆರೆ, ಭಾಲ್ಕಿ, ಗದಗ, ಸುತ್ತೂರು ಸೇರಿದಂತೆ ಎಲ್ಲ ಸ್ವಾಮೀಜಿಗಳು ಧ್ವನಿ ಎತ್ತಲಿದ್ದಾರೆ. ಈಗಾಗಲೇ ಇದು ಆರಂಭವಾಗಿದೆ. ನಮ್ಮ ಧರ್ಮದ ತಂಟೆಗೆ ಬೇರೆಯವರು ಬಂದರೆ ನಾವಿನ್ನು ಸುಮ್ಮನಿರುವುದಿಲ್ಲ. ರವಿ ಹಂಜ್ ಮತ್ತು ವಿಶ್ವೇಶ್ವರ ಭಟ್ ಇಬ್ಬರೂ ತಮ್ಮ ಮಿತಿ ಮೀರಿದ್ದಾರೆ ಎಂದು ಅವರು ಟೀಕಿಸಿದ್ದಾರೆ.

ರಾಜ್ಯಪಾಲೆ ಡಾ.ಸುಧಾ ಯಾದವ್‌ಗೆ ರಾಜ್ಯ ಮಹಿಳಾ ಆಯೋಗದ ಮಾಜಿ ಅಧ್ಯಕ್ಷೆ ನಾಗಲಕ್ಷ್ಮಿ ಬಾಯಿ ಮನವಿ

ಮಹಿಳೆಯರ ಘನತೆ, ಸುರಕ್ಷತೆ ಮತ್ತು ಆತ್ಮಗೌರವ ಕಾಪಾಡಲು ಸಂಬಂಧಪಟ್ಟವರಿಗೆ ನಿರ್ದೇಶನ ಅಗತ್ಯ

ಬೆಂಗಳೂರು, ನ.19: ರಾಜ್ಯದ ಮಹಿಳೆಯರ ಘನತೆ, ಸುರಕ್ಷತೆ ಮತ್ತು ಆತ್ಮಗೌರವವನ್ನು ಎತ್ತಿಹಿಡಿಯುವ ನಿಟ್ಟಿನಲ್ಲಿ ಹಾಗೂ ಕರ್ನಾಟಕ ರಾಜ್ಯದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳನ್ನು ತಡೆಗಟ್ಟಲು ಹಾಗೂ ರಾಜಕೀಯ ನಾಯಕರು ಮತ್ತು ಉನ್ನತ ಅಧಿಕಾರಿಗಳು ಸೇರಿದಂತೆ ತಪ್ಪಿತಸ್ಥರ ವಿರುದ್ಧ ನಿಷ್ಪಕ್ಷಪಾತ ತನಿಖೆ ಮತ್ತು ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಪ್ರಾಧಿಕಾರಗಳಿಗೆ ಶಿಫಾರಸು ಮಾಡಬೇಕೆಂದು ರಾಜ್ಯಪಾಲೆ ಡಾ. ಸುಧಾ ಯಾದವ್ ಅವರಿಗೆ ಪತ್ರಕರ್ತೆ ಹಾಗೂ ರಾಜ್ಯ ಮಹಿಳಾ ಆಯೋಗದ ಮಾಜಿ ಅಧ್ಯಕ್ಷೆ ಕೆ.ಜಿ. ನಾಗಲಕ್ಷ್ಮಿ ಬಾಯಿ ಮನವಿ ಮಾಡಿದ್ದಾರೆ.

ಈ ಬಗ್ಗೆ ರಾಜ್ಯಪಾಲರಿಗೆ ಸುಧೀರ್ಘ ಪತ್ರ ಬರೆದಿರುವ ಅವರು, ಇತ್ತೀಚಿನ ವರ್ಷಗಳಲ್ಲಿ ರಾಜಕೀಯ ನಾಯಕರು, ಮಾಜಿ ಮುಖ್ಯಮಂತ್ರಿಗಳು, ಹಾಲಿ ಮತ್ತು ಮಾಜಿ ಸಚಿವರು, ಸಂಸದರು ಹಾಗೂ ಉನ್ನತ ಶ್ರೇಣಿಯ ಅಧಿಕಾರಿಗಳಿಗೆ ಸಂಬಂಧಿಸಿದಂತೆ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ಮತ್ತು ಲೈಂಗಿಕ ಶೋಷಣೆಯ ಆರೋಪಗಳು ಸಾರ್ವಜನಿಕ ಚರ್ಚೆಗೆ ಬರುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಇತ್ತೀಚೆಗೆ ರಾಜ್ಯದ ಹಿರಿಯ ಮತ್ತು ಅತ್ಯಂತ ಪ್ರಭಾವಿ ರಾಜಕೀಯ ನಾಯಕರ ನೆರೆ ರಾಜ್ಯದಲ್ಲಿ ನಡೆದಿರುವಬಹುದಂತ ಬಾಲಕಿ ಮೇಲಿನ ಲೈಂಗಿಕ ದೌರ್ಜನ್ಯದ ಪ್ರಕಾರಣವು ದೇಶದಲ್ಲಿ ಸಂಚಲನ ಮೂಡಿಸಿದೆ, ಇಂತಹ ಆರೋಪಗಳು ನಿಷ್ಪಕ್ಷಪಾತ ತನಿಖೆಗೆ ಒಳಗಾಗಿ, ಸತ್ಯಾಸತ್ಯತೆ ಬಹಿರಂಗವಾಗಬೇಕು ಮತ್ತು ತಪ್ಪಿತಸ್ಥರು ಕಾನೂನಿನ ಪ್ರಕಾರ ಶಿಕ್ಷೆಗೆ ಒಳಗಾಗಬೇಕು ಎಂಬುದು ನಾಗರಿಕ ಸಮಾಜದ ನ್ಯಾಯಸಮ್ಮತ ನಿರೀಕ್ಷೆಯಾಗಿದೆ ಎಂದು ಉಲ್ಲೇಖಿಸಿದ್ದಾರೆ.



ಹಣ, ಅಧಿಕಾರ ಮತ್ತು ರಾಜಕೀಯ ಪ್ರಭಾವದ ಬಲದಿಂದ ಕಾನೂನಿನ ಪ್ರಕ್ರಿಯೆಯನ್ನು ಪ್ರಭಾವಿತಗೊಳಿಸ 'ಬಹುದು ಅಥವಾ ತಪ್ಪಿಸಿಕೊಳ್ಳಬಹುದು ಎಂಬ ಭಾವನೆ ಸಾರ್ವ ಜನಿಕರಲ್ಲಿ ಮೂಡಿದರೆ, ಅದು ಪ್ರಜಾಪ್ರಭುತ್ವದ ಮೇಲಿನ ವಿಶ್ವಾಸಕ್ಕೆ ಧಕ್ಕೆ ಉಂಟು ಮಾಡುತ್ತದೆ. ಕಾನೂನಿನ ಮುಂದೆ ಎಲ್ಲರೂ ಸಮಾನರು ಎಂಬ ಸಂವಿಧಾನಾತ್ಮಕ ತತ್ವವು ಯಾವುದೇ ವ್ಯಕ್ತಿಯ ಸ್ಥಾನಮಾನವನ್ನು ಲೆಕ್ಕಿಸದೆ ಅನುಷ್ಠಾನ ಗೊಳ್ಳುವುದು ಅತ್ಯಗತ್ಯ ಎಂದಿದ್ದಾರೆ.

ಇದಲ್ಲದೆ, ಕೆಲವು ಪ್ರಕರಣಗಳಲ್ಲಿ ಆರೋಪಿತ ವ್ಯಕ್ತಿಗಳು ನ್ಯಾಯಾಲಯ ಗಳಿಂದ ತಡೆಯಾಜ್ಞೆಗಳನ್ನು ಪಡೆಯುವುದು, ತನಿಖೆ ಅಥವಾ ನ್ಯಾಯಾಂಗ ಪ್ರಕ್ರಿಯೆಗಳ ವಿಳಂಬ, ಸಾಕ್ಷಿದಾರರ ಮೇಲೆ ಒತ್ತಡ ಹೇರಲಾಗುತ್ತಿದೆ ಎಂಬ ಆರೋಪಗಳು ಹಾಗೂ ದೂರುದಾರರಿಗೆ ಬೆದರಿಕೆ ಹಾಕುವ ಘಟನೆಗಳ ಕುರಿತು ಸಾರ್ವಜನಿಕ ವಲಯದಲ್ಲಿ ಆತಂಕ ವ್ಯಕ್ತವಾಗುತ್ತಿದೆ. ಇಂತಹ ಸಂದರ್ಭಗಳಲ್ಲಿ ದೂರುದಾರರು ಮತ್ತು ಸಾಕ್ಷಿದಾರರಿಗೆ ಸೂಕ್ತ ರಕ್ಷಣೆ ಒದಗಿಸುವುದು, ಸಾಕ್ಷ್ಯಗಳನ್ನು ಸಂರಕ್ಷಿಸುವುದು ಹಾಗೂ ತನಿಖೆ ಯಾವುದೇ ಪ್ರಭಾವಕ್ಕೆ ಒಳಗಾಗದಂತೆ ನೋಡಿಕೊಳ್ಳುವುದು ಅತ್ಯಂತ ಅಗತ್ಯವಾಗಿದೆ ಎಂದು ಉಲ್ಲೇಖಿಸಿದ್ದಾರೆ.

ಈ ಹಿನ್ನೆಲೆಯಲ್ಲಿ, ಮಹಿಳೆಯರ ಹಕ್ಕುಗಳು ಮತ್ತು ಘನತೆಯನ್ನು ರಕ್ಷಿಸುವ ಉದ್ದೇಶದಿಂದ ತಮ್ಮ ಸಂವಿಧಾನಾತ್ಮಕ ಅಧಿಕಾರಗಳ ವ್ಯಾಪ್ತಿಯಲ್ಲಿ ಸಂಬಂಧಪಟ್ಟ ರಾಜ್ಯ ಮತ್ತು ಕೇಂದ್ರ ಸರ್ಕಾರದ ಪ್ರಾಧಿಕಾರಗಳ ಗಮನಕ್ಕೆ ಕೆಳಕಂಡ ವಿಷಯಗಳನ್ನು ತರಬೇಕೆಂದು ವಿನಂತಿಸಿದ್ದಾರೆ.

ಮನವಿಯಲ್ಲಿನ ಇತರ ಪ್ರಮುಖ ಅಂಶಗಳು

*ದೂರುದಾರ ಮಹಿಳೆಯರು ಮತ್ತು ಸಾಕ್ಷಿದಾರರಿಗೆ ಬೆದರಿಕೆ, ಒತ್ತಡ, ಹಲ್ಲೆ ಅಥವಾ ಇತರ ರೀತಿಯ ಕಿರುಕುಳ ಉಂಟಾಗದಂತೆ ಅಗತ್ಯ ರಕ್ಷಣೆ ಒದಗಿಸುವ ವ್ಯವಸ್ಥೆಯನ್ನು ಬಲಪಡಿಸಬೇಕು.

*ಲೈಂಗಿಕ ದೌರ್ಜನ್ಯ ಪ್ರಕರಣಗಳಲ್ಲಿ ಸಾಕ್ಷ್ಯ ನಾಶಪಡಿಸುವುದು, ಸಾಕ್ಷಿದಾರರನ್ನು ಬೆದರಿಸುವುದು ಅಥವಾ ತನಿಖೆಗೆ ಅಡ್ಡಿಪಡಿಸುವುದು ಕಂಡು ಬಂದಲ್ಲಿ, ಸಂಬಂಧಪಟ್ಟವರ ವಿರುದ್ಧ ಅನ್ವಯಿಸುವ ಕಾನೂನುಗಳ ಅಡಿಯಲ್ಲಿ ಕಠಿಣ ಕ್ರಮ ಕೈಗೊಳ್ಳಬೇಕು.

*ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯವನ್ನು ತಡೆಗಟ್ಟಲು, ದೂರು ದಾಖಲಿಸುವ ಪ್ರಕ್ರಿಯೆಯನ್ನು ಸುಲಭಗೊಳಿಸಲು, ಸಂತ್ರಸ್ತರಿಗೆ ಕಾನೂನು ನೆರವು ಮತ್ತು ಸಮಾಲೋಚನೆ ಒದಗಿಸಲು ಹಾಗೂ ಸಾರ್ವಜನಿಕರಲ್ಲಿ ಕಾನೂನು ಅರಿವು ಮೂಡಿಸಲು ಸಮಗ್ರ ಕ್ರಮಗಳನ್ನು ಕೈಗೊಳ್ಳಬೇಕು.

*ಆರೋಪಿತ ವ್ಯಕ್ತಿ ಎಷ್ಟೇ ಪ್ರಭಾವಶಾಲಿಯಾಗಿದ್ದರೂ ಕಾನೂನಿನ ಪ್ರಕ್ರಿಯೆಯಿಂದ ವಿನಾಯಿತಿ ಪಡೆಯ ಬಾರದು. ತಪ್ಪಿತಸ್ಥರಿಗೆ ಕಾನೂನುಬದ್ಧ ಶಿಕ್ಷೆಯಾಗಬೇಕು ಮತ್ತು ನಿರಪರಾಧಿಗಳ ಹಕ್ಕುಗಳೂ ರಕ್ಷಿಸಲ್ಪಡಬೇಕು.



ಕರ್ನಾಟಕದಾದ್ಯಂತ ಇರುವ ಸಾವಿರಾರು 'ಆಶಾ' ಕಾರ್ಯಕರ್ತೆಯರು, ಗುರುವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಹಗಲು–ರಾತ್ರಿ ನಡೆಯುವ ಅನಿರ್ದಿಷ್ಟಾವಧಿ ಪ್ರತಿಭಟನೆಯನ್ನು ಮುಂದುವರಿಸಿದರು.

ಡಿ.5ರಿಂದ 8ರವರೆಗೆ ಬಸವನಗುಡಿ ಕಡಲೇಕಾಯಿ ಪರಿಷೆ

ಬೆಂಗಳೂರು, ನ.19: ಕಡಲೆಕಾಯಿ ಪರಿಷೆ'ಯು ಬೆಂಗಳೂರಿನ ಅತ್ಯಂತ ಹಳೆಯ ಬೀದಿ ಉತ್ಸವಗಳಲ್ಲಿ ಒಂದಾಗಿದೆ. ಇದು ಪ್ರತಿವರ್ಷ ಬಸವನಗುಡಿಯ ದೊಡ್ಡ ಬಸವನಗುಡಿ ರಸ್ತೆಯ ಸುತ್ತಮುತ್ತ ನಡೆಯುತ್ತದೆ.

ಕಾರ್ತಿಕ ಮಾಸದ ಕೊನೆಯ ಸೋಮವಾರದಂದು, ರೈತರು ತಾವು ಬೆಳೆದ ಆ ಋತುವಿನ ಮೊದಲ ಕಡಲೆಕಾಯಿ ಫಸಲನ್ನು ಶಿವನ ವಾಹನವಾದ ಬಸವನಿಗೆ ಅರ್ಪಿಸಲು ಇಲ್ಲಿಗೆ ತರುತ್ತಾರೆ. ದೇವಸ್ಥಾನಕ್ಕೆ ಅರ್ಪಣೆಯಾಗಿ ಪ್ರಾರಂಭವಾಗುವ ಈ ಕಾರ್ಯಕ್ರಮವು, ನಂತರ ಹುರಿದ ಮತ್ತು ಬೇಯಿಸಿದ



ಕಡಲೆಕಾಯಿಗಳು, ಆಟಿಕೆಗಳು, ಬಳೆಗಳು ಹಾಗೂ ವಿವಿಧ ಬಗೆಯ ತಿನಿಸುಗಳ ಮಾರಾಟದೊಂದಿಗೆ ಸುಮಾರು ಒಂದು ಕಿಲೋಮೀಟರ್ ಉದ್ದಕ್ಕೂ ಹರಡಿಕೊಂಡಿರುವ ದೊಡ್ಡ ಜಾತ್ರೆಯಾಗಿ ಮಾರ್ಪಡುತ್ತದೆ.

2026ರಲ್ಲಿ, ಈ ಜಾತ್ರೆಯ ಪ್ರಮುಖ ದಿನವು ಡಿಸೆಂಬರ್ 7ರಂದು ಆರಂಭವಾಗುತ್ತದೆ.2026ರ ಕಡಲೆಕಾಯಿ ಪರಿಷೆಯು ಡಿಸೆಂಬರ್ 5 ರಿಂದ 8 ರವರೆಗೆ ನಾಲ್ಕು ದಿನಗಳ ಕಾಲ ನಡೆಯಲಿದೆ. ಸಾಂಪ್ರದಾಯಿಕ ಪರಿಷೆಯು ಕಡೆಯ ಕಾರ್ತಿಕ ಸೋಮವಾರವಾದ ಡಿಸೆಂಬರ್ 7ರಂದು ಜರುಗಲಿದೆ. ಈ ಜಾತ್ರೆಯು ಕನ್ನಡ ಚಾಂದ್ರಮಾನ ಕ್ಯಾಲೆಂಡರ್ ಪ್ರಕಾರ, ಕಾರ್ತೀಕ ಮಾಸದ ಕೊನೆಯ ಸೋಮವಾರದಂದು ಬರುವುದರಿಂದ, ಪ್ರತಿವರ್ಷ ನವೆಂಬರ್ ಮಧ್ಯಭಾಗದಿಂದ ಡಿಸೆಂಬರ್ ಆರಂಭದ ಅವಧಿಯಲ್ಲಿ ನಡೆಯುತ್ತದೆ.

ಪಶುವೈದ್ಯಾಧಿಕಾರಿ ನೇಮಕಾತಿ ಅಕ್ರಮ: ಕೆಪಿಎಸ್‌ಸಿ ಸದಸ್ಯೆ ಗೀತಾ ನಿವಾಸದಲ್ಲಿ ದಾಖಲೆಗಳ ಪರಿಶೀಲನೆ

ಬೆಂಗಳೂರು, ನ.19–ಪಶು ವೈದ್ಯಾಧಿಕಾರಿಗಳ ನೇಮಕಾತಿ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಕೆಪಿಎಸ್‌ಸಿ ಸದಸ್ಯೆ ಬಿ.ವಿ.ಗೀತಾ ಅವರ ನಿವಾಸದ ಮೇಲೆ ವಿಶೇಷ ತನಿಖಾ ದಳ ದಾಳಿ ನಡೆಸಿ ದಾಖಲೆಗಳನ್ನು ಪರಿಶೀಲಿಸುತ್ತಿದೆ. ಗೀತಾ ಅವರ ಬಂಧನದ ಬೆನ್ನಲ್ಲ

ದಲಿತರ ಪರ ಕಾಳಜಿ ವಹಿಸದಿದ್ದರೆ ಪ್ರಿಯಾಂಕ್ ಖರ್ಗೆ ಕಚೇರಿ ಮುಂದೆ ಪ್ರತಿಭಟನೆ: ಆರ್‌ಪಿಐ ಎಚ್ಚರಿಕೆ



ಕಲಬುರಗಿ, ನ. 19: ಜಿಲ್ಲೆಯಲ್ಲಿ ದಲಿತರ ಮೇಲೆ ದೌರ್ಜನ್ಯ ನಡೆಯುತ್ತಿದ್ದರೂ ಸಹ ಈ ಕುರಿತು ರಾಜ್ಯದ ಗೃಹ ಮತ್ತು ಐಟಿಬಿಟಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಸೂಕ್ತ ಕಾನೂನು ಕ್ರಮ ಕೈಗೊಳ್ಳುತ್ತಿಲ್ಲ. ಈ ಕೂಡಲೇ ಜಿಲ್ಲಾಡಳಿತಕ್ಕೆ ಸೂಕ್ತ ನಿರ್ದೇಶನ ನೀಡಿ ದಲಿತರ ರಕ್ಷಣೆ ಪರವಾಗಿ ಕಾಳಜಿ ವಹಿಸದಿದ್ದರೆ ಸಚಿವ ಪ್ರಿಯಾಂಕ್ ಖರ್ಗೆ ಅವರ ಕಚೇರಿ ಮುಂದೆ ಧರಣಿ ಸತ್ಯಾಗ್ರಹ ಹನಡೆಸಬೇಕಾಗುತ್ತದೆ ಎಂದು ಆರ್‌ಪಿಐ ಪಕ್ಷದ ದಕ್ಷಿಣ ಭಾರತದ ಪ್ರಧಾನ ಕಾರ್ಯದರ್ಶಿ ಎ.ಬಿ. ಹೊಸಮನಿ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡ (ದೌರ್ಜನ್ಯ ನಿಯಂತ್ರಣ) ನಿಯಮಗಳು 1995ರ ನಿಯಮ 17ರ ರೀತ್ಯ ಜಿಲ್ಲೆಯ ಜಿಲ್ಲಾ ಮಟ್ಟದ ಜಾಗೃತಿ ಉಸ್ತುವಾರಿ ಸಮಿತಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಧಿಕಾರೇತರ ಸದಸ್ಯರನ್ನು ನೇಮಿಸುವ ಕುರಿತು ಸಮಾಜ ಕಲ್ಯಾಣ ಇಲಾಖೆ ಜಿಲ್ಲಾ ಜಂಟಿ ನಿರ್ದೇಶಕರು 2023ರಲ್ಲಿ ಅರ್ಜಿಗಳನ್ನು ಆಹ್ವಾನಿಸಿದ್ದರು. ಒಟ್ಟು 18 ಅರ್ಜಿಗಳು ಸ್ವೀಕೃತವಾಗಿದ್ದು, 14 ಅರ್ಜಿಗಳು ನಗರಪೊಲೀಸ್ ಆಯುಕ್ತರ ಹಾಗೂ 4 ಅರ್ಜಿ ಗಳು ಜಿಲ್ಲಾ ಪೊಲೀಸ್ ಅಧೀಕ್ಷಕರಿಗೆ ಫೆಬ್ರವರಿ2024ರಂದು ಅರ್ಜಿದಾರರ ಗುಣ ನಡತೆಗಾಗಿ ಪತ್ರ ಬರೆದಿದ್ದರು. 8 ಅರ್ಜಿದಾರರು ಅಪರಾಧಿಕ ಚಟುವಟಿಕೆಗಳಲ್ಲಿ ಪಾಲ್ಗೊಂಡಿದ್ದಕ್ಕಾಗಿ ತಿರಸ್ಕೃತಗೊಂಡು, 10 ಅರ್ಜಿದಾರರ ಗುಣ ನಡತೆ ಪತ್ರಗಳು ಜಂಟಿ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆಗೆ ತಲುಪಿವೆ.

ರಾಜ್ಯದಲ್ಲಿ ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳು ದಿನೇದಿನೆ ಹೆಚ್ಚಾಗುತ್ತಿದ್ದು, ಅದನ್ನು ತಡೆಗಟ್ಟುವಲ್ಲಿ ರಾಜ್ಯ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ. ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಹದ್ದಿನಾಳ ಗ್ರಾಮದ ಭೂಮಾನಂದನ ಕಗ್ಗೊಲೆ, ರಾಯಚೂರು ಜಿಲ್ಲೆಯ ಲಿಂಗಸೂರು ತಾಲ್ಲೂಕಿನ ಈಚನಾಳ ಗ್ರಾಮದಲ್ಲಿ ಜಗ್‌ನಲ್ಲಿ ನೀರು ಎತ್ತಿ ಹಾಕಿದ ಪ್ರಕರಣ, ರಾಯಚೂರು ಜಿಲ್ಲೆ ಲಿಂಗಸೂರು ತಾಲೂಕಿನ ಕರಡಕಲ್ ಗ್ರಾಮದ ರೇಣಮ್ಮ (ರಾಣೆಮ್ಮ) ಮೇಲೆ ಅತ್ಯಾಚಾರ ಮತ್ತು ಕೊಲೆ, ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ ಕಡಜತ್ತಿ ಗ್ರಾಮದ ಮಹಿಳೆ ಮಾದೇವಮ್ಮನ ಕೊಲೆ, ಯಾದಗಿರಿ ಜಿಲ್ಲೆ ವಡಗೇರಾ ತಾಲ್ಲೂಕಿನ ಗುರುಸುಣಗಿ ಗುಡ್ಡದ ದೇವಸ್ಥಾನಕ್ಕೆ ತೆರಳಿದ್ದ ದಲಿತರ ಮೇಲೆ ಮಾರಣಾಂತಿಕ ಹಲ್ಲೆ ಮತ್ತು ಜಾತಿ ನಿಂದನೆ, ರಾಯಚೂರು ಜಿಲ್ಲೆ ಸಿರವಾರ ತಾಲ್ಲೂಕಿನ ಹೊಕ್ರಾಣಿ ಗ್ರಾಮದ ಅಶ್ವಿನಿ ಭಲವಾದಿ ಮೇಲೆ ಅತ್ಯಾಚಾರ ಮತ್ತು ಕೊಲೆ, ಸೇರಿದಂತೆ ಇನ್ನೂ ಅನೇಕ ದೌರ್ಜನ್ಯ ಘಟನೆಗಳು ಜರುಗಿದರೂ ಕೂಡ ರಾಜ್ಯದ ಗೃಹ ಸಚಿವರು ಸಂತ್ರಸ್ತ ಕುಟುಂಬಗಳಿಗೆ ಸಾಂತ್ವನ ಹೇಳುವುದಾಗಲಿ ಅಥವಾ ಈ ಪ್ರಕರಣಗಳ ಬಗ್ಗೆ ಕ್ರಮ ಜರುಗಿಸಿಲ್ಲ ಎಂದು ಅವರು ಆರೋಪಿಸಿದರು.

ಮಿಮ್ಸ್ ಜಾಗದ ಒತ್ತುವರಿ ತೆರವು: ನಿವಾಸಿಗಳಿಗೆ ಬದಲಿ ನಿವೇಶನ ನೀಡಲು ಚಲುವರಾಯಸ್ವಾಮಿ ಸೂಚನೆ



ಬೆಂಗಳೂರು, ನ.19: ಮಂಡ್ಯ ನಗರದಲ್ಲಿನ ಮಿಮ್ಸ್ (ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ)ಗೆ ಸೇರಿದ ಜಾಗದ ಒತ್ತುವರಿ ತೆರವುಗೊಳಿಸಲು ಎಲ್ಲಾ ಆಯಾಮಗಳಲ್ಲಿಯೂ ಕೆಲಸ ಮಾಡಿ. ಒತ್ತುವರಿದಾರರಿಗೆ ಬದಲಿ ನಿವೇಶನ ನೀಡಲು ಕ್ರಮ ಕೈಗೊಳ್ಳಿ ಎಂದು ಜಿಲ್ಲಾ ಉಸ್ತುವಾರಿ ಸಚಿವರೂ ಆದ ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ವೈದ್ಯಕೀಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ವಿಕಾಸಸೌಧದ ಕಚೇರಿಯಲ್ಲಿ, ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಸಚಿವರು, ಮಿಮ್ಸ್‌ಗೆ ಸೇರಿದ ಸುಮಾರು 9 ಎಕರೆ ಭೂಮಿಯನ್ನು ತಮಿಳು ಕಾಲೋನಿ ನಿವಾಸಿಗಳು ಒತ್ತುವರಿ ಮಾಡಿಕೊಂಡಿದ್ದಾರೆ. ಈ ಪ್ರಕರಣ ನ್ಯಾಯಾಲಯದಲ್ಲಿದೆ. ಮಿಮ್ಸ್‌ಗೆ ಸೇರಿದ ಜಾಗದ ಕ್ಯಾಂಪಸ್‌ನಲ್ಲಿ ಆರೋಗ್ಯ ಸೇವೆಗಳು ಮುಂದುವರಿಯಬೇಕು ಎಂದರು.

ಒಟ್ಟು 39.33 ಎಕರೆ ಭೂಮಿ ಮಿಮ್ಸ್ ಸಂಸ್ಥೆಗೆ ಸೇರಿದೆ. ಇದರಲ್ಲಿ ಸದ್ಯಕ್ಕೆ 25.08 ಎಕರೆಯಷ್ಟೇ ಮಿಮ್ಸ್ ಉಳಿಸಿಕೊಂಡಿದೆ. ಇನ್ನುಳಿದ 14.24 ಎಕರೆ ಭೂಮಿಯಲ್ಲಿ ಸರ್ಕಾರಿ ಹಾಗೂ ಖಾಸಗಿ ಒತ್ತುವರಿ ನಡುವೆ, ತಮಿಳು ಕಾಲೋನಿಯವರು 9.17 ಎಕರೆ ಒತ್ತುವರಿ ಮಾಡಿದ್ದಾರೆ. 1956ರಿಂದ ತಮಿಳು ಕಾಲೋನಿ ನಿವಾಸಿಗಳು ಇಲ್ಲೇ ವಾಸ ಮಾಡುತ್ತಿದ್ದಾರೆ. ಮಿಮ್ಸ್ ಜಾಗಕ್ಕೆ ಪರ್ಯಾಯವಾಗಿ ಚಿಕ್ಕಮಂಡ್ಯದ 6 ಎಕರೆ ಪ್ರದೇಶದಲ್ಲಿ ಸ್ಲಂ ಬೋರ್ಡ್ ನಿಂದ 576 ಮನೆಗಳನ್ನು ನಿರ್ಮಿಸಿ 4 ವರ್ಷ ಕಳೆದರೂ, ಒತ್ತುವರಿ ನಿವಾಸಿಗಳು ವರ್ಗಾವಣೆ ಯಾಗುತ್ತಿಲ್ಲ. ಮೂಲಸೌಲಭ್ಯ ಕೊರತೆಯ ಜೊತೆಗೆ, ಮಂಡ್ಯ ನಗರದಿಂದ ದೂರದಲ್ಲಿ ಮನೆ ನಿರ್ಮಿಸಲಾಗಿದೆ ಎಂಬೆಲ್ಲಾ ಕಾರಣಗಳು ಸ್ಥಳಾಂತರಕ್ಕೆ ಸಮಸ್ಯೆಯಾಗುತ್ತಿವೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಸಚಿವರು, ಈಗಾಗಲೇ ನಿರ್ಮಿಸಿರುವ ಮನೆಗಳಿಗೆ ಮೂಲಸೌಲಭ್ಯ ಕಲ್ಪಿಸಲು 'ಪ್ಲಾನ್ ಆಫ್ ಆಕ್ಷನ್' ಸಿದ್ಧಪಡಿಸಿಕೊಳ್ಳಿ. ನಿವಾಸಿಗಳ ಮನವೊಲಿಸಿ, ಸ್ಥಳಾಂತರಕ್ಕೆ ಮುಂದಾದ ಕೂಡಲೇ ಮನೆಗಳ ನವೀಕರಣ ಕಾಮಗಾರಿ ಆರಂಭಿಸಿ. ತಮಿಳು ಕಾಲೋನಿಯವರ ಬೇಡಿಕೆಯಂತೆ ನಗರದ 5 ಕಿ.ಮೀ ವ್ಯಾಪ್ತಿಯಲ್ಲಿ ಸೂಕ್ತ ಸ್ಥಳ ಹುಡುಕಿ, ಅವರಿಗೆ ಖಾಲಿ ನಿವೇಶನಗಳನ್ನು ಹಂಚಿಕೆ ಮಾಡಿ. ನಿವೇಶನ ಪಡೆದು ಮಿಮ್ಸ್‌ಗೆ ಸೇರಿದ ಜಾಗದಿಂದ ಸ್ಥಳಾಂತರಗೊಳ್ಳುವ ಬಗ್ಗೆ ಒಪ್ಪಿಗೆ ಪತ್ರ ಪಡೆದುಕೊಳ್ಳಿ. ಈಗಾಗಲೇ ಸ್ಲಂ ಬೋರ್ಡ್‌ನಿಂದ ನಿರ್ಮಿಸಿರುವ ಮನೆಗಳನ್ನು ನವೀಕರಿಸಿ, ಅನ್ಯ ಉದ್ದೇಶಗಳಿಗೆ ಬಳಕೆ ಮಾಡಿಕೊಳ್ಳಿ ಎಂದು ನಿರ್ದೇಶನ ನೀಡಿದರು.



ಪಿಡಿಓ ಬಿ–ಗ್ರೇಡ್ ಹುದ್ದೆ ಉನ್ನತೀಕರಣ: ಖಂಡ್ರೆ ಭರವಸೆ



ಕಲಬುರಗಿ, ನ. 19: ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ (ಬಿ–ಗ್ರೇಡ್) ಹುದ್ದೆ ಉನ್ನತೀಕರಣ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆ ಕುರಿತು ಸಂಬಂಧಪಟ್ಟ ಸಚಿವರು ಹಾಗೂ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ, ಅಧಿಕಾರಿಗಳಿಗೆ ಅನ್ಯಾಯವಾಗದಂತೆ ಸೂಕ್ತ ನಿರ್ಧಾರ ಕೈಗೊಳ್ಳಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿ ರಾಜ್ ಸಚಿವ ಈಶ್ವರ್ ಖಂಡ್ರೆ ಅವರು ಭರವಸೆ ನೀಡಿದರು.

ನಗರದ ಎಸ್.ಬಿ. ಕನ್ವೆನ್‌ಷನ್ ಹಾಲ್‌ನಲ್ಲಿ ಕರ್ನಾಟಕ ರಾಜ್ಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಬಿ–ಗ್ರೇಡ್) ಹುದ್ದೆ ಉನ್ನತೀಕರಣ ಸಂಘದ ವತಿಯಿಂದ ಆಯೋಜಿಸಿದ್ದ ಗ್ರಾಮ ವಿಕಾಸ ಸಂಗಮ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರ ಜನತೆಗೆ ನೀಡಿದ ಭರವಸೆಯಂತೆ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಈ ಯೋಜನೆಗಳಿಂದ ರಾಜ್ಯ ದಿವಾಳಿಯಾಗಲಿದೆ ಎಂದು ವಿರೋಧ ಪಕ್ಷಗಳು ಟೀಕಿಸಿದ್ದವು. ಆದರೆ, ಸರ್ಕಾರದ ಆಡಳಿತ ಯಂತ್ರದ ಭಾಗವಾಗಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಗ್ಯಾರಂಟಿ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿ, ಅವುಗಳ ಯಶಸ್ಸಿಗೆ ಶ್ರಮಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.


ಪಿಡಿಓಗಳ ಜ್ಯೇಷ್ಠತಾ ಪಟ್ಟಿ ಹಾಗೂ ಬಿ–ಗ್ರೂಪ್ ಹುದ್ದೆ ಉನ್ನತೀಕರಣದ ಬೇಡಿಕೆ ಕುರಿತು ಮಾತನಾಡಿದ ಅವರು, ಹಿರಿಯರು ಮತ್ತು ಕಿರಿಯರು ಎಂಬ ತಾರತಮ್ಯವಿಲ್ಲದೆ ಎಲ್ಲರಿಗೂ ಒಂದೇ ರೀತಿಯಲ್ಲಿ ಬಿ–ಗ್ರೂಪ್ ಹುದ್ದೆ ಉನ್ನತೀಕರಣ ಮಾಡುವ ವಿಚಾರಕ್ಕೆ ವೈಯಕ್ತಿಕವಾಗಿ ತಮ್ಮ ವಿರೋಧವಿಲ್ಲ. ಈ ಕುರಿತು ಸಂಬಂಧಪಟ್ಟ ಇಲಾಖೆಯ ಸಚಿವರೊಂದಿಗೆ ಚರ್ಚಿಸಲಾಗುವುದು.

ಹಿರಿಯ ಅಧಿಕಾರಿಗಳು ಹಾಗೂ ಅಡ್ವೊಕೇಟ್ ಜನರಲ್ ಅವರ ಸಭೆ ಕರೆದು ಸಮಸ್ಯೆಯ ಕುರಿತು ಚರ್ಚಿಸಲಾಗುವುದು. ಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೂ ಸಮಾಲೋಚನೆ ನಡೆಸಿ, ಅಧಿಕಾರಿಗಳಿಗೆ ಅನ್ಯಾಯವಾಗದ ರೀತಿಯಲ್ಲಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ದೇವಾಲಯದಲ್ಲಿ ಸಂಕಲ್ಪ, ಮಂಗಳಾರತಿ, ಆಶೀರ್ವಾದ ಎಲ್ಲವೂ ಕನ್ನಡ

'ಕೋದಂಡರಾಮ'ನಿಗೆ ಕನ್ನಡದಲ್ಲೇ ನಿತ್ಯಪೂಜೆ

ಚಿಕ್ಕಮಗಳೂರು, ನ.19: ದೇವರ ಪೂಜೆ ಎಂದರೆ ಸಂಸ್ಕೃತ ಮಂತ್ರ ಎಂಬುದು ಬಹುತೇಕರ ನಂಬಿಕೆ. ಆದರೆ ಚಿಕ್ಕಮಗಳೂರು ಜಿಲ್ಲೆಯ ಹಿರೇಮಗಳೂರಿನ ಕೋದಂಡರಾಮ ದೇವಾಲಯದಲ್ಲಿ ಚಿತ್ರಣವೇ ಬೇರೆ. ಇಲ್ಲಿ ರಾಮನಿಗೆ ಭಕ್ತರ ಹೆಸರಿನಲ್ಲಿ, ಭಕ್ತರ ಭಾಷೆಯಲ್ಲೇ ಅರ್ಚನೆ ನಡೆಯುತ್ತದೆ. ಸಂಕಲ್ಪ, ಮಂಗಳಾರತಿ, ಆಶೀರ್ವಾದ, ಎಲ್ಲವೂ ಕನ್ನಡದಲ್ಲೇ. ಅದಕ್ಕೇ ಭಕ್ತರು ಈ ದೇವರನ್ನು ಪ್ರೀತಿಯಿಂದ ಕನ್ನಡ ರಾಮ ಎಂದು ಕರೆಯುತ್ತಾರೆ. ಈ ದೇವಾಲಯ ಇತರ ದೇವಾಲಯಗಳಿಗಿಂತ ನಿಜಕ್ಕೂ ವಿಭಿನ್ನ.



ಚಿಕ್ಕಮಗಳೂರು ನಗರದಿಂದ ಕೆಲವೇ ಕಿಲೋಮೀಟರ್ ದೂರದಲ್ಲಿರುವ ಹಿರೇಮಗಳೂರು, ಕೋದಂಡರಾಮ ಸ್ವಾಮಿ ದೇವಾಲಯ ದಿಂದಲೇ ಪ್ರಸಿದ್ಧ. ಇಲ್ಲಿ ಶ್ರೀರಾಮ ಕೋದಂಡಪಾಣಿಯಾಗಿ, ಸೀತಾ–ಲಕ್ಷ್ಮಣ ಸಮೇತ ನೆಲೆಸಿದ್ದಾನೆ. ಶತಮಾನಗಳ ಇತಿಹಾಸ ಹೊಂದಿರುವ ಈ ದೇವಾಲಯ, ಪರಶುರಾಮರಿಗೆ ಶ್ರೀರಾಮ ಕೋದಂಡಧಾರಿಯಾಗಿ ದರ್ಶನ ನೀಡಿದ ಸ್ಥಳ ಎಂಬ ಸ್ಥಳೀಯ ನಂಬಿಕೆಯಿಂದ ವಿಶೇಷ ಧಾರ್ಮಿಕ ಮಹತ್ವ ಪಡೆದಿದೆ.

ಈ ದೇವಾಲಯವನ್ನು ನಾಡಿನೆಲ್ಲೆಡೆ ಪರಿಚಯಿಸಿದ್ದು ಇಲ್ಲಿನ ಅರ್ಚಕ ಹಿರೇಮಗಳೂರು ಕಣ್ಣನ್. ಇವರು ಅರ್ಚಕರಷ್ಟೇ ಅಲ್ಲ, ಕವಿ, ಬರಹಗಾರ, ಹಾಸ್ಯ ಭಾಷಣಕಾರ ಮತ್ತು ಕನ್ನಡ ಪ್ರೇಮಿ. ಭಕ್ತರಿಗೆ ಅರ್ಥವಾಗದ ಭಾಷೆಯಲ್ಲಿ ಪೂಜೆ ನಡೆಯುವುದಕ್ಕಿಂತ, ಅವರ ಮಾತೃಭಾಷೆಯಲ್ಲೇ ದೇವರೊಂದಿಗೆ ಸಂವಾದ ನಡೆಯಬೇಕು ಎಂದು ಭಾವಿಸಿ ಪೂಜೆಗೆ ಕನ್ನಡವನ್ನು ತಂದರು.

ಈ ದೇವಾಲಯದ ಇತಿಹಾಸ ಮತ್ತು ಮಹತ್ವದ ಬಗ್ಗೆ ಇಲ್ಲಿನ ಅರ್ಚಕರ ಆದ ವೈಭವ್ ಸಿಂಹ ಮಾತನಾಡಿ, ದೇವರಿಗೆ ಭಾಷೆಯ ಭೇದವಿಲ್ಲ, ಆದರೆ ಭಕ್ತನಿಗೆ ತನ್ನ ಭಾಷೆಯಲ್ಲಿ ಮಾತನಾಡುವ ಆಸೆ ಇರುತ್ತದೆ. ಆ ಆಸೆಯನ್ನು ಈಡೇರಿಸಿರುವ ಹಿರೇಮಗಳೂರಿನ ಕೋದಂಡರಾಮ ದೇವಾಲಯ ಭಕ್ತಿಯ ಕೇಂದ್ರವಷ್ಟೇ ಅಲ್ಲ, ಕನ್ನಡ ಅಭಿಮಾನದ ಕೇಂದ್ರವೂ ಹೌದು ಎಂದರು.

ಹಿರೇಮಗಳೂರು ಕಣ್ಣನ್ ಮಾತನಾಡಿ, ಇಲ್ಲಿ ಭಕ್ತರಿಗೆ ನೀಡುವ ಆಶೀರ್ವಾದವೂ ಇಲ್ಲಿ ಕನ್ನಡದಲ್ಲೇ ಇರುತ್ತದೆ. ಆಶೀರ್ವಾದ ಮಂತ್ರವನ್ನು ಕನ್ನಡದಲ್ಲೇ ನೀಡಲಾಗುತ್ತದೆ. ದೇವರ ಮುಂದೆ ಕನ್ನಡ ಮಾತು ಮೊಳಗುವ ಈ ಸಂಪ್ರದಾಯ, ನಾಡಿನ ಇತರ ದೇವಾಲಯಗಳಿಗೂ ಮಾದರಿ ಎಂದರು.

ನ.26ರಂದು ಸಿದ್ದರಾಮಯ್ಯ ಬೆಂಬಲಿಗರಿಂದ ಮೈಸೂರಿನಲ್ಲಿ ಬೃಹತ್ ಕಾರ್ಯಕ್ರಮ

ಮೈಸೂರು, ನ.19: ಕಾಂಗ್ರೆಸ್ ನೊಳಗೆ ಸಿದ್ದರಾಮಯ್ಯ ಅವರ ಮುಂದಿನ ರಾಜಕೀಯ ನಡೆ ಏನು ಎಂಬ ಚರ್ಚೆ ನಡೆಯುತ್ತಿರುವ ಬೆನ್ನಲ್ಲೇ, ಮೈಸೂರಿನಲ್ಲಿ ದೊಡ್ಡ ಮಟ್ಟದ ಕಾರ್ಯಕ್ರಮ ಆಯೋಜಿಸಲು ಅವರ ಬೆಂಬಲಿಗರು ಸಜ್ಜಾಗಿದ್ದಾರೆ.

ನವೆಂಬರ್ 26ರಂದು ನಡೆಯಲಿರುವ ಸಂವಿಧಾನ ದಿನಾಚರಣೆಗೆ ಅಹಿಂದ ಸಮಾವೇಶದ ಸ್ವರೂಪ ನೀಡುವ ಮೂಲಕ ತಮ್ಮ ಬೆಂಬಲದ ನೆಲೆಯನ್ನು ಮತ್ತೊಮ್ಮೆ ತೋರಿಸಲು ಸಿದ್ದರಾಮಯ್ಯ ಆಪ್ತರು ಕಾರ್ಯತಂತ್ರ ರೂಪಿಸಿದ್ದಾರೆ. ಸಿಎಂ ಸ್ಥಾನದಿಂದ ನಿರ್ಗಮಿಸಿದ ಬಳಿಕವೂ ಪಕ್ಷದೊಳಗಿನ ತಮ್ಮ ಪ್ರಭಾವವನ್ನು ಉಳಿಸಿಕೊಳ್ಳುವುದು ಸಿದ್ದರಾಮಯ್ಯ ಅವರಿಗೆ ಪ್ರಮುಖ ಸವಾಲಾಗಿದೆ ಎಂಬ ಚರ್ಚೆಗಳು ಕೇಳಿಬರುತ್ತಿವೆ. ಇದೇ ಸಂದರ್ಭದಲ್ಲಿ ಅಹಿಂದ ಸಮುದಾಯದ ಜನರನ್ನು ಒಂದೇ ವೇದಿಕೆಗೆ ಕರೆತಂದು ದೊಡ್ಡ ಮಟ್ಟದ ಜನಸಮೂಹದ ಮೂಲಕ ರಾಜಕೀಯ ಸಂದೇಶ ರವಾನಿಸುವ ಪ್ರಯತ್ನ ನಡೆಯುತ್ತಿದೆ. ಕಾರ್ಯಕ್ರಮಕ್ಕೆ ಲಕ್ಷಾಂತರ ಜನರನ್ನು ಸೇರಿಸುವ ಗುರಿಯನ್ನೂ ಹಾಕಿಕೊಳ್ಳಲಾಗಿದೆ.

ಈ ಸಮಾವೇಶಕ್ಕೆ ಕಾಂಗ್ರೆಸ್‌ನ ರಾಷ್ಟ್ರಮಟ್ಟದ ನಾಯಕರನ್ನು ಕರೆತರುವ ಪ್ರಯತ್ನವೂ ನಡೆದಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಹೈಕಮಾಂಡ್ ಪ್ರಮುಖರಿಗೆ ಆಹ್ವಾನ ತಲುಪಿಸಲಾಗಿದೆ. ಅವರ ಭಾಗವಹಿಸುವಿಕೆ ಕಾರ್ಯಕ್ರಮದ ರಾಜಕೀಯ ಮಹತ್ವವನ್ನು ಹೆಚ್ಚಿಸುವ ನಿರೀಕ್ಷೆಯಿದೆ.

ಪೂರ್ವಭಾವಿ ಸಭೆಯಲ್ಲಿ ಸಚಿವರು ಭಾಗಿ: ಇದರ ನಡುವೆ ಬುಧವಾರ ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ನಡೆದ ಸಿದ್ಧತಾ ಸಭೆ ಗಮನ ಸೆಳೆದಿದೆ. ಸಚಿವರಾದ ನರೇಂದ್ರಸ್ವಾಮಿ, ಚಲುವರಾಯಸ್ವಾಮಿ ಮತ್ತು ಶಿವಲಿಂಗೇಗೌಡ ಸೇರಿದಂತೆ ಹಲವು ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಸಭೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮದ ಆಯೋಜನೆ ಕುರಿತು ಚರ್ಚಿಸಿದ್ದಾರೆ.

ಹಾರಕೂಡ ಪೂಜ್ಯ ಡಾ.ಚನ್ನವೀರ ಶಿವಾಚಾರ್ಯರಿಗೆ 64ನೇ ಜನ್ಮೋತ್ಸವ



ತಾಯಿ ಭಾರತಾಂಬೆಯು ತನ್ನ ಮಡಿಲಿನಿಂದ ಅಮೃತಸ್ಯ ಪುತ್ರರನ್ನು ನಿಸರ್ಗಕ್ಕೆ ದಯ ಪಾಲಿಸುತ್ತಾ ಬಂದ ಪುಣ್ಯವತಿ. ಎಲ್ಲ ಮಹಾ ಪುರುಷರು ಸಕಲ ಜೀವ ಕೋಶಗಳಿಗೆ ಕಲ್ಯಾಣವನ್ನು ಬಯಸಿ ಅರ್ಪಣೆಯ ಬದುಕು ಮಾಡಿ ಸಮೀರ್ಪಿತ ರಾಗುತ್ತಾರೆ. ಕೆಲವರು ವಿಜ್ಞಾನಿಗಳು ತತ್ವಜ್ಞಾನಿಗಳು ಸಾಹಿತಿಗಳು, ಆಡಳಿತಗಾರರು, ವೈದ್ಯರು, ಧರ್ಮ ಗುರುಗಳು, ದಾರ್ಶನಿಕರು, ಚಿಂತಕರು ಹೀಗೆ ಅನೇಕ ಆಯಾಮಗಳಲ್ಲಿ ಜಗತ್ತಿಗೆ ಮಾರ್ಗದರ್ಶನ ನೀಡುತ್ತಾರೆ. ಅಂಥವರ ಪಂಕ್ತಿಯಲ್ಲಿ ನವಕಲ್ಯಾಣದ ಸಂಕಲ್ಪದೊಂದಿಗೆ ಬಸವ ಕರ್ಮ ಭೂಮಿಯಿಂದ ಅಮೃತಸ್ಯ ಪುತ

'ಬಿಲಾಂಗಿಂಗ್ ಎ ಜರ್ನಿ ಆಫ್ ಲವ್' ಸುಳ್ಳಿನ ಕಂತೆ

ಸೋನಿಯಾಗೆ ರಾಜಕೀಯ ಲಾಭ ಪಡೆಯುವ ಉದ್ದೇಶ: ಎನ್ ರವಿಕುಮಾರ ವ್ಯಂಗ್ಯ

ಕಲಬುರಗಿ, ನ. 19: ಸೋನಿಯಾ ಗಾಂಧಿ ಅವರ ಜೀವನ ಚರಿತ್ರೆ ಕುರಿತ 'ಬಿಲಾಂಗಿಂಗ್: ಎ ಜರ್ನಿ ಆಫ್ ಲವ್' ಪುಸ್ತಕವು ಸುಳ್ಳಿನ ಕಂತೆಯಾಗಿದೆ. ರಾಜಕೀಯ ಲಾಭ ಪಡೆಯುವ ಉದ್ದೇಶದಿಂದ ಈ ಪುಸ್ತಕ ಬಿಡುಗಡೆ ಮಾಡಿರಬಹುದು ಎಂದು ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್ ಟೀಕಿಸಿದರು.

ಪುಸ್ತಕದಲ್ಲಿರುವ ಕಥೆ ಕೇಳಿ ರಾಹುಲ್ ಗಾಂಧಿ ಅವರೇ ತಲೆ ಚಚ್ಚಿಕೊಂಡಿದ್ದಾರೆ. ಸೋನಿಯಾ ಗಾಂಧಿ ಅವರ ಜೀವನಚರಿತ್ರೆ ಕುರಿತು ನಮ್ಮದೇನೂ ಅಭಿಪ್ರಾಯವಿಲ್ಲ. ಆದರೆ, ಪುಸ್ತಕದಲ್ಲಿ ಸತ್ಯಾಂಶಗಳನ್ನು ಬರೆಯಬೇಕಿತ್ತು. ಸುಳ್ಳುಗಳನ್ನು ಬರೆದು ರಾಜಕೀಯ ಲಾಭ ಪಡೆಯುವ ಪ್ರಯತ್ನ ಸರಿಯಲ್ಲ.

ಗಾಂಧಿ ಕುಟುಂಬಕ್ಕೆ ಅಧಿಕಾರದ ಹುಚ್ಚು ಎಷ್ಟಿದೆ ಎಂದರೆ, ತೆಲಂಗಾಣದ ಹೈದರಾಬಾದನಲ್ಲಿ ವಿದೇಶಿಯರನ್ನು ಕರೆಸಿ ಭಾರತ ಸರ್ಕಾರವನ್ನು ನಿಂತಿಸುವ ಕಾರ್ಯಕ್ರಮ ನಡೆಸಿದ ಕಾಂಗ್ರೆಸ್ ನಾಯಕರು ನೈತಿಕತೆಯನ್ನು ಸಂಪೂರ್ಣ ಕಳೆದುಕೊಂಡು ಬೀದಿಗೆ ಬಿದ್ದಿದ್ದಾರೆ. ಇನ್ನು ರಾಹುಲ್ ಗಾಂಧಿ ಮತ್ತೆ ವಿದೇಶಿ ನೆಲದಲ್ಲಿ ನಿಂತು ಮತ್ತೆ ಭಾರತವನ್ನು ಟೀಕಿಸುವ ದುಸ್ಸಾಹಸ ಮಾಡುತ್ತಿದ್ದಾರೆ. ಅಧಿಕಾರ ಕಳೆದುಕೊಂಡ ಗಾಂಧಿ ಕುಟುಂಬಕ್ಕೆ ಹುಚ್ಚು ಹಿಡಿದು ಮೈಪರಚಿಕೊಳ್ಳುವುದೊಂದೇ ಬಾಕಿ ಎಂದು ಮೂದಲಿಸಿದರು.

ರಾಜ್ಯ ಬರದಿಂದ ಈಗಾಗಲೇ ತತ್ತರಿಸಿ ಹೋಗಿದೆ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ ಜಾನು ವಾರುಗಳ ಮಾರಾಟವಾಗ್ತಿವೆ. ರಾಜ್ಯದ ರೈತರು ಸಂಕಷ್ಟದಲ್ಲಿದ್ದಾರೆ ರಾಜ್ಯದಲ್ಲಿ ಮಂತ್ರಿಗಳು ಓಡಾಡಿ ಗಮನಿಸುತ್ತಿಲ್ಲ. ಸಿಎಂ ಡಿಕೆ ಶಿವಕುಮಾರ್, ಮಂತ್ರಿ ಗಳು, ಬರಿ ಡೆಲ್ಲಿ ಟ್ರಿಪ್‌ನಲ್ಲಿ ಬ್ಯುಸಿಯಾಗಿದ್ದಾರೆಂದು ಸರಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಮುಖ್ಯಮಂತ್ರಿಗಳು ಮತ್ತು ತಮ್ಮ ಸಚಿವ ಸಂಪುಟದ ಸಚಿವರು ಶಾಸಕರುಗಳು ಬೆಂಗಳೂರು ಟೂ ಡೆಲ್ಲಿ, ಡೆಲ್ಲಿ ಟೂ ಬೆಂಗಳೂರು ಟ್ರಿಪ್‌ನಲ್ಲಿ ಬ್ಯುಸಿಯಾಗಿದ್ದಾರೆ, ಸಂಕಷ್ಟದಲ್ಲಿರುವ ಜನರ ಕೈಗೆ ಮಂತ್ರಿಗಳು, ಶಾಸಕರು ಸಿಗುತ್ತಿಲ್ಲ, ರೈತರಿಗೆ ಈ ಸರ್ಕಾರ ಮೋಸ ಮಾಡುತ್ತಿದೆ ಎಂದು ಆರೋಪಿಸಿದರು.

ಸರಕಾರದ ನಡೆಯನ್ನು ಖಂಡಿಸಿ ಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆಗೆ ಮುಂದಾಗಿದೆ. ಈ ನಿಟ್ಟಿನಲ್ಲಿ ಇದೇ ತಿಂಗಳು 23, 24, 25 ರಂದು ರಾಜ್ಯಾದ್ಯಂತ ಹೋರಾಟಕ್ಕೆ ಕರೆ ನೀಡಲಾಗಿದೆ. ಕುಡಿಯುವ ನೀರಿಗಾಗಿ, ದನಕರುಗಳಿಗೆ ಮೇವು ಪೂರೈಕೆಗಾಗಿ ಜನರ ಉದ್ಯೋಗಕ್ಕಾಗಿ ರಾಜ್ಯಾದ್ಯಂತ ಹೋರಾಟ ಮಾಡುತ್ತೇವೆಂದು ತಿಳಿಸಿದರು. ಬರದಿಂದ ತತ್ತರಿಸಿರುವ ರೈತ ರಿಗೆ ಮಧ್ಯಂತರ ಪರಿಹಾರವಾಗಿ ಹಣ ಕೊಡ್ತಿವಿ ಅಂತಾ ಸುಳ್ಳು ಹೇಳುತ್ತಿದ್ದಾರೆ ಇದು ರೈತರಿಗೆ ಕಾಂಗ್ರೆಸ್ ಸರ್ಕಾರ ಮಾಡುತ್ತಿರುವ ಮೋಸವಾಗಿದೆ ಎಂದು ದೂರಿದರು.

ಸೋನಿಯಾ ಗಾಂಧಿ ಅವರ ಆತ್ಮಚರಿತ್ರೆ ಪುಸ್ತಕ ಬಿಡುಗಡೆ ಸಮಯದಲ್ಲಿ ಮಾಜಿ ಸಿಎಂ ಸಿದ್ದರಾಮಯ್ಯ ಅವರಿಗೆ 5ನೇ ಸಾಲಿನಲ್ಲಿ ಕುಳ್ಳಿರಿಸಿ ಅವಮಾನ ಮಾಡಿದ್ದಾರೆ. ಒಬ್ಬ ಮಾಜಿ ಸಿಎಂ, ನಾಡುಕಂಡ ಉತ್ತಮ ಮುಖ್ಯಮಂತ್ರಿ ಅವರನ್ನು 6ನೇ ಸಾಲಿನಲ್ಲಿ ಕುಳ್ಳಿರಿಸಿರೋದು ಎಷ್ಟು ಸರಿ..? ಇದರಿಂದ ರಾಜ್ಯ ದಲ್ಲಿರೋ ಕುರುಬ ಸಮುದಾಯ ಏನು ಭಾವಿಸಬೇಕು? ಎಂದು ಕಿಡಿಕಾರಿದರು.

ಕಾಂಗ್ರೆಸ್‌ನಲ್ಲಿ ಸಿದ್ದರಾಮಯ್ಯ ಅವರ ಮರ್ಯಾದೆ ಮೂರು ಫೈಸೆ ಇಲ್ಲ, ಇಷ್ಟು ದೊಡ್ಡ ಅಪಮಾನ ಮಾಡಿರೋದು ಎಷ್ಟು ಸರಿ ರಾಹುಲ್ ಗಾಂಧಿಗೆ ಸಾಮಾನ್ಯ ಜ್ಞಾನವೂ ಸಹ ಇಲ್ಲ, ರಾಹುಲ್ ಗಾಂಧಿ ಕೂಡಲೇ ಕ್ಷಮೇ ಕೇಳಬೇಕು ಎಂದು ಒತ್ತಾಯಿಸಿದರು.



ಈ ಹಿಂದೆ 4 ಕ್ಷೇತ್ರಗಳ ವಿಧಾನ ಪರಿಷತ್ ಸದಸ್ಯರ ಚುನಾವಣೆಯಲ್ಲಿ ಹೇಗೆ ಎನ್‌ಡಿಎ ಗೆಲುವ ಸಾಧಿಸಿ ದೆಯೋ ಹಾಗೆಯೇ ಅಭ್ಯರ್ಥಿ ಗೆಲ್ಲೋದುನಿಶ್ಚಿತ ಹಿರಿಯೂರು ಟಿಕೆಟ್ ವಿಚಾರಕ್ಕೆ ಸಂಬಂಧಿಸಿದಂತೆ ನಮ್ಮ ರಾಷ್ಟ್ರೀಯ ಅಧ್ಯಕ್ಷರು, ಶಾ, ನರೇಂದ್ರ ಮೋದಿ ಯವರು ಎನ್‌ಡಿಎ ಅಹವಾಲು ಕೇಳಿಟಿಕೆಟ್ ಫೈನಲ್ ಮಾಡ್ತಾರೆ ಬಿಜೆಪಿ, ಜೆಡಿಎಸ್ ಇಬ್ಬರಲ್ಲಿ ಒಬ್ಬರಿಗೆ ಸಿಗುತ್ತೆ ಯಾರಿಗೆ ಕೊಟ್ರು ಕೆಲಸ ಮಾಡ್ತಿವಿ ಎಂದು ಹೇಳಿದರು.

ಭೀಕರ ಬರಗಾಲ: ಬೀದರ್‌ಗೆ ಆತಂಕದ ಸ್ಥಿತಿ

ಕಾರಂಜಾ ಜಲಾಶಯ ನೀರಿನ ಮಟ್ಟ ತೀವ್ರ ಕುಸಿತ

ಬೀದರ್, ನ. 19: ಈ ಬಾರಿ ಗಡಿನಾಡು ಬೀದರ್‌ನಲ್ಲಿ ಭೀಕರ ಬರಗಾಲ ಹಿನ್ನೆಲೆಯಲ್ಲಿ ಜಿಲ್ಲೆಯ ಜೀವನಾಡಿ ಕಾರಂಜಾ ಜಲಾಶಯ ನೀರಿನ ಮಟ್ಟ ತೀವ್ರ ಗತಿಯಲ್ಲಿ ಕುಸಿಯುತ್ತಿದ್ದು ಬಹುತೇಕ ಖಾಲಿ ಖಾಲಿಯಾಗಿದೆ. ಈಗಾಗಲೇ ಜನ, ಜಾನುವಾರುಗಳು, ಪಕ್ಷಿಗಳಿಗೆ ಹನಿ ನೀರಿಗೂ ಹಾಹಾಕಾರ ಶುರುವಾಗಿದ್ದು, ಚಳಿಗಾಲದಲ್ಲೇ ಕಾರಂಜಾ ಜಲಾಶಯ ಖಾಲಿ ಖಾಲಿಯಾಗಿದೆ. ಮುಂದೆ ಬೇಸಿಗೆಯಲ್ಲಿ ನೀರಿಲ್ಲದೇ ಜೀವಿಗಳು ಪ್ರಾಣ ಕಳೆದುಕೊಳ್ಳುವಂಥ ಪರಿಸ್ಥಿತಿ ನಿರ್ಮಾಣವಾಗಿದೆ.

ಕಳೆದ ವರ್ಷ ಈ ಸಮಯದಲ್ಲಿ ಸಂಪೂರ್ಣವಾಗಿ ಭರ್ತಿಯಾಗಿದ್ದ 7.69 ಟಿಎಂಸಿ ಸಾಮರ್ಥ್ಯದ ಕಾರಂಜಾ ಜಲಾಶಯ ಈ ಬಾರಿ ಬಹುತೇಕ ಖಾಲಿ ಖಾಲಿ ಯಾಗಿದೆ. ಸಂಪೂರ್ಣವಾಗಿ ಮಳೆ ಕೈಕೊಟ್ಟ ಪರಿಣಾಮ ಖಾಲಿ ಖಾಲಿಯಾಗಿದ್ದು, ಕಾರಂಜಾ ಜಲಾಶಯದಲ್ಲಿ ಸದ್ಯ ಕೇವಲ 3.5 ಟಿಎಂಸಿ ನೀರು ಮಾತ್ರ ಸಂಗ್ರಹವಿದೆ. ಇದ್ರಲ್ಲಿ 1.5 ಟಿಎಂಸಿ ನೀರು ಡೆಡ್ ಸ್ಟೋರೆಜ್ ಇದ್ದು, ಹೀಗಾಗಿ ಕೇವಲ 2 ಟಿಎಂಸಿ ನೀರು ಮಾತ್ರ ಬಳಕೆಗೆ ಯೋಗ್ಯ ವಾಗಿದೆ.

ಕಾರಂಜಾ ಜಲಾಶಯದಲ್ಲಿ ದಿನೇ ದಿನೇ ನೀರು ಖಾಲಿಯಾಗುತ್ತಿರುವ ಪರಿಣಾಮ ಔರಾದ್‌ಗೆ ಕುಡಿಯುವ ನೀರು ಬಂದ್ ಮಾಡಿದ್ದು, ಸದ್ಯ ಬೀದರ್, ಭಾಲ್ಕಿ, ಹುಮ್ನಾಬಾದ್, ಚಿಟ್ಟಗುಪ್ಪ ತಾಲೂಕುಗಳಿಗೆ ಮಾತ್ರ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ.

ಇನ್ನೂ ಕೆಲವೇ ತಿಂಗಳಲ್ಲಿ ನೂರಕ್ಕೆ ನೂರು ಕಾರಂಜಾ ಜಲಾಶಯದ ನೀರು ಖಾಲಿಯಾಗಲಿದ್ದು, ಈಗಾಗಲೇ ಜಿಲ್ಲೆಯ ನೀರಿನ ಮೂಲಗಳಾದ ಕೆರೆಗಳು, ಬಾವಿಗಳು ಬತ್ತಿ ಹೋಗಿ ಹಾಹಾಕಾರ ಶುರುವಾಗಿದೆ. ಹೀಗಾಗಿ ಈ ಬಾರಿ ಬೇಸಿಗೆಯಲ್ಲಿ ಮೊದಲ ಬಾರಿಗೆ ಹನಿ ನೀರಿಗಾಗಿ ಅತಿ ಭೀಕರ ಬರಗಾಲ ತಾಂಡವವಾಡುತ್ತಿದ್ದು, ಮೊದಲ ಬಾರಿಗೆ ಕಾರಂಜಾ ಜಲಾಶಯದಲ್ಲಿನ ತಳಹದಿಯ ಕಲ್ಲುಗಳು ಕಾಣುತ್ತಿವೆ.

ಬಿಜೆಪಿ ವಿರುದ್ಧ ಸುಳ್ಳು ಪ್ರಕರಣ ದಾಖಲು ಪೊಲೀಸ್ ಠಾಣೆಯ ಮುಂದೆ ಪ್ರತಿಭಟನೆ



ಬೀದರ ಜಿಲ್ಲೆಯಲ್ಲಿ ಬಿಜೆಪಿ ಕಾರ್ಯಕರ್ತರ ವಿರುದ್ಧ ಸುಳ್ಳು ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. ಪ್ರಕರಣ ಹಿಂತೆಗೆದುಕೊಳ್ಳಬೇಕೆಂದು ಆಗ್ರಹಿಸಿ ಮಾಜಿ ಶಾಸಕ ಪ್ರಕಾಶ ಖಂಡ್ರೆ ನೇತೃತ್ವದಲ್ಲಿ ಬಿಜೆಪಿ ಕಾರ್ಯಕರ್ತರು ಭಾಲ್ಕಿ ಪೊಲೀಸ್ ಠಾಣೆಯ ಮುಂದೆ ಧರಣಿ–ಪ್ರತಿಭಟನೆ ನಡೆಸಿದರು.

ಬೀದರ, ನ. 19: ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಸಿದ್ದೇಶ್ವರ ವಾಡಿ ಗ್ರಾಮದಲ್ಲಿ ಎರಡು ಗುಂಪುಗಳ ನಡುವೆ ಹೊಲದ ದಾರಿ ವಿಷಯಕ್ಕೆ ಸಂಬಂಧಿಸಿದಂತೆ ನಡೆದ ಸಣ್ಣ ಗಲಾಟೆಗೆ ಸಂಬಂಧಿಸಿದಂತೆ ರಾಜಕೀಯ ದುರುದ್ದೇಶದಿಂದ ಒಂದು ಗುಂಪಿನವರನ್ನು ಮಾತ್ರ ಪೊಲೀಸ್ ಠಾಣೆಗೆ ಕರೆಸಿ ಅವರ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಲಾಗಿದೆ ಎಂದು ಆರೋಪಿಸಿ ಮಾಜಿ ಶಾಸಕ ಪ್ರಕಾಶ ಖಂಡ್ರೆ ನೇತೃತ್ವದಲ್ಲಿ ಬಿಜೆಪಿ ಕಾರ್ಯಕರ್ತರು ಧರಣಿ ಸತ್ಯಾಗ್ರಹ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಮುಖಂಡರೂ ಆದ ಮಾಜಿ ಶಾಸಕ ಪ್ರಕಾಶ ಖಂಡ್ರೆ, ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ, 'ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಬೀದರ್ ಜಿಲ್ಲೆಯಲ್ಲಿ ಸಚಿವ ಈಶ್ವರ ಖಂಡ್ರೆ ರಾಜಕೀಯ ಪ್ರಭಾವ ಬಳಸಿ ಬಿಜೆಪಿ ಕಾರ್ಯಕರ್ತರನ್ನು ಗುರಿಯಾಗಿಸಿ ಕೊಂಡು ಸುಳ್ಳು ಪ್ರಕರಣಗಳನ್ನು ದಾಖಲಿಸುವ ಮೂಲಕ ಕಾರ್ಯಕರ್ತರ ಧೈರ್ಯ ಕುಗ್ಗಿಸುವ ಪ್ರಯತ್ನ ನಡೆಯುತ್ತಿದೆ' ಎಂದು ದೂರಿದರು.

ಎಷ್ಟೇ ಸುಳ್ಳು ಪ್ರಕರಣಗಳನ್ನು ದಾಖಲಿಸಿದರೂ ಬಿಜೆಪಿ ಕಾರ್ಯಕರ್ತರು ಎದೆಗುಂದುವುದಿಲ್ಲ, ಅನ್ಯಾಯದ ವಿರುದ್ಧದ ಹೋರಾಟದಿಂದ ಹಿಂದೆ ಸರಿಯುವುದಿಲ್ಲ ಎಂಬ ಸ್ಪಷ್ಟ ಸಂದೇಶವನ್ನು ಇಂದಿನ ಹೋರಾಟದ ಮೂಲಕ ನೀಡುತ್ತಿದ್ದೇವೆ ಪೊಲೀಸರು ಒತ್ತಡಕ್ಕೆ ಒಳಗಾಗಿ ಒಂದು ಗುಂಪಿನ ಮೇಲೆ ಜಾಮೀನು ರಹಿತ, ಇನ್ನೊಂದು ಗುಂಪಿನ ಮೇಲೆ ಜಾಮೀನು ನೀಡಬಹುದಾದ ಪ್ರಕರಣ ದಾಖಲಿಸಿದ್ದಾರೆ ಎಂದರು.

ಈ ಪ್ರಕರಣದಲ್ಲಿ ಪಕ್ಷಪಾತಿಯಾಗಿ, ಕಾನೂನು ವಿರುದ್ಧವಾಗಿ ನಡೆದು ಕೊಂಡಿರುವ ಪೊಲೀಸ್ ಅಧಿಕಾರಿಯ ಮೇಲೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ನಂತರ ಸ್ಥಳಕ್ಕೆ ಭೇಟಿ ಡಿವೈಎಸ್ಪಿ ಬಲ್ಲಪ್ಪ ನಂದಗಾವಿ ಅವರು ಮನವಿ ಪತ್ರ ಸ್ವೀಕರಿಸಿ, ಪ್ರಕರಣದ ತನಿಖೆ ನಡೆಸಲಾಗುವುದು ಎಂದು ಭರವಸೆ ನೀಡಿದ ನಂತರ ಸುಮಾರು ಎರಡು ಗಂಟೆಗಳ ಧರಣಿ ಸತ್ಯಾಗ್ರಹವನ್ನು ಹಿಂಪಡೆಯಲಾಯಿತು.

ಇಂದು ಕಲಬುರಗಿಯಲ್ಲಿ ನಾರಿಶಕ್ತಿ ಸಂಗಮ ಮಹಿಳಾ ಸಮ್ಮೇಳನ: ಬಸವರಾಜ ದೇಶಮುಖ



ಕಲಬುರಗಿಯಲ್ಲಿ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷೆ ಡಾ.ದಾಕ್ಷಾಯಣಿ ಅವ್ವಾಜಿ ಅವರು, ಡಿ.20ರಂದು ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘ ಆಯೋಜಿಸಿರುವ 'ನಾರಿ ಶಕ್ತಿ ಸಂಗಮ' ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ ಮಾಡಿದರು. ಬಸವರಾಜ ದೇಶಮುಖ್ ಮುಂತಾದವರಿದ್ದರು.

ಕಲಬುರಗಿ, ನ. 19: ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘ, ಜಿಲ್ಲಾ ಘಟಕದ ವತಿಯಿಂದ ವಿವಿಧ ಮಹಿಳಾ ಹಾಗೂ ಇತರ ಸಂಘಟನೆಗಳ ಸಹಯೋಗದಲ್ಲಿ ಡಿ.20ರಂದು ನಗರದ ಶರಣಬಸವೇಶ್ವರ ಕೆರೆಯ ಸಮೀಪದ ಡಾ. ಬಸವರಾಜಪ್ಪ ಅಪ್ಪ ಮೆಮೋರಿಯಲ್ ಹಾಲ್‌ನಲ್ಲಿ 'ನಾರಿ ಶಕ್ತಿ ಸಂಗಮ' ಮಹಿಳಾ ಸಮ್ಮೇಳನ ಮತ್ತು ಕನ್ನಡ ಸಾಂಸ್ಕೃತಿಕ ಹಬ್ಬ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳು ಹಾಗೂ ಕ್ಷೇತ್ರಗ ಳಲ್ಲಿ ಗಣನೀಯ ಸಾಧನೆ ಮಾಡಿರುವ ಸಾಧಕರಿಗೆ 'ವೀರ ಕನ್ನಡಿಗ' ಹಾಗೂ 'ವೀರಕನ್ನಡತಿ' ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಆಹಾರ ಮೇಳ, ವಿವಿಧ ಮಾರಾಟ ಮಳಿಗೆಗಳು, ವಸ್ತು ಪ್ರದರ್ಶನ ಹಾಗೂ 'ಸಖೀ ಸೌರಭ' ಕಾರ್ಯ ಕ್ರಮವೂ ನಡೆಯಲಿದೆ.

ನಗರದಲ್ಲಿ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ ಮಾತೋಶ್ರೀ ಡಾ. ದಾಕ್ಷಾಯಿಣಿ ಅವ್ವಾಜಿ ಅವರು ನೆರವೇರಿಸಿದರು. ಬಸವರಾಜ ದೇಶಮುಖ, ಡಾ. ಅಲ್ಲಮ ಪ್ರಭು ದೇಶಮುಖ ಹಾಗೂ ಭಾಲ್ಕಿ ಶ್ರೀಗಳು ಉಪಸ್ಥಿತರಿದ್ದರು.

ರಾಜ್ಯ ಸರ್ಕಾರಿ ನೌಕರರ ಸಂಘ, ಕರ್ನಾಟಕ ಗೃಹ ನಿರ್ಮಾಣ ಮಂಡಳಿ, ಶ್ರೀ ಶರಣಬಸವೇಶ್ವರ ಸಂಸ್ಥಾನ, ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘ, ಪ್ರಾಥಮಿಕ, ಪ್ರೌಢ, ದೈಹಿಕ ಹಾಗೂ ಜಿಪಿಟಿ ಶಿಕ್ಷಕರ ಸಂಘಗಳು, ಸರ್ಕಾರಿ ಮತ್ತು ಅನುದಾನಿತ ಕನ್ನಡ ಹಾಗೂ ಉರ್ದು ಶಿಕ್ಷಕರ ಸಂಘಗಳು, ಎಸ್‌ಸಿ–ಎಸ್‌ಟಿ ಶಿಕ್ಷಕರ ಕ್ಷೇಮಾಭಿವೃದ್ಧಿ ಸಂಘ, ಕನ್ನಡಪರ ಸಂಘಟನೆಗಳು, ಮಹಿಳಾ ಸ್ವಸಹಾಯ ಸಂಘ ಗಳು, ಹೇಮರೆಡ್ಡಿ ಮಲ್ಲಮ್ಮ ಸ್ವಸಹಾಯ ಸಂಘ, ರೈತ ಸಂಘಟನೆಗಳು, ಶಿಕ್ಷಣ ಮತ್ತು ಆರೋಗ್ಯ ಇಲಾಖೆ ಸಂಘಟನೆಗಳು, ಆಶಾ ಹಾಗೂ ಅಂಗನವಾಡಿ ಕಾರ್ಯಕ ರ್ತೆಯರ ಸಂಘಟನೆಗಳು, ಸರ್ಕಾರಿ ಮತ್ತು ಅರೆ ಸರ್ಕಾರಿ ಸಂಘಟನೆಗಳು, ಎಬಿವಿಪಿ, ಮಹಾನಗರ ಪಾಲಿಕೆ ಕಾರ್ಮಿಕ ಸಂಘಟನೆ, ಆರೋಗ್ಯ ಬ್ಲಡ್‌ಕಾಂಪೊನೆಂಟ್ಸ್ ಹಾಗೂ ಕನಸು ಸೇವಾ ಸಂಸ್ಥೆ ಸೇರಿ ದಂತೆ ಅನೇಕ ಸಂಘಟನೆಗಳು ಕಾರ್ಯ ಕ್ರಮದಲ್ಲಿ ಭಾಗವಹಿಸಲಿವೆ.

ಆಹಾರ ಮೇಳ ಹಾಗೂ ವಿವಿಧ ಮಾರಾಟ ಮಳಿಗೆ ಗಳನ್ನು ಸ್ಥಾಪಿಸಲು ಆಸಕ್ತರು 741117 6831, 98456 95023, 95916 32789, 99007 61665 ಹಾಗೂ 99803 91324 ಸಂಖ್ಯೆಗಳ ಸಂಪರ್ಕಿಸಬಹುದು.

ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಎಲ್ಲ ಸಂಘಟನೆ ಗಳು ಕೈಜೋಡಿಸಬೇಕು ಎಂದು ಸಂಘದ ಜಿಲ್ಲಾ ಅಧ್ಯಕ್ಷರು ಹಾಗೂ ರಾಜ್ಯ ಉಪಾಧ್ಯಕ್ಷರಾದ ಶ್ರೀಮತಿ ನಂದಿನಿ ಸನಬಾಳಾ ಮತ್ತು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಸವಿತಾ ಬಿ. ನಾಸಿ ತಿಳಿಸಿದ್ದಾರೆ.

ಔರಾದ್ ಬಂದ್ ಸಂಪೂರ್ಣ ಯಶಸ್ವಿ

ಕುಡಿಯುವ ನೀರಿಗೆ ಆಗ್ರಹಿಸಿ ಖಾಲಿ ಕೊಡ ಹಿಡಿದು ಪ್ರತಿಭಟನೆ



ಬೀದರ್, ನ. 19: ಜಿಲ್ಲೆಯ ಔರಾದನಲ್ಲಿ ಕುಡಿಯುವ ನೀರಿನ ತೀವ್ರ ಕೊರತೆ ಉಂಟಾಗಿದ್ದು, ತಾಲೂಕು ನಾಗರಿಕ ಸಮಿತಿ ವತಿಯಿಂದ ಕರೆ ನಿಡಿರುವ ಔರಾದ್ ಬಂದ್ ಸಂಪೂರ್ಣವಾಗಿ ಯಶಸ್ವಿಯಾಗಿದೆ.

ಪಟ್ಟಣಕ್ಕೆ ಕುಡಿಯುವ ನೀರು ಪೂರೈಸಲು ವಿಫಲವಾದ ಪಟ್ಟಣ ಪಂಚಾಯತ್ ಅಧಿಕಾರಿಗಳಿಗೆ, ತಾಲೂಕು ಆಡಳಿತ ಹಾಗೂ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಬಸವೇಶ್ವರ ವೃತದ ಬಳಿ ಕುಳಿತುಕೊಂಡು ಪ್ರತಿಭಟನೆ ನಡೆಸಿದರು.

ಹದಿನೈದಕ್ಕೂ ಹೆಚ್ಚು ಸಂಘಟನೆಗಳಿಂದ ಹಾಗೂ ಮಾಜಿ ಶಾಸಕ ಗುಂಡಪ್ಪ ವಕೀಲ ಹೋರಾಟಕ್ಕೆ ಬೆಂಬಲ ನೀಡಿದ್ದಾರೆ. ಖಾಲಿ ಕೊಡ ಹಿಡಿದುಕೊಂಡು ಹೆಣ್ಣು ಮಕ್ಕಳ ರಸ್ತೆಗಿಳಿದು ಹೋರಾಟ ನಡೆಸಿದ್ದಾರೆ. ಜಿಲ್ಲಾಧಿಕಾರಿ ಲಿಖಿತರೂಪದಲ್ಲಿ ಪತ್ರ ಬರೆದು ಕೊಡುವ ತನಕ ಹೋರಾಟ ನಿಲ್ಲಿಸುವುದಿಲ್ಲ ನಿರಂತರವಾಗಿ ನಡೆಯುತ್ತದೆ ಎಂದು ಆಕ್ರೋಶ ಹೊರಹಾಕಿದರು.

ನಮ್ಮ ಬೇಡಿಕೆ ಈಡೇರುವ ತನಕ ಹೋರಾಟ ಹಿಂದೆ ಪಡೆಯಲ್ಲ, ಶಾಲೆ– ಕಾಲೇಜು, ವ್ಯಾಪಾರ ವಹಿವಾಟು ಸಂಪೂರ್ಣ ಬಂದ್ ಆಗಿದೆ. ತಾಲೂಕು ನಾಗರಿಕ ಸಂಘರ್ಷ ಸಮಿತಿ ಅಧ್ಯಕ್ಷ ಡಾಃ ಧನರಾಜ ರಾಗಾ, ಬಸವರಾಜ ಶಟಕಾರ, ಅನಿಲ ದೇವಕತೆ, ಕಲ್ಲಪ್ಪ ದೇಶಮುಖ, ರಾಹುಲ ಖಂದಾರೆ, ಸುನೀಲ ಮಿತ್ರಾ, ರತ್ನದೀಪ ಕಸ್ತೂರೆ ಸೇರಿದಂತೆ ಇನ್ನಿತರರು ಹೋರಾಟದಲ್ಲಿ ಭಾಗವಹಿಸಿದ್ದಾರೆ.

ತುಂಗಭದ್ರಾ ನೀರು ಸ್ಥಗಿತ ಮುಂದೂಡಿಕೆ: 4 ಜಿಲ್ಲೆ ರೈತರಿಗೆ ನ.28ರ ವರೆಗೆ ಕಾಲುವೆಗಳಿಗೆ ನೀರು– ಸಚಿವ ತಂಗಡಗಿ

ರಾಯಚೂರು, ನ. 19: ರೈತರ ಹಿತ ಕಾಪಾಡುವ ದೃಷ್ಟಿಯಿಂದ ತುಂಗಭದ್ರಾ ಅಣೆಕಟ್ಟೆಯಿಂದ ರಾಯಚೂರು, ಕೊಪ್ಪಳ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಯಲ್ಲಿನ ಬೆಳೆದು ನಿಂತ ಬೆಳೆಗಳಿಗೆ ನವೆಂಬರ್ 28ರವರೆಗೆ ನೀರು ಒದಗಿಸಲು ತೀರ್ಮಾನಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರೂ ಆದ ನೀರಾವರಿ ಸಲಹಾ ಸಮಿತಿ ಅಧ್ಯಕ್ಷರೂ ಆದ ಶಿವರಾಜ್.ತಂಗಡಗಿ ಅವರು ಹೇಳಿದ್ದಾರೆ.


ಆಂಧ್ರ ಪ್ರದೇಶ ಪಾಲಿನ ನೀರು ಬಳಕೆಗೆ ಆ ರಾಜ್ಯ ಒಪ್ಪಿಲ್ಲ. ಹೀಗಾಗಿ ನಮ್ಮ ಪಾಲಿನ ನೀರು ಬಳಕೆಗೆ ಸರ್ಕಾರ ಮುಂದಾಗಿದೆ. ಈ ಸಂಬಂಧ ತುರ್ತಾಗಿ ಸಲಹಾ ಸಮಿತಿ ಸಭೆ ಕರೆದು ಈ ಕುರಿತು ನಿರ್ಧರಿಸಲಾಗಿದೆ ಎಂದು ತಿಳಿಸಿದ ಸಚಿವರು, ಬೆಳೆದು ನಿಂತ ಬೆಳೆಗೆ ನ

"ಸಹಕಾರಂ ಗೆಲ್ಗೆ

ಸಹಕಾರಂ ಬಾಳ್ಗೆ"



ಸನ್ಮಾನ್ಯ ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪಮುಖ್ಯಮಂತ್ರಿಗಳು, ಕರ್ನಾಟಕ ಸರಕಾರ






ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ, ಬೆಂಗಳೂರು
ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿಯಮಿತ, ಬೆಂಗಳೂರು
ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನಿಯಮಿತ, ಮಂಗಳೂರು

ನೇತೃತ್ವದಲ್ಲಿ

ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ಸಹಕಾರಿ ಯೂನಿಯನ್ ನಿಯಮಿತ
ದಕ್ಷಿಣ ಕನ್ನಡ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟ ನಿಯಮಿತ, ಮಂಗಳೂರು
ನವೋದಯ ಗ್ರಾಮ ವಿಕಾಸ ಚಾರಿಟೆಬಲ್ ಟ್ರಸ್ಟ್ ರಿ., ಮಂಗಳೂರು
ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಕೃಷಿ ಪತ್ತಿನ ಸಹಕಾರ ಸಂಘಗಳು
ಪಟ್ಟಣ ಸಹಕಾರ ಬ್ಯಾಂಕ್‌ಗಳು/ ಸೌಹಾರ್ದ ಸಹಕಾರ ಸಂಘಗಳು
ಎಲ್ಲಾ ವಿಧದ ಸಹಕಾರ ಸಂಘಗಳು ಹಾಗೂ ಸಹಕಾರ ಇಲಾಖೆ

ಸಹಯೋಗದೊಂದಿಗೆ



ಸನ್ಮಾನ್ಯ ಡಾ| ಜಿ. ಪರಮೇಶ್ವರ
ಮಾನ್ಯ ಉಪಮುಖ್ಯಮಂತ್ರಿಗಳು
ಕರ್ನಾಟಕ ಸರಕಾರ

ಸಮಾರಂಭದ ಉದ್ಘಾಟನೆ



ಸನ್ಮಾನ್ಯ ಶ್ರೀ ಲಕ್ಷ್ಮಣ ಸಂಗಪ್ಪ ಸವದಿ
ಮಾನ್ಯ ಸಹಕಾರ ಸಚಿವರು
ಕರ್ನಾಟಕ ಸರಕಾರ

ಸಹಕಾರ ಮಾಣಿಕ್ಯ ಪ್ರಶಸ್ತಿ ಪ್ರದಾನ



ಸನ್ಮಾನ್ಯ ಶ್ರೀ ಯು.ಟಿ. ಖಾದರ್ ಫರೀದ್
ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರು ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವರು, ಕರ್ನಾಟಕ ಸರಕಾರ

73ನೇ
ಸಹಕಾರ ಸಪ್ತಾಹ-2026

ಉತ್ತಮ ಸಹಕಾರ ಸಂಘಗಳಿಗೆ ಪ್ರಶಸ್ತಿ ಪ್ರದಾನ



ಸನ್ಮಾನ್ಯ ಶ್ರೀ ಜಿ.ಟಿ. ದೇವೇಗೌಡ
ಮಾನ್ಯ ಶಾಸಕರು ಹಾಗೂ ಅಧ್ಯಕ್ಷರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು

ಉದ್ಘಾಟನೆ



ಸನ್ಮಾನ್ಯ ಡಾ| ಎಂ.ಎನ್. ರಾಜೇಂದ್ರ ಕುಮಾರ್
ಅಧ್ಯಕ್ಷರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು
ಅಧ್ಯಕ್ಷರು, ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನಿ., ಮಂಗಳೂರು
ಮೆನೇಜಿಂಗ್ ಟ್ರಸ್ಟಿ, ನವೋದಯ ಗ್ರಾಮ ವಿಕಾಸ ಚಾರಿಟೆಬಲ್ ಟ್ರಸ್ಟ್ (ರಿ.), ಮಂಗಳೂರು.

ವಿಷಯ: "ಪರಿಸರ ಸಂರಕ್ಷಣೆ, ಅಂಗ ಸಮಾನತೆ ಮತ್ತು ವಿಶ್ವ ಶಾಂತಿಗಾಗಿ ಸಹಕಾರ ಸಂಸ್ಥೆಗಳು"

ನಾಳೆ
ತಾ. 20-11-2026ನೇ ಶುಕ್ರವಾರ
ಸಮಯ: ಪೂರ್ವಾಹ್ನ 10.00 ಗಂಟೆಗೆ
ಸ್ಥಳ: ಕರಾವಳಿ ಉತ್ಸವ ಮೈದಾನ, ಮಂಗಳೂರು

ಸಪ್ತಾಹ ಧ್ಯೇಯ: ಸಹಕಾರ ಸಂಸ್ಥೆಗಳ ಬೆಳವಣಿಗೆಯಲ್ಲಿ ಉತ್ತಮ ಪರಿಸರ, ತಂತ್ರಜ್ಞಾನ, ಕೌಶಲ್ಯಾಧಾರಿತ, ವೃತ್ತಿಪರ ಸೇವೆ.

ಪೂರ್ವಾಹ್ನ 9.00 ಗಂಟೆಗೆ

ಸಹಕಾರ ಮೆರವಣಿಗೆ

ಸುಮಾರು ೬೦ ಟ್ಯಾಬ್ಲೋಗಳ ಮೂಲಕ ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕಿನ ಆವರಣದಿಂದ ಕರಾವಳಿ ಉತ್ಸವ ಮೈದಾನದವರೆಗೆ

ಉತ್ತಮ ಸ್ವ-ಸಹಾಯ ಸಂಘಗಳಿಗೆ ಪುರಸ್ಕಾರ



ಸನ್ಮಾನ್ಯ ಶ್ರೀ ಕೋಡ ಶ್ರೀನಿವಾಸ ಪೂಜಾರಿ
ಮಾನ್ಯ ಸಚಿವರು
ಉಡುಪಿ – ಚಿಕ್ಕಮಗಳೂರು ಲೋಕಸಭಾ ಕ್ಷೇತ್ರ

ಪದ್ಮ ಪ್ರಶಸ್ತಿ ಪುರಸ್ಕೃತ ಸಾಧಕರಿಗೆ ಸನ್ಮಾನ



ಸನ್ಮಾನ್ಯ ಶ್ರೀ ಕ್ಯಾಪ್ಟನ್ ಬ್ರಿಜೇಶ್ ಚೌಟ
ಮಾನ್ಯ ಸಂಸದರು
ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರ

ಸಹಕಾರಿ ಧುರೀಣರಿಗೆ ಸನ್ಮಾನ




ಸನ್ಮಾನ್ಯ ಶ್ರೀ ಡಿ. ವೇದವ್ಯಾಸ ಕಾಮತ್
ಮಾನ್ಯ ಶಾಸಕರು
ಮಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರ

ಮುಖ್ಯ ಅತಿಥಿಗಳು




ಸನ್ಮಾನ್ಯ ಡಾ| ಭರತ್ ಶೆಟ್ಟಿ ವೈ
ಮಾನ್ಯ ಶಾಸಕರು
ಮಂಗಳೂರು ಉತ್ತರ ವಿಧಾನಸಭಾ ಕ್ಷೇತ್ರ



ಸನ್ಮಾನ್ಯ ಶ್ರೀ ಯಶ್‌ಪಾಲ್ ಎ. ಸುವರ್ಣ
ಮಾನ್ಯ ಶಾಸಕರು, ಉಡುಪಿ ವಿಧಾನಸಭಾ ಕ್ಷೇತ್ರ ಹಾಗೂ ಅಧ್ಯಕ್ಷರು, ಜಿ.ಕೆ. ಮತ್ತು ಉಡುಪಿ ಜಿಲ್ಲಾ ಸಹಕಾರಿ ಸಿಬ್ಬಂದಿ ಸಹಕಾರಿ ಸಂಘ ನಿ., ಮಂಗಳೂರು

ಮುಖ್ಯ ಅತಿಥಿಗಳು



ಸನ್ಮಾನ್ಯ ಶ್ರೀ ಬಸ್ ಪಿ.ನೋಜ
ಮಾನ್ಯ ಶಾಸಕರು
ಕರ್ನಾಟಕ ವಿಧಾನಪರಿಷತ್




ಸನ್ಮಾನ್ಯ ಶ್ರೀ ಮುಜುನಾಥ ಭಂಡಾರಿ
ಮಾನ್ಯ ಶಾಸಕರು
ಕರ್ನಾಟಕ ವಿಧಾನಪರಿಷತ್



ಸನ್ಮಾನ್ಯ ಶ್ರೀ ಹರೀಶ್ ಕುಮಾರ್ ಬಂಗೇರಾ
ಮಾನ್ಯ ಶಾಸಕರು, ಕರ್ನಾಟಕ ವಿಧಾನಪರಿಷತ್

ಗೌರವ ಉಪಸ್ಥಿತಿ



ಸನ್ಮಾನ್ಯ ಶ್ರೀ ರವಿರಾಜ್ ಹೆಗ್ಡೆ
ಅಧ್ಯಕ್ಷರು, ದಕ್ಷಿಣ ಕನ್ನಡ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟ ನಿ. ಮಂಗಳೂರು



ಶ್ರೀ ಎನ್.ಜಿ. ಕೆಬ್ಬೆಳ್ಳಿಯರ ಭಾಃಆಸೇ
ಕಾರ್ಯದರ್ಶಿ, ಸಹಕಾರ ಇಲಾಖೆ,
ಕರ್ನಾಟಕ ಸರಕಾರ, ಬೆಂಗಳೂರು

ವಿಶೇಷ ಆಹ್ವಾನಿತರು



ಶ್ರೀ ವೆಂಕಟೇಶ್ ಎಂ.ವಿ. ಭಾಃಆಸೇ
ಸಹಕಾರ ಸಂಘಗಳ ನಿಬಂಧಕರು,
ಕರ್ನಾಟಕ ಸರಕಾರ, ಬೆಂಗಳೂರು



ಶ್ರೀ ದರ್ಶನ್ ವಿ.ಜಿ. ಭಾಃಆಸೇ
ಜಿಲ್ಲಾಧಿಕಾರಿಗಳು,
ದಕ್ಷಿಣ ಕನ್ನಡ ಜಿಲ್ಲೆ



ಶ್ರೀ ಸುಧೀರ್ ಕುಮಾರ್ ರೆಡ್ಡಿ ಭಾಪೊಸೇ
ಸೂಪರಿಂಟೆಂಡೆಂಟ್ ಆಫ್ ಪೊಲೀಸ್, ಮಂಗಳೂರು

ಆದರದ ಸ್ವಾಗತ ಕೋರುವ

ಶ್ರೀ ಶಶಿಕುಮಾರ್ ರೈ ಬಾಲ್ಯೋಟ್ಟು
ಅಧ್ಯಕ್ಷರು, ದಕ್ಷಿಣ ಕನ್ನಡ ಜಿಲ್ಲಾ ಸಹಕಾರಿ ಯೂನಿಯನ್ ನಿ., ಮಂಗಳೂರು

ಶ್ರೀ ಐಕಳಬಾವ ದೇವಿಪ್ರಸಾದ್ ಶೆಟ್ಟಿ ಬೆಳಪು
ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು

ಶ್ರೀ ಕೆ.ಎಸ್. ನವೀನ್
ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು

ಶ್ರೀ ಪ್ರಸಾದ್ ರೆಡ್ಡಿ ಕೆ.
ಸಹಕಾರ ಸಂಘಗಳ ಜಂಟಿ ನಿಬಂಧಕರು
ದ್ವಿತೀಯ ಸ್ಥಾನ, ದ್ವಿತೀಯ

ಶ್ರೀ ಜಿ. ಜಯಕರ ಶೆಟ್ಟಿ ಇಂದ್ರಾಳಿ
ಅಧ್ಯಕ್ಷರು, ಉಡುಪಿ ಜಿಲ್ಲಾ ಸಹಕಾರಿ ಯೂನಿಯನ್ ನಿ.
ಉಡುಪಿ

ಡಾ. ಸುರೇಶ್ ಗೌಡ
ವ್ಯವಸ್ಥಾಪಕ ನಿರ್ದೇಶಕರು (ಪ್ರಭಾರ), ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು

ಶ್ರೀ ಶಶಿಧರ್ ಹೆ.
ಸಹಕಾರ ಸಂಘಗಳ ಎಲ್ಲಿ ನಿಬಂಧಕರು
ದ್ವಿತೀಯ ಸ್ಥಾನ, ದ್ವಿತೀಯ

ಶ್ರೀ ರಮೇಶ್ ವಿಜಿ.ಎನ್.
ಸಹಕಾರ ಸಂಘಗಳ ಉಪ ನಿಬಂಧಕರು
ದಕ್ಷಿಣ ಕನ್ನಡ ಜಿಲ್ಲೆ

ಶ್ರೀಮತಿ ಲಾವಣ್ಯ ಕೆ.ಆರ್.
ಸಹಕಾರ ಸಂಘಗಳ ಉಪ ನಿಬಂಧಕರು
ಉಡುಪಿ ಜಿಲ್ಲೆ

ಶ್ರೀ ಕೆ. ಗೋಪಾಲಕೃಷ್ಣ ಭಟ್
ಮುಖ್ಯ ಕಾರ್ಯನಿರ್ವಹಣಾಧಿಕಾರಿ (ಪ್ರಭಾರ)
ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನಿಯಮಿತ, ಮಂಗಳೂರು

ಶ್ರೀಮತಿ ಪೂರ್ಣಿಮಾ ಶೆಟ್ಟಿ
ಮುಖ್ಯ ಕಾರ್ಯನಿರ್ವಹಣಾಧಿಕಾರಿ,
ನವೋದಯ ಗ್ರಾಮ ವಿಕಾಸ ಚಾರಿಟೆಬಲ್ ಟ್ರಸ್ಟ್ ರಿ., ಮಂಗಳೂರು

ಸಮಸ್ತ ಸಹಕಾರ ಬಾಂಧವರಿಗೆ ಹಾರ್ದಿಕ ಶುಭಾಶಯಗಳು